ಸಂಪುಟ: 05 ಸಂಚಿಕೆ: 49 ಪುಟಗಳು: 08 ಶನಿವಾರ 03 ಮೇ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ
ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಜೀವನವನ್ನು ನಿರ್ದೇಶಿಸುವ ಮಿತಿಗಳಿವೆ: ನೀವು ತುಂಬಾ ಭಾರವನ್ನು ಮಾತ್ರ ಎತ್ತಬಹುದು; ನೀವು ತುಂಬಾ ವೇಗವಾಗಿ ಕಲಿಯಬಹುದು; ನೀವು ತುಂಬಾ ಕಷ್ಟಪಟ್ಟು ಕೆಲಸ ಮಾಡಬಹುದು; ನೀವು ತುಂಬಾ ದೂರ ಮಾತ್ರ ಹೋಗಬಹುದು!

## ಡಿಜಿಟಲ್ ಜನಗಣತಿ; 15 ದಿನದಲ್ಲಿ ಮುಗಿಸೋ ಪ್ಲಾನ್

• ಉದಯವಾಹಿನಿ, ನವದೆಹಲಿ

ಕೇಂದ್ರ ಸರ್ಕಾರ ರಾಷ್ಟ್ರೀಯ ಜನಗಣತಿ ನಡೆಸಲು ತೀರ್ಮಾನ ಮಾಡಿದ್ದು, ದೇಶಾದ್ಯಂತ ಇನ್ನೂ 2-3 ತಿಂಗಳಲ್ಲಿ ಅದು ಆರಂಭವಾಗೋ ಸಾಧ್ಯತೆ ಇದೆ. ಈ ಬಾರಿ ಡಿಜಿಟಲ್ ಜನಗಣತಿ ನಡೆಸುವ ಕೇಂದ್ರ ಸರ್ಕಾರ, ಆಧಾರ್, ಬಯೋಮೆಟ್ರಿಕ್, ಆರ್ಟಿಫಿಷಿಯಲ್ ಇಂಟಲಿಜೆನ್ಸ್ ಬಳಸಿ ಜನಗಣತಿ ಮಾಡುತ್ತಿದೆ. ಈ ಬಾರಿ ರಾಷ್ಟ್ರೀಯ ಜನಗಣತಿಯಲ್ಲಿ ಪ್ರಮುಖವಾಗಿ ಎಲ್ಲಾರ ಜಾತಿ, ಧರ್ಮದ ವಿವರ ಸಂಗ್ರಹ ಮಾಡಲಾಗುತ್ತಿದೆ. ಜನಗಣತಿಯ ವೇಳೆ ಜಾತಿ, ಧರ್ಮದ ಕಲಂನಲ್ಲಿ ಜಾತಿ, ಧರ್ಮದ ವಿವರ ದಾಖಲಿಸಲಾಗುತ್ತದೆ. ಜನಗಣತಿಯ ವೇಳೆ ಎರಡು ಕಲಂಗಳನ್ನು ಹೊಸದಾಗಿ ಸೇರ್ಪಡೆ ಮಾಡಲಾಗುತ್ತದೆ. ಅದರಲ್ಲಿ ಎಲ್ಲಾರ ಧರ್ಮ, ಜಾತಿಯ ವಿವರ ಜನಗಣತಿಯ ವೇಳೆ ಸಂಗ್ರಹ ಮಾಡಲಾಗುತ್ತದೆ. ಮುಸ್ಲಿಂರಿಗೆ ಧರ್ಮದ ಆಧಾರದ ಮೇಲೆ ಮೀಸಲಾತಿ ನೀಡಲು ಸಾಧ್ಯವಿಲ್ಲ ಎಂದು ಕೇಂದ್ರ ಸರ್ಕಾರ ಹೇಳಿದೆ. ಹೀಗಾಗಿ ಮುಸ್ಲಿಂರಲ್ಲೂ ವೈವಿಧ್ಯಮಯವಾದ ಜಾತಿಗಳು ಇದ್ದು, ಮುಸ್ಲಿಂರ ಜಾತಿ ವಿವರ ಕೂಡ ಜನಗಣತಿ ವೇಳೆ ಸಂಗ್ರಹಿಸುವ ಸಾಧ್ಯತೆ ಇದೆ. ಈ ಬಾರಿ ಕೇಂದ್ರ ಸರ್ಕಾರ ಡಿಜಿಟಲ್ ಜನಗಣತಿ ಮಾಡಲು ಮುಂದಾಗಿದ್ದು, 15 ದಿನದಲ್ಲಿ ದೇಶಾದ್ಯಂತ ಜನಗಣತಿ ಪೂರ್ಣಗೊಳಿಸುವ ಯೋಜನೆ ರೂಪಿಸಲಾಗುತ್ತಿದೆ. ಇದಕ್ಕೆ ಡೆಪ್ಯುಟೇಷನ್ ಮೇಲೆ ಜನಗಣತಿ ನಡೆಸಲು ವಿವಿಧ ಇಲಾಖೆಗಳ ಅಧಿಕಾರಿಗಳನ್ನು ನಿಯೋಜಿಸಲಾಗುವುದು. ಎಐ, ಡಿಜಿಟಲ್ ಜನಗಣತಿಯನ್ನು ಅತ್ಯಂತ ವೇಗವಾಗಿ ಪೂರ್ಣಗೊಳಿಸಲಾಗುತ್ತದೆ. ಆದರೆ ಸಂಗ್ರಹಿಸಿದ ಜನಗಣತಿ ಡಾಟಾವನ್ನು ವಿಶ್ಲೇಷಿಸಲು ಸಾಕಷ್ಟು ಸಮಯಾವಕಾಶ ಬೇಕಾಗುತ್ತದೆ.

## ಪಾಟೀಲ್ ರಾಜೀನಾಮೆ ಅಂಗೀಕರಿಸಲು ಸಾಧ್ಯವಿಲ್ಲ


• ಉದಯವಾಹಿನಿ, ಬೆಂಗಳೂರು

ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಹಾಕಿದ ಸವಾಲನ್ನು ಪ್ರತಿಷ್ಠೆಯಾಗಿ ತೆಗೆದುಕೊಂಡು ಶಿವಾನಂದ ಪಾಟೀಲ್ ಅವರು ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ ಎಂದು ವಿಧಾನಸಭೆ ಸ್ಪೀಕರ್ ಯುಟಿ ಖಾದರ್ ಅವರು ಶುಕ್ರವಾರ ಹೇಳಿದ್ದಾರೆ. ಪಾಟೀಲ್ ಅವರು ಷರತ್ತುಬದ್ಧ ರಾಜೀನಾಮೆ ನೀಡಿದ್ದಾರೆ. ಇನ್ನೊಬ್ಬ ಶಾಸಕರ ರಾಜೀನಾಮೆ ಅಂಗೀಕರಿಸಿದ ನಂತರ ನನ್ನ ರಾಜೀನಾಮೆ ಅಂಗೀಕರಿಸುವಂತೆ ಮನವಿ ಮಾಡಿದ್ದಾರೆ. ಆದರೆ ಯತ್ನಾಳ್ ಅವರು ಇನ್ನೂ ರಾಜೀನಾಮೆ ನೀಡಿಲ್ಲ. ಹೀಗಾಗಿ ಪಾಟೀಲ್ ಅವರ ರಾಜೀನಾಮೆ ಅಂಗೀಕರಿಸಲು ಸಾಧ್ಯವಿಲ್ಲ ಎಂದು ಸ್ಪೀಕರ್ ಸ್ಪಷ್ಟಪಡಿಸಿದರು. ವೈಯಕ್ತಿಕ ವಿಚಾರಗಳನ್ನು ರಾಜಕಾರಣದಲ್ಲಿ ಬಳಸಬೇಕೋ ಇಲ್ಲವೊ ಅನ್ನೋದು ಅವರವರ ವಿವೇಚನೆ ಬಿಟ್ಟಿರುವ ವಿಚಾರ. ಎಲ್ಲಾವೂ ಬದಲಾಗುತ್ತಿರುವ ಹಾಗೆ ರಾಜಕಾರಣವೂ ಬದಲಾಗುತ್ತಿದೆ, ಪಾಟೀಲ್ ಸಲ್ಲಿಸಿರುವ ರಾಜೀನಾಮೆ ಪತ್ರವನ್ನು ಪರಿಶೀಲನೆ ಮಾಡುತ್ತೇನೆ ಎಂದು ಖಾದರ್ ಹೇಳಿದರು. ಯತ್ನಾಳ್ ಅವರು ಇತ್ತೀಚೆಗೆ ಶಿವಾನಂದ ಪಾಟೀಲ್ ಅವರನ್ನು ಉದ್ದೇಶಿಸಿ, ಅವರು ಪಾಟೀಲರೇ ಅಲ್ಲ, 'ರಾಜಕೀಯಕ್ಕಾಗಿ ಪಾಟೀಲ್' ಅಂತ ಸರ್‌ನೇಮ್ ಸೇರಿಸಿದ್ದು, ಅಪ್ಪನಿಗೆ ಹುಟ್ಟಿದವ ಆದರೆ ಶುಕ್ರವಾರದೊಳಗೆ ರಾಜೀನಾಮೆ ನೀಡಿ ಚುನಾವಣೆಯಲ್ಲಿ ನನ್ನ ಮುಂದೆ ಸ್ಪರ್ಧಿಸಲಿ ಎಂದು ಸವಾಲು ಹಾಕಿದ್ದರು. ಆ ಸವಾಲು ಸ್ವೀಕರಿಸಿದ ಶಿವಾನಂದ ಪಾಟೀಲ್ ಅವರು ರಾಜೀನಾಮೆ ನೀಡಿದ್ದಾರೆ. ಬಸನಗೌಡ ಪಾಟೀಲ್ ಯಾತ್ನಾಳ್ ರಾಜೀನಾಮೆ ನೀಡಿದ ನಂತರ ತಮ್ಮ ರಾಜೀನಾಮೆ ಅಂಗೀಕರಿಸಬೇಕು ಎಂದು ಶಿವಾನಂದ ಪಾಟೀಲ್ ಷರತ್ತು ಹಾಕಿದ್ದಾರೆ.

## ನವಿಲು ಕುಣಿಯುವುದನ್ನು ನೋಡಿ ಕೆಂಬೂತ ಪುಕ್ಕ ತೆರೆಯಿತು

• ಉದಯವಾಹಿನಿ, ಬೆಂಗಳೂರು

ನಿಮ್ಮ ತಪ್ಪುಗಳನ್ನು ತಿದ್ದಿಕೊಳ್ಳುವುದರ ಬದಲು ಬಿಜೆಪಿ, ಆರ್.ಎಸ್.ಎಸ್ ಗೆ 'ನಾವು ತಿರುಗಿ ಬಿದ್ದರೆ ನಿಮ್ಮ ಅಡ್ರೆಸ್ಸೇ ಸಿಗುವುದಿಲ್ಲ' ಎಂಬ ನಿಮ್ಮ ಹೇಳಿಕೆ 'ನವಿಲು ಕುಣಿಯುವುದನ್ನು ನೋಡಿ ಕೆಂಬೂತ ಪುಕ್ಕ ತೆರೆಯಿತು' ಎಂಬಂತಾಗಿದೆ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕುರಿತು ಬಿಜೆಪಿ ವ್ಯಂಗ್ಯವಾಡಿದೆ. ಹುಬ್ಬಳ್ಳಿಯಲ್ಲಿ ಕೇಂದ್ರ ಸರ್ಕಾರ ಬೆಲೆ ಏರಿಕೆ ನೀತಿ ವಿರುದ್ಧ ಕಾಂಗ್ರೆಸ್ ರ‍್ಯಾಲಿ ನಡೆಸಿತ್ತು. ರ‍್ಯಾಲಿ ಉದ್ದೇಶಿಸಿ ಮಾತನಾಡಿದ್ದ ಮಲ್ಲಿಕಾರ್ಜುವನ ಖರ್ಗೆಯವರು, ನಮ್ಮ ಕಾರ್ಯಕರ್ತರಿಗೆ ಒಂದೇ ಒಂದು ಸೂಚನೆ ಕೊಟ್ಟರೆ ರಾಜ್ಯದಲ್ಲಿ ಬಿಜೆಪಿ, ಆರ್.ಎಸ್.ಎಸ್ ಬಾಲ ಬಿಚ್ಚಲು ಬಿಡುವುದಿಲ್ಲ. ನಮ್ಮನ್ನು ಕೆಣಕಬೇಡಿ, ನಾವು ತಿರುಗಿಬಿದ್ದರೆ ನಿಮ್ಮ ಅಡ್ರೆಸ್ಸೇ ಸಿಗುವುದಿಲ್ಲ ಎಂದು ಗುಡುಗಿದ್ದರು. ಈ ಹೇಳಿಕೆ ಪ್ರತಿಕ್ರಿಯೆ ನೀಡಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು, ಬಿಜೆಪಿ ಹಾಗೂ ಆರ್.ಎಸ್.ಎಸ್ ಸಂಘಟನೆಗಳ ಕುರಿತು ನೀವು ವಾರ್ನಿಂಗ್ ನೀಡಿರುವ ಪರಿ ಗಮನಿಸಿದರೆ ಸರ್ವಾಧಿಕಾರಿ ಸಂಸ್ಕೃತಿಯ ಭಾಗವೆಂಬಂತೆ ಭಾಸವಾಗುತ್ತಿದೆ. ನಿಮ್ಮ ಮಾತಿನ ದಾಟಿ, ನಿಮ್ಮ ಹಿರಿತನ ಹಾಗೂ ಅನುಭವದ ಘನತೆಯನ್ನು ಕುಗ್ಗಿಸಿದೆ. ರಾಷ್ಟ್ರೀಯ ಪಕ್ಷದ ಅಧ್ಯಕ್ಷರಾಗಿ ಯುವ ಕಾಂಗ್ರೆಸ್ ಕಾರ್ಯಕರ್ತರೊಬ್ಬರ ರೀತಿಯಲ್ಲಿ ಹೇಳಿಕೆ ನೀಡಿರುವ ರೀತಿ ಅತ್ಯಂತ ವಿಪರ್ಯಾಸವೇ ಸರಿ ಎಂದು ಕಿಡಿಕಾರಿದ್ದಾರೆ. ಕರ್ನಾಟಕದಲ್ಲಿ ಪಾಳೆಗಾರಿಕೆ ರಾಜಕಾರಣಕ್ಕೆ, ಸರ್ವಾಧಿಕಾರಿ ಆಡಳಿತಕ್ಕೆ ಅವಕಾಶ ಇಲ್ಲ ಎಂಬುದರ ಇತಿಹಾಸ ನಿಮಗೆ ಹಾಗೂ ನಿಮ್ಮ ಪಕ್ಷದವರಿಗೆ ನೆನಪಿರಲಿ ಎಂದು ಎಚ್ಚರಿಸಿದ್ದಾರೆ.



■ ಅಂಥ ದೊಡ್ಡ ರಾಷ್ಟ್ರದ ಎದುರು ನಾವು ಯುದ್ಧಕ್ಕೆ ಸಿದ್ಧರಿಲ್ಲ, ಟ್ರಂಪ್ ಮುಂದೆ ಪಾಕ್ ಗೋಳಾಟ! ■ ಭಾರತ ಪ್ರತೀಕಾರ ತೀರಿಸಿಕೊಳ್ಳದೇ ಬಿಡಲ್ಲ ಎಂದು ಶಪಥ ■ ಟ್ರಂಪ್ ಮುಂದೆ ಪಾಕಿಸ್ತಾನ ರಾಯಭಾರಿ ರಿಜ್ವಾನ್ ಸಯೀದ್ ಶೇಖ್ ಮನವಿ

# ಭಾರತದ ಗೌಪ್ಯ ನಡೆಗೆ ಪಾಕಿಸ್ತಾನ ತತ್ತರ



### ನಗರಗಳ ವಾಯುಸೀಮೆ ಬಂದ್ ಮಾಡಿದ ಪಾಕ್!

ಭಾರತದ ಸಂಭಾವ್ಯ ವಾಯುದಾಳಿಗೆ ಬೆಚ್ಚಿರುವ ಪಾಕಿಸ್ತಾನ ರಾಜಧಾನಿ ಇಸ್ಲಾಮಾಬಾದ್, ಲಾಹೋರ್, ಕರಾಚಿ ಸೇರಿ ಇತರೆ ಪ್ರಮುಖ ನಗರಗಳ ವಾಯುಸೀಮೆಯಲ್ಲಿ ನಿತ್ಯ 4 ಗಂಟೆ ಕಾಲ ಸಂಚಾರವನ್ನು ನಿಷೇಧಿಸಿದೆ. ಪಾಕಿಸ್ತಾನ ಜಲಗಡಿಯಿಂದ ಕೇವಲ 80 ನಾಟಿಕಲ್ ಮೈಲು ದೂರದಲ್ಲಿ ನೌಕಾಪಡೆ ತನ್ನ ಅಭ್ಯಾಸವನ್ನು ನಡೆಸುತ್ತಿದ್ದು, ಇದರ ಜೊತೆ ಐಎನ್‌ಎಸ್ ಸೂರತ್ ಗುಜರಾತ್‌ನ ಹಜೀರಾ ಪೋರ್ಟ್‌ನಲ್ಲಿ ನಿಯೋಜಿಸಲಾಗಿದ್ದು, ಭಾರತದ ಪ್ಲಾನಿಂಗ್ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಹಿನ್ನೆಲೆ ಪಾಕಿಸ್ತಾನ ಕೂಡ ಗಡಿಯಲ್ಲಿ ಹೈ ಅಲರ್ಟ್ ಆಗಿದ್ದು, ಭಾರೀ ಪ್ರಮಾಣದಲ್ಲಿ ಯೋಧರು, ಶಸ್ತ್ರಾಸ್ತ್ರಗಳನ್ನು, ವಾಯು ರಕ್ಷಣಾ ವ್ಯವಸ್ಥೆಯನ್ನು ನಿಯೋಜಿಸಿದೆ. ಸಮಾರಾಭ್ಯಾಸವನ್ನು ಕೂಡ ನಡೆಸುತ್ತಿದೆ.

• ಉದಯವಾಹಿನಿ, ಹೊಸದಿಲ್ಲಿ

ಪಹಲ್ಗಾಮ್‌ನಲ್ಲಿ ಉಗ್ರರ ದಾಳಿ ನಡೆದು ಇಲ್ಲಿಗೆ ಸರಿಯಾಗಿ 10 ದಿನ ಆಗಿದ್ದು, ಭಾರತ - ಪಾಕಿಸ್ತಾನ ನಡುವೆ 'ಸಮರ' ಸನ್ನಿವೇಶ ಹೆಚ್ಚುತ್ತಿದೆ. ಈಗಾಗಲೇ ಹಲವು ರಾಜತಾಂತ್ರಿಕ ಕ್ರಮಗಳ ಮೂಲಕ ಪಾಕಿಸ್ತಾನಕ್ಕೆ ಶಾಕ್ ನೀಡಿರುವ ಭಾರತ ಸೇನಾ ಕ್ರಮಕ್ಕೆ ತಡ ಮಾಡುತ್ತಿದೆ. ಭಾರತದ ಗೌಪ್ಯ ನಡೆಗೆ ಕಂಗಾಲಾಗಿರುವ ಪಾಕಿಸ್ತಾನ ಜಗತ್ತಿನ ಮೊರೆ ಹೋಗಿದೆ. ನಮಗೆ ಯುದ್ಧ ಬೇಡ, ಭಾರತದಂತಹ ದೊಡ್ಡ ರಾಷ್ಟ್ರದೊಂದಿಗೆ ಯುದ್ಧಕ್ಕೆ ನಾವು ಸಿದ್ಧರಿಲ್ಲ ಎಂದು ಪಾಕಿಸ್ತಾನ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮುಂದೆ ಅಂಗಾಲಾಚಿದೆ. ಇದರ ನಡುವೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಒಬ್ಬರನ್ನೂ ಬಿಡಲ್ಲ, ಹುಡುಕಿ ಹುಡುಕಿ ಹೊಡಿತೀವಿ ಎಂದು ನೇರ ಎಚ್ಚರಿಕೆಯನ್ನು ನೀಡಿರುವುದು ಕುತೂಹಲ ಕೆರಳಿಸಿದೆ. ಈ ಬೆಳವಣಿಗೆಗಳ ಮಧ್ಯೆ ಜಾಗತಿಕ ಸಮುದಾಯ ರಾಜತಾಂತ್ರಿಕ ಮಾರ್ಗಗಳ ಮೂಲಕ ಉದ್ವಿಗ್ನ ಪರಿಸ್ಥಿತಿಯನ್ನು ತಿಳಿಗೊಳಿಸುವಂತೆ ಉಭಯ ದೇಶಗಳ ಮೇಲೆ ಒತ್ತಡ ಹೇರುವ ಪ್ರಯತ್ನ ಮಾಡಿದೆ. ಆದರೆ, ಭಾರತ ಪ್ರತೀಕಾರ ತೀರಿಸಿಕೊಳ್ಳದೇ ಬಿಡಲ್ಲ ಎಂದು ಶಪಥ ಮಾಡಿರುವುದು ಪಾಕಿಸ್ತಾನದ ಆತಂಕವನ್ನು ಹೆಚ್ಚಿಸಿದೆ.


ಹೌದು, ಮೋದಿ ಸರ್ಕಾರ ಸೇನೆಗೆ ಫ್ರೀ ಹ್ಯಾಂಡ್ ನೀಡಿದ್ದರು ಪಹಲ್ಗಾಮ್ ಪ್ರತೀಕಾರಕ್ಕೆ ಭಾರತ ತಡ ಮಾಡುತ್ತಿದೆ. ಇದರಿಂದ ಏನೋ ದೊಡ್ಡದಾಗಿ ಪ್ಲಾನ್ ಮಾಡಲಾಗುತ್ತಿದೆ ಎಂದು ಪಾಕಿಸ್ತಾನ ಆತಂಕಗೊಂಡಿದೆ. ಭಾರತದ ಸಂಭವನೀಯ ಪ್ರತೀಕಾರದ ದಾಳಿಗೆ ಬೆದರಿ ಬೆಂಡಾಗಿರುವ ಪಾಕಿಸ್ತಾನವು ಸಹಾಯ ಕೋರಿ ಅಮೆರಿಕಾ ಅಧ್ಯಕ್ಷರ ಮೊರೆ ಹೋಗಿದೆ. ನಮಗೆ ಶಾಂತಿ ಬೇಕು. ಯುದ್ಧ ಬೇಡ. ಅದು ಕೂಡ ದೊಡ್ಡ ರಾಷ್ಟ್ರದೊಂದಿಗೆ ಯುದ್ಧಕ್ಕೆ ನಾವು ಸಿದ್ಧರಿಲ್ಲ. ಘನತೆಯ ಜತೆಗೆ ಶಾಂತಿ ಸ್ಥಾಪನೆಗೆ ನಮಗೆ ನೆರವಾಗಿ ಎಂದು ಅಮೆರಿಕಾದಲ್ಲಿರುವ ಪಾಕ್ ರಾಯಭಾರಿ ರಿಜ್ವಾನ್ ಸಯೀದ್ ಶೇಖ್ ಡೊನಾಲ್ಡ್ ಟ್ರಂಪ್ ಅವರಲ್ಲಿ ಮನವಿ ಮಾಡಿಕೊಂಡಿರುವುದು ಗಮನ ಸೆಳೆದಿದೆ. ಇದರ ನಡುವೆ ಈ ಬಗ್ಗೆ ಮೊದಲ ಬಹಿರಂಗ ಹೇಳಿಕೆ ನೀಡಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, ಉಗ್ರರ ಹುಟ್ಟಡಗಿಸದೇ ಬಿಡುವುದಿಲ್ಲ. ಹುಡುಕಿ ಹುಡುಕಿ ಹೊಡೆಯುತ್ತೇವೆ ಎಂದು ಗುಡುಗಿದ್ದಾರೆ. ಇದರಿಂದ ಭಯಗೊಂಡಿರುವ ಪಾಕಿಸ್ತಾನ ಭಾರತದ ಎದುರು ಸೋಲು ಒಪ್ಪಿಕೊಂಡಂತೆ ಕಾಣುತ್ತಿದೆ.

### ಇಂಥ ಟೈಮ್‌ನಲ್ಲೂ ಹಳೇ ಚಾಳಿ ಬಿಡದ ಪಾಕ್!

ಇನ್ನು, ಈ ಹೊತ್ತಲ್ಲೂ ತನ್ನ ಚಾಳಿಯನ್ನು ಪಾಕಿಸ್ತಾನ ಮುಂದುವರೆಸಿದೆ. ಟ್ರಂಪ್ ಮುಂದೆ ಪಾಕಿಸ್ತಾನ ರಾಯಭಾರಿ ರಿಜ್ವಾನ್ ಸಯೀದ್ ಶೇಖ್ ಕಾಶ್ಮೀರ ವಿಷಯ ಭಾರತ-ಪಾಕಿಸ್ತಾನ ನಡುವಿನ ಬಿಕ್ಕಟ್ಟಿಗೆ ಮೂಲ ಕಾರಣ. ಜಾಗತಿಕ ಸಂಘರ್ಷಗಳಲ್ಲಿ ಒಂದಾದ ಸಮಸ್ಯೆ ಇತ್ಯರ್ಥಕ್ಕೆ ಮಧ್ಯಪ್ರವೇಶಿಸಿ. ಪಹಲ್ಗಾಮ್ ದಾಳಿಯ ಬಳಿಕ ಉಂಟಾಗಿರುವ ಉದ್ವಿಗ್ನತೆ ಶಮನಗೊಳಿಸಲು ಕ್ರಮ ಕೈಗೊಳ್ಳಿ ಎಂದು ಮನವಿ ಮಾಡಿದ್ದಾರೆ. ವಿಶ್ವಶಾಂತಿಗೆ ಕ್ರಮ ವಹಿಸಿರುವ ಟ್ರಂಪ್ ನಮ್ಮಲ್ಲಿದ್ದಾರೆ. ಅವರು ಕಾಶ್ಮೀರ ವಿಷಯ ಇತ್ಯರ್ಥಕ್ಕೂ ಕ್ರಮ ವಹಿಸಬೇಕಿದೆ ಎಂದ ಪಾಕ್ ರಾಯಭಾರಿ ರಿಜ್ವಾನ್ ಸಯೀದ್, ನಾವು ಪರಮಾಣು ಅಸ್ತ್ರ ಹೊಂದಿದ್ದೇವೆ. ಅಸ್ತಿತ್ವದ ಪ್ರಶ್ನೆ ಎದುರಾದರೆ ಅದನ್ನು ಬಳಕೆಗೆ ಮುಕ್ತ ಅವಕಾಶ ಹೊಂದಿದ್ದೇವೆ ಎಂದು ಕೂಡ ಬೆದರಿಕೆ ಹಾಕಿದ್ದಾರೆ. ಕೆಲ ದಿನಗಳ ಹಿಂದಷ್ಟೇ ಪಾಕಿಸ್ತಾನದ ರೈಲ್ವೇ ಸಚಿವರು ಅಣ್ವಸ್ತ್ರದ ಬೆದರಿಕೆಯನ್ನೊಡ್ಡಿದ್ದರು.

### ಪಾಕ್ ಎದುರು ಭಾರತದ ಪರ ನಿಂತ ಅಮೆರಿಕ!

ಈ ಉದ್ವಿಗ್ನ ಪರಿಸ್ಥಿತಿಯಲ್ಲಿ ಭಾರತದ ಪರ ಅಮೆರಿಕಾ ನಿಂತಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್, ಅಮೆರಿಕ ರಕ್ಷಣಾ ಸಚಿವ ಪೀಟ್ ಹೆಗ್ಸೇತ್ ಜೊತೆ ದೂರವಾಣಿ ಮೂಲಕ ಮಾತನಾಡಿದ್ದಾರೆ. ಪಹಲ್ಗಾಮ್ ದಾಳಿಯಲ್ಲಿ ಪಾಕಿಸ್ತಾನದ ಕೈವಾಡದ ಬಗ್ಗೆ ವಿವರಣೆಯನ್ನು ನೀಡಿದ್ದಾರೆ. ಜಾಗತಿಕ ಭಯೋತ್ಪಾದನೆಯನ್ನು ಉತ್ತೇಜಿಸುವ ರಾಕ್ಷಸ ರಾಷ್ಟ್ರವಾಗಿ ಪಾಕಿಸ್ತಾನ ರೂಪುಗೊಂಡಿದೆ ಎಂದು ರಾಜನಾಥ್ ಸಿಂಗ್ ಹೆಗ್ಸೇತ್‌ಗೆ ಹೇಳಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿರುವ ಅಮೆರಿಕಾ ರಕ್ಷಣಾ ಸಚಿವ ಭಾರತಕ್ಕೆ ತನ್ನನ್ನು ತಾನು ರಕ್ಷಿಸಿಕೊಳ್ಳುವ ಹಕ್ಕಿದೆ. ಅದಕ್ಕೆ ಅಮೆರಿಕ ಬೆಂಬಲ ನೀಡಲಿದೆ ಎಂದಿರುವುದು ಭಾರತಕ್ಕೆ ಬಲ ನೀಡಿದಂತಾಗಿದೆ. ಇದರ ನಡುವೆ ಅಮೆರಿಕಾ ವಿದೇಶಾಂಗ ಸಚಿವ ಮಾರ್ಕೊ ರುಬಿಯೊ ಅವರು ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್ ಹಾಗೂ ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ಅವರಿಗೆ ಪ್ರತ್ಯೇಕ ದೂರವಾಣಿ ಸಂಭಾಷಣೆ ನಡೆಸಿ ಪರಿಸ್ಥಿತಿ ಮತ್ತಷ್ಟು ಉಲ್ಬಣವಾಗುವುದನ್ನು ತಪ್ಪಿಸಲು ರಾಜತಾಂತ್ರಿಕ ಮಟ್ಟದಲ್ಲಿ ಮಾತುಕತೆ ನಡೆಸುವಂತೆ ಆಗ್ರಹಿಸಿದ್ದಾರೆ.



**ಟ್ರಂಪ್ ಮುಂದೆ ಅಂಗಾಲಾಚಿದ ಪಾಕಿಸ್ತಾನ**

**ಹುಡುಕಿ ಹುಡುಕಿ ಹೊಡಿತೀವಿ**

### ರಸ್ತೆಯಲ್ಲೇ ಭಾರತದಿಂದ ಸಮರಾಭ್ಯಾಸ

ಭಾರತೀಯ ವಾಯು ಸೇನೆಯು (ಐಎಎಫ್) ಉತ್ತರ ಪ್ರದೇಶದ ಷಹಜಾನ್‌ಪುರ ಜಿಲ್ಲೆಯಲ್ಲಿರುವ ಗಂಗಾ ಎಕ್ಸ್‌ಪ್ರೆಸ್‌ವೇ ಮೇಲೆ 3.5 ಕಿಲೋಮೀಟರ್ ಉದ್ದದ ರನ್‌ವೇಯನ್ನು ಉದ್ಘಾಟಿಸಲಿದೆ. ಇದು ದೇಶದ ರಕ್ಷಣಾ ಸನ್ನದ್ಧತೆ ದೃಷ್ಟಿಯಿಂದ ಬಹುದೊಡ್ಡ ಹೆಜ್ಜೆಯಾಗಿದೆ. ವಿಶೇಷ ಎಂದರೆ ಈ ರನ್‌ವೇ ಹಗಲು ಮತ್ತು ರಾತ್ರಿ ಎರಡೂ ಹೊತ್ತುಗಳಲ್ಲಿ ಫೈಟರ್ ಜೆಟ್‌ಗಳನ್ನು ಇಳಿಸಲು ಮತ್ತು ಹಾರಿಸಲು ಬೇಕಾದ ಸೌಲಭ್ಯಗಳನ್ನು ಹೊಂದಿದೆ. ಅತ್ಯಾಧುನಿಕ ಲೈಟಿಂಗ್ ಮತ್ತು ನ್ಯಾವಿಗೇಷನ್ ವ್ಯವಸ್ಥೆಗಳನ್ನು ಇಲ್ಲಿ ಅಳವಡಿಸಲಾಗಿದೆ. ಜಲಾಲಾಬಾದ್‌ನಲ್ಲಿರುವ ಈ ರನ್‌ವೇ ಮೀರತ್‌ನಿಂದ ಪ್ರಯಾಗ್‌ರಾಜ್‌ವರೆಗೆ ಸಂಪರ್ಕಿಸುವ 594 ಕಿಲೋಮೀಟರ್ ಉದ್ದದ ಗಂಗಾ ಎಕ್ಸ್‌ಪ್ರೆಸ್‌ವೇಯ ಒಂದು ಭಾಗವಾಗಿದೆ. ಎಕ್ಸ್‌ಪ್ರೆಸ್‌ವೇ ನಿರ್ಮಾಣದ ಶೇ. 85ರಷ್ಟು ಕಾಮಗಾರಿ ಪೂರ್ಣಗೊಂಡಿದೆ. ಆಗ್ರಾ-ಲಕ್ನೋ, ಪೂರ್ವಾಂಚಲ್ ಮತ್ತು ಬುಂದೇಲ್‌ಖಂಡ್ ಎಕ್ಸ್‌ಪ್ರೆಸ್‌ವೇಗಳ ನಂತರ ಐಎಎಫ್ ಕಾರ್ಯಾಚರಣೆಗಾಗಿ ವಿನ್ಯಾಸಗೊಳಿಸಲಾದ ಉತ್ತರ ಪ್ರದೇಶದ ಎಕ್ಸ್‌ಪ್ರೆಸ್‌ವೇಯಲ್ಲಿ ಇದು ನಾಲ್ಕನೇ ಕಾರ್ಯಾಚರಣಾ ವಲಯವಾಗಿದೆ.

## ಬಿಜೆಪಿಗೆ ಸಾಮಾಜಿಕ ನ್ಯಾಯದಲ್ಲಿ ನಂಬಿಕೆಯೂ ಇಲ್ಲ, ಬದ್ಧತೆಯೂ ಇಲ್ಲ


• ಉದಯವಾಹಿನಿ, ಮಂಡ್ಯ

ಬಿಜೆಪಿ ಮತ್ತು ಆರ್.ಎಸ್.ಎಸ್ ಗೆ ಸಾಮಾಜಿಕ ನ್ಯಾಯದಲ್ಲಿ ನಂಬಿಕೆ ಇಲ್ಲ. ಈ ಬಗ್ಗೆ ಅವರಿಗೆ ಬದ್ಧತೆಯೂ ಇಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ ತೂಬಿನಕೆರೆ ಹೆಲಿಪ್ಯಾಡ್‌ನಲ್ಲಿ ಮಾಧ್ಯಮದರೊಂದಿಗೆ ಮಾತನಾಡಿದ ಅವರು, ನೂರು ವರ್ಷಗಳ ಇತಿಹಾಸ ನೋಡಿದರೆ ಅವರು ಯಾವಾಗಲೂ ಸಾಮಾಜಿಕ ನ್ಯಾಯವನ್ನು ವಿರೋಧಿಸುತ್ತಲೇ ಬಂದವರು ಎಂದಿದ್ದಾರೆ.

**ಸಾಮಾಜಿಕ ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆ**

ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಮಿಲ್ಲರ್ ಆಯೋಗದಿಂದ ಹಿಡಿದು ಇಂದಿನವರೆಗೆ ವಿರೋಧ ಮಾಡುತ್ತಲೇ ಬಂದಿದ್ದಾರೆ. ಆರ್.ಎಸ್.ಎಸ್ 1925 ರಂದು ಪ್ರಾರಂಭವಾಗಿದ್ದು, 2025 ಕ್ಕೆ ನೂರು ವರ್ಷಗಳಾಗುತ್ತಿದೆ. ಅವರು ಮೀಸಲಾತಿಯನ್ನು ಎಂದೂ ಒಪ್ಪಿಲ್ಲ. ರಾಹುಲ್ ಗಾಂಧಿ ಅವರು ಎರಡು ವರ್ಷಗಳಿಂದ ಈ ಬಗ್ಗೆ ಬಹಳ ಗಂಭೀರವಾಗಿ ಒತ್ತಾಯ ಮಾಡುತ್ತಿದ್ದರು. ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ಕೂಡ ಇದನ್ನು ಸೇರಿಸಲು ಅವರೇ ಕಾರಣಕರ್ತರು.

ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರು ಪ್ರಧಾನಿ ಮೋದಿಯವರಿಗೆ ಪತ್ರವನ್ನೂ ಬರೆದಿದ್ದರು.



ಈ ಎಲ್ಲರ ಹೋರಾಟ ಮತ್ತು ಒತ್ತಡದ ನಂತರ ಜಾತಿಗಣತಿ ಮಾಡುತ್ತೇವೆ ಎಂದು ಕೇಂದ್ರ ಸರ್ಕಾರ ಹೇಳಿದೆ. ಆದರೆ ಯಾವಾಗ ಎಂದು ಸಮಯ ನಿಗದಿ ಮಾಡಿಲ್ಲ. ಜನಗಣತಿಯಲ್ಲಿಯೇ ಜಾತಿ ಗಣತಿಯನ್ನು ಮಾಡುವುದಾಗಿ ಹೇಳಿದ್ದಾರೆ. ಜಾತಿಗಣತಿ ಜೊತೆಗೆ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆ ಆಗಬೇಕು. ಸಂವಿಧಾನಕ್ಕೆ ತಿದ್ದುಪಡಿ ತಂದು ಮೀಸಲಾತಿಯ ಗರಿಷ್ಠ ಪರಿಮಿತಿಯನ್ನು ಹೆಚ್ಚು ಮಾಡಬೇಕ ಎಂದಿದ್ದಾರೆ.

ಸರ್ವೋಚ್ಚ ನ್ಯಾಯಾಲಯದ ವಿಭಾಗೀಯ ಪೀಠವು ಮೀಸಲಾತಿ ಶೇ. 50ಕ್ಕಿಂತ ಹೆಚ್ಚಬಾರದು ಎಂದು ಹೇಳಿದೆ. ಮೀಸಲಾತಿ ಶೇ. 50ಕ್ಕಿಂತ ಹೆಚ್ಚಾದರೆ ಜನಸಂಖ್ಯೆಯ ಅನುಗುಣವಾಗಿ ಮೀಸಲಾತಿ ನೀಡಲು ಸಾಧ್ಯ. ಸಾಮಾಜಿಕ, ಶೈಕ್ಷಣಿಕ, ಆರ್ಥಿಕವಾಗಿ ಹಿಂದುಳಿದವರಿಗೆ ಮೀಸಲಾತಿ ಕೊಡಬೇಕಾಗಿರುವುದು ಅತ್ಯಂತ ಅನಿವಾರ್ಯ ಮತ್ತು ಅಗತ್ಯ. ಸಮ ಸಮಾಜದ ನಿರ್ಮಾಣಕ್ಕೆ ಎಲ್ಲಾರೂ ಆರ್ಥಿಕವಾಗಿ ಸಾಮಾಜಿಕವಾಗಿ ಸಬಲರಾಗಬೇಕು. ಆಗ ಮಾತ್ರ ಜಾತಿಯನ್ನು ಹೋಗಲಾಡಿಸಲು ಸಾಧ್ಯವಾಗುತ್ತದೆ ಎಂದು ಹೇಳಿದ್ದಾರೆ. ಮೀಸಲಾತಿಯಲ್ಲಿ ಶೇ.50 ರಷ್ಟು ಗರಿಷ್ಠ ಪರಿಮಿತಿಯನ್ನು ತೆಗೆಯಬೇಕು, ಖಾಸಗಿ ಕ್ಷೇತ್ರದಲ್ಲಿಯೂ ಮೀಸಲಾತಿಯನ್ನು ತರಬೇಕೆಂದು ಪ್ರಧಾನಿಗಳನ್ನು ಒತ್ತಾಯಿಸುತ್ತೇನೆ ಎಂದರು.

# ಎಸ್‌ಎಸ್‌ಎಲ್‌ಸಿ ರಿಸಲ್ಟ್ ಪ್ರಕಟ: ಈ ಬಾರಿಯೂ ಬಾಲಕಿಯರದ್ದೇ ಮೇಲುಗೈ

■ ಈ ಬಾರಿ ಶೇ. 66.14 ಫಲಿತಾಂಶ ದಾಖಲು ■ ಕಳೆದ ಬಾರಿಗಿಂತ ಶೇಕಡ.8 ರಷ್ಟು ಫಲಿತಾಂಶ ಹೆಚ್ಚಳ

• ಉದಯವಾಹಿನಿ, ಬೆಂಗಳೂರು

2025ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ-1 ಫಲಿತಾಂಶ ಪ್ರಕಟವಾಗಿದೆ. ಶಿಕ್ಷಣ ಸಚಿವ ಮಧು ಬಂಗಾರಪ್ಪ ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದ್ದು, ಈ ಬಾರಿ ಶೇ.66.14ರಷ್ಟು ಅಂದರೆ ಕಳೆದ ವರ್ಷಕ್ಕಿಂತ 8% ಫಲಿತಾಂಶ ಹೆಚ್ಚಾಗಿದೆ. ಈ ಬಾರಿಯೂ ಬಾಲಕಿಯರೇ ಮೇಲುಗೈ ಸಾಧಿಸಿದ್ದಾರೆ. 74% ಹೆಣ್ಣುಮಕ್ಕಳು ಮತ್ತು 58.07% ಗಂಡು ಮಕ್ಕಳು ಉತ್ತೀರ್ಣ ಆಗಿದ್ದಾರೆ ಎಂದು ಹೇಳಿದ್ದಾರೆ.

ಸರ್ಕಾರಿ ಶಾಲೆಗಳಲ್ಲಿ ಶೇಕಡಾ 62.7ರಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಅನುದಾನಿತ ಶಾಲೆಗಳಲ್ಲಿ ಶೇಕಡಾ 58.97ರಷ್ಟು, ಅನುದಾನರಹಿತ ಶಾಲೆಗಳಲ್ಲಿ ಶೇ.75.59ರಷ್ಟು ವಿದ್ಯಾರ್ಥಿಗಳು ಉತ್ತೀರ್ಣ ಆಗಿದ್ದಾರೆ. ನಗರ ಪ್ರದೇಶದ ಶೇಕಡಾ 67.05ರಷ್ಟು ಮತ್ತು ಗ್ರಾಮೀಣ ಭಾಗದಲ್ಲಿ ಶೇಕಡಾ 65.47ರಷ್ಟು ವಿದ್ಯಾರ್ಥಿಗಳು ಉತ್ತೀರ್ಣ ಆಗಿದ್ದಾರೆ. ಈ ಬಾರಿ 22 ವಿದ್ಯಾರ್ಥಿಗಳು 625 ಅಂಕಗಳಿಗೆ 625 ಅಂಕ ಪಡೆದುಕೊಂಡಿದ್ದಾರೆ ಎಂದು ಹೇಳಿದ್ದಾರೆ.





**ಕರ್ನಾಟಕ ಎಸ್‌ಎಸ್‌ಎಲ್‌ಸಿ ಶೇ. 62.14 ಫಲಿತಾಂಶ:** ಕಳೆದ ವರ್ಷ ಸ್ವಲ್ಪ ಗೊಂದಲ ಇತ್ತು. ಪರೀಕ್ಷೆಯ ಪಾವಿತ್ರ್ಯತೆ ಕಾಪಾಡಬೇಕು ಅಂತ ವೆಬ್ ಕಾಸ್ಟಿಂಗ್ ಮಾಡಿದ್ದೇವೆ. ಕಳೆದ ವರ್ಷ 53% ಫಲಿತಾಂಶ ಬಂದಿತ್ತು. ನಾವು ಗ್ರೇಸ್ ಮಾರ್ಕ್ಸ್ ಕೊಟ್ಟ ಮೇಲೆ 73% ಗೆ ಬಂತು.

### ಎಸ್‌ಎಸ್‌ಎಲ್‌ಸಿ 2024-25 ಟಾಪರ್‌ಗಳ ಲಿಸ್ಟ್

● ಅಖೀಲ್ ಅಹ್ಮೆದ್ ನದಾಫ್ - ವಿಜಯಪುರ ಜಿಲ್ಲೆ ● ಸಿ ಭಾವನಾ - ಬೆಂಗಳೂರು ಗ್ರಾಮಾಂತರ ದೇವನಹಳ್ಳಿ. ● ಧನಲಕ್ಷ್ಮೀ ಎಂ - ಬೆಂಗಳೂರು ಉತ್ತರ ಶೈಕ್ಷಣಿಕ ಜಿಲ್ಲೆ ● ಧನುಷ್ ಎಸ್ - ಮೈಸೂರು ಜಿಲ್ಲೆ ● ದೃತಿ ಜೆ - ಮಂಡ್ಯ ಜಿಲ್ಲೆ ● ಜಾನವಿ ಎಸ್ ಎನ್ - ಬೆಂಗಳೂರು ದಕ್ಷಿಣ ಜಿಲ್ಲೆ ● ಮಧುಸೂದನ್ ರಾಜ್ ಎಸ್ - ಬೆಂಗಳೂರು ಉತ್ತರ ಜಿಲ್ಲೆ ● ಮೊಹಮ್ಮದ್ ಮಸ್ತೂದ್ - ತುಮಕೂರು ಜಿಲ್ಲೆ ● ಮೌಲ್ಯ ಡಿ ರಾಜ್ - ಚಿತ್ರದುರ್ಗ ಜಿಲ್ಲೆ ● ನಮನ ಕೆ - ಶಿವಮೊಗ್ಗ ಜಿಲ್ಲೆ ● ನಮಿತಾ - ಬೆಂಗಳೂರು ದಕ್ಷಿಣ ಜಿಲ್ಲೆ ● ನಂದನ್ ಹೆಚ್ ಒ - ಚಿತ್ರದುರ್ಗ ಜಿಲ್ಲೆ ● ನಿತ್ಯಾ ಕುಲಕರ್ಣಿ - ಶಿವಮೊಗ್ಗ ಜಿಲ್ಲೆ ● ರಂಜಿತಾ ಎ ಸಿ - ಬೆಂಗಳೂರು ಗ್ರಾಮಾಂತರ ಜಿಲ್ಲೆ ● ರೂಪಾ ಚನ್ನಗೌಡ ಪಾಟೀಲ್ - ಬೆಳಗಾವಿ ಜಿಲ್ಲೆ ● ಸಹಿಷ್ಣು ಎನ್ - ಶಿವಮೊಗ್ಗ ಜಿಲ್ಲೆ ● ಶಗುಫ್ತಾ ಅಂಜುಮ್ - ಶಿರಸಿ ● ಸ್ವಸ್ತಿ ಕಾಮತ್ - ಉಡುಪಿ ಜಿಲ್ಲೆ ● ತಾನ್ಯಾ ಆರ್ ಎನ್ - ಮೈಸೂರು ಜಿಲ್ಲೆ ● ಉತ್ಸವ್ ಪಾಟೀಲ್ - ಹಾಸನ ● ಯಶ್ವಿತಾ ರೆಡ್ಡಿ ಕೆ ಬಿ - ಮಧುಗಿರಿ ● ಯುಕ್ತ ಎಸ್ - ಬೆಂಗಳೂರು ದಕ್ಷಿಣ ಜಿಲ್ಲೆ

ಸಿಎಂ ಸಿದ್ದರಾಮಯ್ಯ ಕೂಡ ಇದರ ಬಗ್ಗೆ ಮಾತನಾಡಿದ್ದರು. ಆದಾದ ಮೇಲೆ ಟಾರ್ಗೆಟ್ ಕೊಟ್ಟರು. ಇಲಾಖೆಯಿಂದ ಒಳ್ಳೆಯ ರಿಸಲ್ಟ್ ಬರುವ ರೀತಿಯಲ್ಲಿ ಮಾಡುವಂತೆ ಹೇಳಿದ್ದರು ಎಂದರು.

**ಯಾವ ಜಿಲ್ಲೆಗೆ ಯಾವ ಸ್ಥಾನ:** ದಕ್ಷಿಣ ಕನ್ನಡ ಜಿಲ್ಲೆ ಪ್ರಥಮ (ಶೇ.91.12), ಉಡುಪಿ ಜಿಲ್ಲೆ 2ನೇ ಸ್ಥಾನ (ಶೇ.89.96), ಉತ್ತರ ಕನ್ನಡ ಜಿಲ್ಲೆಗೆ 3ನೇ ಸ್ಥಾನ (ಶೇ.83.19), ಶಿವಮೊಗ್ಗ ಜಿಲ್ಲೆಗೆ 4ನೇ ಸ್ಥಾನ (ಶೇ.82.29), ಕೊಡಗು ಜಿಲ್ಲೆಗೆ 5ನೇ ಸ್ಥಾನ (ಶೇ.82.21), ಕಲಬುರಗಿ ಕೊನೆಯ ಸ್ಥಾನ (ಶೇ42.43) ಪಡೆದುಕೊಂಡಿದೆ.

**144 ಶಾಲೆಗಳಲ್ಲಿ ಶೂನ್ಯ ಫಲಿತಾಂಶ:** ಸರ್ಕಾರಿಯ ಆರು, ಅನುದಾನಿತ 30 ಮತ್ತು ಅನುದಾನ ರಹಿತ 108 ಶಾಲೆಗಳು ಸೇರಿದಂತೆ ಒಟ್ಟು 144 ಶಾಲೆಗಳಲ್ಲಿ ಶೂನ್ಯ ಫಲಿತಾಂಶ ಬಂದಿದೆ.

**ಉತ್ತರ ಪತ್ರಿಕೆ ಸ್ಕ್ಯಾನ್ ಪ್ರತಿ ಪಡೆಯಲು ಅವಕಾಶ;** ಇನ್ನು ಇಂದಿನಿಂದಲೇ ಮೇ-7 ರವರೆಗೆ ಉತ್ತರ ಪತ್ರಿಕೆ ಸ್ಕ್ಯಾನ್ ಪ್ರತಿ ಪಡೆಯಲು ಅವಕಾಶ ನೀಡಲಾಗಿದೆ.

ಮೇ 4 ರಿಂದ 11ನೇ ತಾರೀಖಿನವರೆಗೂ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಅವಕಾಶವಿದೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆ-2 ಮೇ 26 ರಿಂದ ಜೂನ್ 2ರವರೆಗೆ ಮತ್ತು ಎಸ್‌ಎಸ್‌ಎಲ್‌ಸಿ ಪರೀಕ್ಷೆ-3 ಜೂನ್ 23 ರಿಂದ 30 ರವರೆಗೆ ನಡೆಯಲಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹9,551/Gram24ct ₹8,755/Gram22ct | ಬೆಳ್ಳಿ: ₹98.00/Gram

## ಕು. ಧನ್ಯಶ್ರೀ ಭರತನಾಟ್ಯ ರಂಗಪ್ರವೇಶ

• ಉದಯವಾಹಿನಿ, ಬೆಂಗಳೂರು



ನಗರದ ಪ್ರತಿಷ್ಠಿತ ನೃತ್ಯ ಸಂಸ್ಥೆಯಾದ ಕಲಾಮಾಯೆ ನೃತ್ಯ ಶಾಲೆಯ ಗುರು ವಿದುಷಿ ಲತಾ ಕೆ ಶಂಕರ್ ಅವರ ಗರಡಿಯಲ್ಲಿ ನೃತ್ಯಭ್ಯಾಸ ಮಾಡುತ್ತಿರುವ ಉದಯೋನ್ಮುಖ ನೃತ್ಯ ಕಲಾವಿದೆ ಕು. ಎ.ಡಿ. ಧನ್ಯ ಶ್ರೀ ಅವರ ರಂಗ ಪ್ರವೇಶ ಕಾರ್ಯಕ್ರಮವು ದಿನಾಂಕ ಮೇ 4 ರಂದು ಭಾನುವಾರ ಸಂಜೆ 4:00ಕ್ಕೆ ಜೆಸಿ ರಸ್ತೆಯಲ್ಲಿರುವ ಎ ಡಿ ಎ ರಂಗಮಂದಿರದಲ್ಲಿ ನಡೆಯಲಿದೆ. ಈ ಸಮಾರಂಭಕ್ಕೆ ಮುಖ್ಯ ಅತಿಥಿಗಳಾದ ಡಾ.ವಿದ್ಯಾ ರಾವ್ (ಡ್ಯಾನ್ಸ್ ರಿಸರ್ಚ್ ಸ್ಕಾಲರ್), ಯೋಗ ನಿಧಿ ಡಾ. ಲತಾ ಶೇಖರ್ (ಯೋಗ ಥೆರಫಿಸ್ಟ್), ಡಾ.ಜೋಗಿಲ ಸಿದ್ದರಾಜು, ಅಂತರಾಷ್ಟ್ರೀಯ ಜಾನಪದ ಗಾಯಕರು, ಜಾನಪದ ವಿದ್ವಾಂಸರು, ಶ್ರೀಮತಿ ಸುಮನ ಎಸ್. ಕೆ. ಕನ್ನಡ ವಿದ್ವಾಂಸರು, ಬರಹಗಾರರು ಆಗಮಿಸುತ್ತಿದ್ದಾರೆ.

## ಸುಹಾಸ್ ಶೆಟ್ಟಿ ಕೊಲೆ ಆರೋಪಿಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ : ಹಿತೇಂದ್ರ

• ಉದಯವಾಹಿನಿ, ಬೆಂಗಳೂರು

ಸುಹಾಸ್ ಶೆಟ್ಟಿ ಅವರನ್ನು ಕೊಲೆ ಮಾಡಿ ಪರಾರಿಯಾಗಿರುವ ಆರೋಪಿಗಳ ಸುಳಿವು ಸಿಕ್ಕಿದೆ.ಆದಷ್ಟು ಬೇಗ ಬಂಧಿಸುತ್ತೇವೆಂದು ರಾಜ್ಯದ ಕಾನೂನು, ಸುವ್ಯವಸ್ಥೆವಿಭಾಗದ ಹೆಚ್ಚುವರಿ ಪೊಲೀಸ್ ಮಹಾ ನಿರ್ದೇ ಶಕರಾದ ಹಿತೇಂದ್ರ ಅವರು ತಿಳಿಸಿದ್ದಾರೆ. ಘಟನೆ ಬಳಿಕ ಮಂಗ ಳೂರಿಗೆ ಭೇಟಿ ನೀಡಿ ಪರಿಶೀಲಿಸಿದ ನಂತರ ಈ ಸಂಜೆಯೊಂದಿಗೆ ಮಾತನಾಡಿದ ಅವರು ಆರೋಪಿಗಳ ವಿರುದ್ಧ ಮುಲಾಜಿಲ್ಲದೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

**ನಾಲ್ಕು ವಿಶೇಷ ತಂಡ ರಚನೆ:** ಆರೋಪಿಗಳ ಬಂಧನಕ್ಕಾಗಿ ನಾಲ್ಕು ವಿಶೇಷ ತಂಡಗಳನ್ನು ರಚಿಸಿದ್ದೇವೆ, ಈ ತಂಡಗಳು ಈಗಾಗಲೇ ಆರೋಪಿಗಳ ಬಂಧನಕ್ಕಾಗಿ ಶೋಧ ನಡೆಸುತ್ತಿದ್ದು ಹಲವು ಮಾಹಿತಿಗಳನ್ನು ಕಲೆ ಹಾಕುತ್ತಿವೆ ಎಂದರು. ಹಳೆ ದ್ವೇಶದಿಂದ ಈ ಕೊಲೆ ನಡೆದಿದೆ ಎಂಬುವುದು ಪ್ರಾಥಮಿಕ ತನಿಖೆಯಿಂದ ಕಂಡು ಬಂದಿದೆ. ಘಟನೆ ನಂತರ ಮಂಗಳೂರು ನಗರ ಸೇರಿದಂತೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸೂಕ್ತ ಬಂದೋಬಸ್ತ್ ಮಾಡಿದ್ದೇವೆ ಎಂದರು. ಐದು ಮಂದಿ ಎಸ್‌ಪಿಗಳು ಸೇರಿದಂತೆ ಒಂದು ಸಾವಿರ ಪೊಲೀಸರನ್ನು ನಿಯೋಜಿಸಲಾಗಿದೆ. ಸ್ಥಳೀಯ ಪೊಲೀಸರ ಜೊತೆಗೆ ಇಪ್ಪತ್ತು ಕೆಎಸ್‌ಆರ್‌ಪಿ ತುಕಡಿಗಳು ಬಂದೋಬಸ್ತ್‌ನಲ್ಲಿವೆ ಯಾವುದೇ ಅಹಿತಕರ ಘಟನೆ ನಡೆಯದಂತೆ ಸೂಕ್ತ ಬಂದೋಬಸ್ತ್ ಮಾಡಲಾಗಿದೆ ಎಂದು ಅವರು ಹೇಳಿದರು.

## ಇಂದಿನಿಂದ ಕೆಪಿಎಸ್‌ಸಿ ಗೆಜೆಟೆಡ್ ಪ್ರೊಬೇಷನರ್ ಪರೀಕ್ಷೆ : ನಿಷೇಧಾಜ್ಞೆ ಜಾರಿ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗದ ವತಿಯಿಂದ 2023-24 ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಗ್ರೂಪ್ ಎ ಗ್ರೂಪ್ ಬಿ ವೃಂದದ 384 ಹುದ್ದೆಗಳಿಗೆ ಮುಖ್ಯ ಪರೀಕ್ಷೆ ನಾಳೆಯಿಂದ ನಾಲ್ಕು ದಿನ ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತ ನಿಷೇದಾಜ್ಞೆ ಜಾರಿಗೊಳಿಸಲಾಗಿದೆ. ಆರ್.ಪಿ.ಸಿ 310, ಹೆಚ್.ಕೆ 74 ಹುದ್ದೆಗಳಿಗೆ ಮುಖ್ಯ ಪರೀಕ್ಷೆಗಳು ಮೇ 3, ಮೇ 5,ಮೇ 7, ಮೇ 9ರಂದು ನಗರದ ಒಟ್ಟು 9 ಉಪಕೇಂದ್ರಗಳಲ್ಲಿ ನಡೆಯಲಿದೆ. ಈ ಪರೀಕ್ಷೆಗಳನ್ನು ಸುಗಮವಾಗಿ, ಸುವ್ಯವಸ್ಥಿತವಾಗಿ ನಡೆಸುವ ಸಲುವಾಗಿ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಲಾಗಿದೆ. ಪರೀಕ್ಷೆ ನಡೆಯುವ ದಿನಾಂಕಗಳಂದು ಪರೀಕ್ಷಾ ಕೇಂದ್ರಗಳ ಹತ್ತಿರದಲ್ಲಿರುವ ಎಲ್ಲಾ ಜೆರಾಕ್ಸ್ , ಪುಸ್ತಕ ಅಂಗಡಿಗಳನ್ನು ಮುಚ್ಚುವಂತೆ ನಗರ ಪೊಲೀಸ್ ಆಯುಕ್ತರಾದ ಬಿ.ದಯಾನಂದ ರವರು ಆದೇಶ ಹೊರಡಿಸಿದ್ದಾರೆ.

## ಎಸ್‌ಎಸ್‌ಎಲ್‌ಸಿ ಪರೀಕ್ಷೆ-2 ಮತ್ತು 3ರ ದಿನಾಂಕ ಘೋಷಣೆ

• ಉದಯವಾಹಿನಿ, ಬೆಂಗಳೂರು

ಎಸ್ ಎಸ್ ಎಲ್ ಸಿ ಪರೀಕ್ಷೆ-1ರಲ್ಲಿ ವಿಫಲರಾದ ವಿದ್ಯಾರ್ಥಿಗಳಿಗಾಗಿ ನಡೆಯುವ ಪರೀಕ್ಷೆ-2 ಮತ್ತು 3ರ ದಿನಾಂಕವನ್ನು ಶಾಲಾ ಶಿಕ್ಷಣ, ಸಾಕ್ಷಾರತಾ ಸಚಿವ ಮಧುಬಂಗಾರಪ್ಪ ಘೋಷಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಅವರು ಪರೀಕ್ಷೆ-2 ಮೇ 26ರಂದು ಜೂ.2ರ ನಡುವೆ ನಡೆಯಲಿದೆ. ಪರೀಕ್ಷೆ-3 ಜೂನ್ 23ರಿಂದ 30ರವರೆಗೆ ಆಯೋಜಿಸಲಾಗಿದೆ ಎಂದು



ತಿಳಿಸಿದರು. ಫಲಿತಾಂಶ ಪಡೆದಿರುವ ಮತ್ತು ಫಲಿತಾಂಶ ಉತ್ತಮ ಪಡಿಸಿಕೊಳ್ಳಲು ಬಯಸುವ ವಿದ್ಯಾರ್ಥಿಗಳು ಮೇ 3ರಿಂದ 10ರೊಳಗೆ ನೋಂದಣಿ ಮಾಡಿಸಿಕೊಳ್ಳಬೇಕು ಎಂದು ಸೂಚಿಸಿದರು. ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿ ಪಡೆಯಲು ಆನ್‌ಲೈನ್ ಮೂಲಕ ಮೇ2ರಿಂದ 7ರ ನಡುವೆ ಅರ್ಜಿ ಸಲ್ಲಿಸಬೇಕು. ಡೆಬಿಟ್ ಕಾರ್ಡ್, ಕ್ರೆಡಿಟ್ ಕಾರ್ಡ್, ಆನ್‌ಲೈನ್ ಬ್ಯಾಂಕಿಂಗ್ ಸೌಲಭ್ಯ ಇಲ್ಲದವರು, ಆನ್‌ಲೈನ್‌ನಲ್ಲಿ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿ ಪಡೆಯಲು ಅರ್ಜಿ ಸಲ್ಲಿಸಿದ ನಂತರ ಆಫ್‌ಲೈನ್ ಚಲನ್ ಡೌನ್‌ಲೋಡ್ ಮಾಡಿಕೊಂಡು ಬ್ಯಾಂಕ್ ಮೂಲಕ ಶುಲ್ಕ ಪಾವತಿಸಲು ಮೇ 2ರಿಂದ 8ವರೆಗೂ ಕಾಲಾವಕಾಶ ನೀಡಲಾಗಿದೆ ಎಂದು ತಿಳಿಸಿದರು. ಉತ್ತರಪತ್ರಿಕೆಗಳ ಮರು ಎಣಿಕೆ, ಮರು ಮೌಲ್ಯಮಾಪನಕ್ಕೆ ಆನ್‌ಲೈನ್ ಅರ್ಜಿ ಸಲ್ಲಿಸಲು ಮೇ 4ರಿಂದ 11ರವರೆಗೆ ಅರ್ಜಿ ಸಲ್ಲಿಸಬಹುದು. ಆಫ್‌ಲೈನ್‌ನಲ್ಲಿ ಶುಲ್ಕ ಪಾವತಿಸುವವರಿಗೆ ಮೇ 12ರವರೆಗೂ ಕಾಲಾವಕಾಶವಿದೆ. ಈ ಬಾರಿ ಆ್ಯಪ್‌ನ್ನು ರೂಪಿಸಲಾಗಿದ್ದು, ಆನ್‌ಲೈನ್ ಮೂಲಕವೇ ಎಲ್ಲಾ ರೀತಿಯ ಪ್ರಕ್ರಿಯೆಗಳಿಗೆ ಅವಕಾಶ ಮಾಡಿಕೊಡಲಾಗಿದೆ ಎಂದು ಅವರು ವಿವರಿಸಿದರು.

## ಅಪ್ಪುಬಾಡಿಗಾರ್ಡ್ ಆಗಿದ್ದ ಛಲಪತಿ ಅವರ ಪುತ್ರನಿಗೆ 595 ಅಂಕ

• ಉದಯವಾಹಿನಿ, ಬೆಂಗಳೂರು

ಶೈಕ್ಷಣಿಕ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆ-1ರ ಫಲಿತಾಂಶವು ಶುಕ್ರವಾರ ಪ್ರಕಟಗೊಂಡಿದ್ದು ಪವರ್ ಸ್ಟಾರ್ ಪುನೀತ್ ರಾಜ್‌ಕುಮಾರ್ ಅವರ ಬಾಡಿಗಾರ್ಡ್ ಆಗಿದ್ದ ಛಲಪತಿ ಅವರ ಪುತ್ರ ಹರ್ಷವರ್ಧನ್ 595 ಅಂಕಗಳನ್ನು ಪಡೆದು ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಗೊಂಡು ಶಾಲೆ, ಪೋಷಕರಿಗೆ ಕೀರ್ತಿ ತಂದಿದ್ದಾನೆ. ಪುನೀತ್ ರಾಜ್ ಕುಮಾರ್ ಅವರು ಛಲಪತಿ ಅವರ ಮಕ್ಕಳಾದ ಅಮೂಲ್ಯ, ಹರ್ಷವರ್ಧನ್ ಅವರ ವಿದ್ಯಾಭ್ಯಾಸಕ್ಕೆ ಸಾಕಷ್ಟು ಆರ್ಥಿಕ ನೆರವು ನೀಡಿದ್ದರು. ಇತ್ತೀಚೆಗೆ ಪ್ರಕಟಗೊಂಡಿದ್ದ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಅಮೂಲ್ಯ ಕೂಡ 600 ಅಂಕಗಳಿಗೆ 566 ಅಂಕ ಪಡೆದು ಡಿಸ್ಟಿಂಕ್ಷನ್‌ನಲ್ಲಿ ತೇರ್ಗಡೆ ಹೊಂದಿದ್ದಾರೆ. ಈಗ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಹಿಂದಿಯಲ್ಲಿ 100ಕ್ಕೆ 100 ಅಂಕ ಪಡೆದಿರುವ ಛಲಪತಿ ಅವರ ಪುತ್ರ ಹರ್ಷವರ್ಧನ್, ಕನ್ನಡದಲ್ಲಿ 121, ಇಂಗ್ಲೀಷ್ ನಲ್ಲಿ 93, ಗಣಿತದಲ್ಲಿ 97, ವಿಜ್ಞಾನದಲ್ಲಿ 86, ಸಮಾಜ ವಿಜ್ಞಾನದಲ್ಲಿ 98 ಅಂಕಗಳು ಸೇರಿದಂತೆ 625 ಅಂಕಗಳಿಗೆ 595 ಅಂಕ ಪಡೆದು ಡಿಸ್ಟಿಂಕ್ಷನ್ ನಲ್ಲಿ ತೇರ್ಗಡೆಯಾಗುವ ಮೂಲಕ ಅಮೋಘ ಸಾಧನೆ ಮಾಡಿದ್ದಾನೆ. ಛಲಪತಿ ಅವರು ತಮ್ಮ ಪುತ್ರ ಹರ್ಷವರ್ಧನ್ ಪಡೆದಿರುವ ಅಂಕಗಳ ಪ್ರತಿಯನ್ನು ಸಾಮಾಜಿಕ ಜಾಲತಾಣಗಳಲ್ಲಿ ಪ್ರಕಟಿಸಿದ್ದು, ಇದನ್ನು ಕಂಡ ಪವರ್ ಸ್ಟಾರ್ ಪುನೀತ್ ರಾಜ್ ಕುಮಾರ್ ಅವರ ಅಭಿಮಾನಿಗಳು ಹರ್ಷವರ್ಧನ್ ಸಾಧನೆಯನ್ನು ಮೆಚ್ಚಿಕೊಂಡಿದ್ದಾರೆ.

### ಬೆಂ. ಗ್ರಾಮಾಂತರ ಲೋಕಸಭಾ ವ್ಯಾಪ್ತಿಯ ಈ ಭಾಗ ಗ್ರೇಟರ್ ಬೆಂಗಳೂರು ವ್ಯಾಪ್ತಿಗೆ : ಡಿಕೆಶಿ

## ಆನೇಕಲ್ ತಾಲ್ಲೂಕಿಗೆ ಕಾವೇರಿ ನೀರು, ಮೆಟ್ರೋ ವಿಸ್ತರಣೆಗೆ ಕ್ರಮ

• ಉದಯವಾಹಿನಿ, ಬೆಂಗಳೂರು

ಆನೇಕಲ್ ತಾಲ್ಲೂಕಿಗೆ ಕುಡಿಯಲು ಕಾವೇರಿ ನೀರು ಪೂರೈಸಲು ಟೆಂಡರ್ ಕರೆಯಲಾಗಿದ್ದು, ಮೆಟ್ರೋ ವಿಸ್ತರಣೆಗೆ ಡಿಪಿಆರ್ ಸಿದ್ಧಪಡಿಸಲಾಗುತ್ತಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ಆನೇಕಲ್ ತಾಲ್ಲೂಕು ಹೆನ್ನಾಗರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಡೆದ ವಿವಿಧ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಾತನಾಡಿದರು.

ಸಚಿವ ರಾಮಲಿಂಗಾ ರೆಡ್ಡಿ, ಶಾಸಕ ಶಿವಣ್ಣ, ಮಾಜಿ ಸಂಸದ ಸುರೇಶ್, ರಮೇಶ್ ಅವರು ನಿಮ್ಮನ್ನು ಬೆಂಗಳೂರು ನಗರ ವ್ಯಾಪ್ತಿಗೆ ಸೇರಿಸಬೇಕು ಎಂದು ನನ್ನ ಮೇಲೆ ಒತ್ತಾಯ ಹಾಕುತ್ತಿದ್ದಾರೆ. ಈ ಬಗ್ಗೆ ಮುಂದೆ ಚರ್ಚೆ ಮಾಡುತ್ತೇನೆ. ನಿಮ್ಮನ್ನು ಗ್ರೇಟರ್ ಬೆಂಗಳೂರಿನಲ್ಲಿ ಸೇರಿಸಲು ಚರ್ಚೆಯಾಗುತ್ತಿದೆ. ಎಲ್ಲಾ ಶಾಸಕರ ಜತೆ ಚರ್ಚೆ ಮಾಡಿ ತೀರ್ಮಾನ ಮಾಡುತ್ತೇವೆ ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

ಇನ್ನು ಈ ಭಾಗಕ್ಕೆ ಕಾವೇರಿ ನೀರನ್ನು ಪೂರೈಸಬೇಕು ಎಂದು ಸುರೇಶ್, ರಾಮಲಿಂಗಾ ರೆಡ್ಡಿ ಅವರು ಒತ್ತಡ ಹಾಕುತ್ತಿದ್ದಾರೆ. ಆನೇಕಲ್ ತಾಲ್ಲೂಕಿಗೆ 30 ಎಂಎಲ್ ಡಿ ನೀರನ್ನು ನೀಡಲು ಟೆಂಡರ್ ಕರೆಯಲಾಗಿದೆ. ಈ ಬಗ್ಗೆ ನಾಳೆ ಶಾಸಕ ಶಿವಣ್ಣ ಅವರ ಜತೆ ಚರ್ಚೆ ಮಾಡಲಿದ್ದೇನೆ. ಜಿಗಣಿ, ಆನೇಕಲ್, ಸರ್ಜಾಪುರ, ಬನ್ನೇರುಘಟ್ಟಕ್ಕೆ ಮೆಟ್ರೋ ರೈಲು ಮಾರ್ಗ ವಿಸ್ತರಿಸಲು ಡಿಪಿಆರ್ ಸಿದ್ಧಪಡಿಸಲಾಗುತ್ತಿದೆ ಎಂದು ಡಿಕೆಶಿ ತಿಳಿಸಿದರು. (ಗ್ರೇಟರ್ ಬೆಂಗಳೂರು ವಿಧೇಯಕ)

ನಮಗೆ ಆನೇಕಲ್ ಬೇರೆಯಲ್ಲ ಕನಕಪುರ ಬೇರೆಯಲ್ಲ. ಈ ಕ್ಷೇತ್ರದ ಅಭಿವೃದ್ಧಿಗೆ ನಾವು ಬದ್ಧವಾಗಿದ್ದೇವೆ. ಈ ಕ್ಷೇತ್ರದಲ್ಲಿ ವಿದ್ಯಾವಂತರು, ಪ್ರಜ್ಞಾವಂತರಿದ್ದೀರಿ. ಒಂದೇ ಗ್ರಾಮ ಪಂಚಾಯ್ತಿಯಲ್ಲಿ ಇಷ್ಟು ದೊಡ್ಡ ಕಾರ್ಯಕ್ರಮ ಮಾಡುತ್ತಿದ್ದು, ನಿಮ್ಮ ಜತೆ ನಮ್ಮ ಸರ್ಕಾರ ಇದೆ ಎಂದು ಹೇಳಲು ನಾನು, ರಾಮಲಿಂಗಾ ರೆಡ್ಡಿ ಅವರು ಬಂದಿದ್ದೇವೆ. ಗ್ಯಾರಂಟಿ ಯೋಜನೆಗಳಿಂದಾಗಿ ರಾಜ್ಯದಲ್ಲಿ ಅಭಿವೃದ್ಧಿ ಕೆಲಸ ನಡೆಯುತ್ತಿಲ್ಲ ಎಂದು ವಿರೋಧ ಪಕ್ಷದವರು ಟೀಕೆ ಮಾಡುತ್ತಿದ್ದಾರೆ. ನಮ್ಮ ಸರ್ಕಾರ 4 ಲಕ್ಷ ಕೋಟಿ ಬಜೆಟ್ ಮಂಡಿಸಿದ್ದು, ಗ್ರಾಮೀಣ ಪ್ರದೇಶಗಳ ರಸ್ತೆ ಅಭಿವೃದ್ಧಿಗೆ ಕಲಬುರ್ಗಿಯಲ್ಲಿ 1100 ಕೋಟಿ ಮೊತ್ತದ ಯೋಜನೆಗೆ ಭೂಮಿ ಪೂಜೆ ಮಾಡಲಾಗಿದೆ ಎಂದು ಡಿಕೆಶಿ ಹೇಳಿದರು. ಬಿಜೆಪಿಯವರು ಭಾವನೆ ಮೇಲೆ ರಾಜಕೀಯ ಮಾಡಿದರೆ, ಕಾಂಗ್ರೆಸ್ ಬದುಕಿನ ಮೇಲೆ ರಾಜಕಾರಣ ಮಾಡುತ್ತಿದೆ. ಈ ತಾಲ್ಲೂಕಿಗೆ 16 ಕೋಟಿ ನೀಡಲಾಗಿದೆ. 1.22 ಕೋಟಿ ಮಹಿಳೆಯರಿಗ ಗೃಹಲಕ್ಷ್ಮಿ ಹಣ, 200 ಯೂನಿಟ್ ಉಚಿತ ವಿದ್ಯುತ್, ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ, 10 ಕೆ.ಜಿ ಅಕ್ಕಿ, ನಿರುದ್ಯೋಗಿಗಳಿಗೆ ಭತ್ಯೆ ನೀಡಲಾಗುತ್ತಿದೆ. ಬಿಜೆಪಿಯವರು ಇಂತಹ ಯಾವುದಾದರೂ ಒಂದು ಯೋಜನೆ ನೀಡಿದ್ದಾರಾ? ಎಂದು ಡಿಕೆಶಿ ಪ್ರಶ್ನಿಸಿದರು.





ಉದಯವಾಹಿನಿ ಚಿತ್ರ

ನಿಮ್ಮ ಜತೆ ನಮ್ಮ ಸರ್ಕಾರ

> ಈ ಹೆನ್ನಾಗರ ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿ ಇಲ್ಲಿನ ಸದಸ್ಯರು ಮಾಡಿರುವ ಕೆಲಸವನ್ನು ನೋಡಿ ಅಭಿನಂದನೆ ಸಲ್ಲಿಸಲು ನಾನಿಲ್ಲಿಗೆ ಬಂದಿದ್ದೇನೆ. ಈ ಪಂಚಾಯ್ತಿಯಲ್ಲಿ 40 ಕೋಟಿ ಸಂಗ್ರಹಿಸುವ ಗುರಿ ಹೊಂದಿದ್ದು, 25 ಕೋಟಿ ಸಂಗ್ರಹಿಸಿದ್ದೀರಿ. ಅನೇಕ ಅಭಿವೃದ್ಧಿ ಕೆಲಸ ಕೈಗೊಂಡು 5.13 ಕೋಟಿ ಮೊತ್ತವನ್ನು 900 ಫಲಾನುಭವಿಗಳಿಗೆ ನೀಡಲಾಗುತ್ತಿದೆ. 78 ಕಾಮಗಾರಿಗಳನ್ನು ಕೈಗೆತ್ತಿಕೊಂಡು ಶುಕ್ರವಾರ ನಾನು ಹಾಗೂ ಸಚಿವ ರಾಮಲಿಂಗಾ ರೆಡ್ಡಿ ಅವರು ಶಂಕುಸ್ಥಾಪನೆ ಮಾಡಿದ್ದೇವೆ. ನಿಮಗೆ ಪ್ರೋತ್ಸಾಹ ನೀಡಿ ಬೆಳೆಸುವುದು ನಮ್ಮ ಕರ್ತವ್ಯ
>
> -ಡಿ.ಕೆ.ಶಿವಕುಮಾರ್, ಉಪ ಮುಖ್ಯಮಂತ್ರಿ

ಕೋವಿಡ್ ಸಂದರ್ಭದಲ್ಲಿ ರಮೇಶ್ ಅವರ ಮುಖಂಡತ್ವದಲ್ಲಿ ಈ ಪಂಚಾಯ್ತಿಯಲ್ಲಿ ಉತ್ತಮ ಕೆಲಸ ಮಾಡಲಾಗಿದೆ. ಈ ಪಂಚಾಯ್ತಿಯ ಕಾರ್ಯವೈಖರಿಗೆ ಕೇಂದ್ರ ಬಿಜೆಪಿ ಸರ್ಕಾರ ಕೂಡ ಪ್ರಶಸ್ತಿ ನೀಡಿದೆ. ಇಡೀ ರಾಜ್ಯಕ್ಕೆ ಇದು ಮಾದರಿ ಗ್ರಾಮ ಪಂಚಾಯ್ತಿ. ಈ ಪಂಚಾಯ್ತಿಯಲ್ಲಿನ ಕಾರ್ಯವನ್ನು ನಾನು ಎಲ್ಲೆಡೆ ಪ್ರಚಾರ ಮಾಡುತ್ತೇನೆ.

ಮುಂದಿನ ದಿನಗಳಲ್ಲಿ ನೀವು ಕಾಂಗ್ರೆಸ್ ಅಭ್ಯರ್ಥಿಗೆ ಬೆಂಬಲ ನೀಡಬೇಕು. ನಿಮ್ಮಲ್ಲಿ ಕೆಲವರು ಸುರೇಶ್ ಅವರನ್ನು ಸೋಲಿಸಿದರು. ಆದರೂ ಅವರು ನಿಮ್ಮ ಅಭಿವೃದ್ಧಿ ವಿಚಾರದಲ್ಲಿ ಅಪಾರವಾದ ವಿಶ್ವಾಸವಿಟ್ಟು ಶ್ರಮಿಸುತ್ತಿದ್ದಾರೆ ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

## ಬ್ರ್ಯಾಂಡ್ ಬೆಂಗಳೂರು ಅಲ್ಲ, ಮರಣ ಬೆಂಗಳೂರು: ಎಸ್.ಹರೀಶ್ ಕಿಡಿ

• ಉದಯವಾಹಿನಿ, ಬೆಂಗಳೂರು



ನಗರದಲ್ಲಿ ಪ್ರತಿ ಬಾರಿ ಮಳೆಯಾದಾಗಲೂ ಒಂದೊಂದು ಅಮಾಯಕ ಜೀವಗಳು ಬಲಿಯಾಗುತ್ತಿವೆ. ಇದರಿಂದ ಬ್ಯ್ರಾಂಡ್ ಬೆಂಗಳೂರು ಎಂಬುದರ ಬದಲು ಮರಣ ಬೆಂಗಳೂರು ಎಂದು ಕರೆಯುವುದು ಸೂಕ್ತ ಎಂದು ಬೆಂಗಳೂರು ಉತ್ತರ ಜಿಲ್ಲಾ ಬಿಜೆಪಿ ಘಟಕ ಅಧ್ಯಕ್ಷ ಹಾಗೂ ಮಾಜಿ ಉಪ ಮೇಯರ್ ಎಸ್.ಹರೀಶ್ ಕಿಡಿಕಾರಿದ್ದಾರೆ. ಕಳೆದ ಬಾರಿ ಮಳೆ ಬಿದ್ದಾಗಲೂ ಒಬ್ಬ ಅಮಾಯಕ ಆಟೋ ಚಾಲಕ ಮೃತಪಟ್ಟಿದ್ದ, ಈಗ ಇನ್ನು ಮಳೆಗಾಲವೇ ಆರಂಭವಾಗಿಲ್ಲ ಆಗಲೇ ಮತ್ತೊಬ್ಬ ಚಾಲಕ ಮೃತ ಪಟ್ಟಿದ್ದಾನೆ.

ಈ ಹಿಂದೆ ಕೂಡ ಹಲವಾರು ಮಂದಿ ಮಳೆ ಅನಾಹುತಗಳಿಗೆ ಬಲಿಯಾಗಿದ್ದಾರೆ ಆದರೂ ಸರ್ಕಾರ ಮಾತ್ರ ಇದುವರೆಗೂ ಯಾವುದೇ ಕ್ರಮ ಕೈಗೊಳ್ಳ ದಿರುವುದು ಹಾಸ್ಯಾಸ್ಪದ ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಬ್ರ್ಯಾಂಡ್ ಬೆಂಗಳೂರು ಯೋಜನೆಯಡಿ ಇಡಿ ನಗರವನ್ನು ಸಂಪೂರ್ಣವಾಗಿ ಅಭಿವೃದ್ಧಿ ಪಡಿಸುತ್ತೇವೆ, ನಗರದ ರಸ್ತೆ ಗುಂಡಿಗಳಿಗೆ ಮುಕ್ತಿ ಹಾಡುತ್ತೇವೆ ಎಂದು ಬೊಬ್ಬೆ ಹೊಡೆ ಯುವ ಬೆಂಗಳೂರು ಉಸ್ತುವಾರಿ ಸಚಿವರೂ ಆಗಿರುವ ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ಮಳೆಗಾಲ ದಲ್ಲಿ ಸಡಿಲಗೊಂಡಿರುವ ಮರಗಳು, ಕೊಂಬೆಗಳು, ರೆಂಬೆಗಳನ್ನು ತೆರವುಗೊಳಿಸಬೇಕು ಎಂಬ ಕನಿಷ್ಠ ಜ್ಞಾನ ಇಲ್ಲದಿರುವುದು ಅವಮಾನಕರ ಎಂದು ಅವರು ಲೇವಡಿ ಮಾಡಿದ್ದಾರೆ. ಕಳೆದ ಬಾರಿ ಮಳೆಯಾದ ಸಂದರ್ಭದಲ್ಲಿ ಆಟೋ ಚಾಲಕನೊಬ್ಬ ಮಳೆ ಅನಾಹುತಕ್ಕೆ ಬಲಿಯಾದ ಸಂದರ್ಭದಲ್ಲಿ ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸಲು ಬಿಡುವುದಿಲ್ಲ ಎಂದು ಡಿಕೆಶಿ ಬಡಾಯಿ ಕೊಚ್ಚಿಕೊಂಡಿದ್ದರು. ಇದೀಗ ಮಳೆ ಅನಾಹುತಕ್ಕೆ ಮತ್ತೊಂದು ಜೀವ ಬಲಿಯಾಗಿದೆ. ಇದಕ್ಕೆ ನಿಮ ಉತ್ತರವೇನೂ ಶಿವಕುಮಾರ್ ಅವರೇ ಎಂದು ಹರೀಶ್ ಪ್ರಶ್ನಿಸಿದ್ದಾರೆ. ಇದನ್ನೆಲ್ಲಾ ನೋಡಿದರೆ ನೀವು ನೀಡುತ್ತಿರುವ ಗ್ಯಾರಂಟಿ ಯೋಜನೆಗಳಲ್ಲಿ ನಗರದ ನಿವಾಸಿಗಳಿಗೆ 7ನೇ ಮರಣ ಗ್ಯಾರಂಟಿ ಯೋಜನೆ ಘೋಷಿಸಿರುವಂತೆ ಕಾಣುತ್ತಿದೆ ಎಂದು ಅವರು ಅಪಹಾಸ್ಯ ಮಾಡಿದ್ದಾರೆ. ಈಗಲೂ ಕಾಲ ಮಿಂಚಿಲ್ಲ ಮುಂದಿನ ಮಳೆಗಾಲದಲ್ಲಿ ಸಂಭವಿಸುವ ಅನಾಹುತಗಳನ್ನು ತಪ್ಪಿಸಲು ತಕ್ಷಣ ಕ್ರಮ ಕೈಗೊಳ್ಳುವಂತೆ ಶಿವಕುಮಾರ್ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಬೇಕು ಇಲ್ಲದಿದ್ದರೆ ನಗರದ ಪ್ರಜ್ಞಾವಂತ ನಾಗರಿಕರು ನಿಮಗೆ ತಕ್ಕ ಪಾಠ ಕಲಿಸುತ್ತಾರೆ ಎಂದು ಅವರು ಎಚ್ಚರಿಸಿದ್ದಾರೆ.

## ಶಾಸಕ ಶಿವಾನಂದ ಪಾಟೀಲ್ ರಾಜೀನಾಮೆ

• ಉದಯವಾಹಿನಿ, ಬೆಂಗಳೂರು

ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಅವರ ಸವಾಲನ್ನು ಸ್ವೀಕರಿಸಿರುವ ಜವಳಿ, ಸಕ್ಕರೆ, ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಎಸ್. ಪಾಟೀಲ್ ಅವರು ತಮ್ಮ ಶಾಸಕ ಸ್ಥಾನಕ್ಕೆ ಶುಕ್ರವಾರ ರಾಜೀನಾಮೆ ನೀಡಿ ಪ್ರತಿ ಸವಾಲು ಹಾಕಿದ್ದಾರೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬೆನ್ನಲ್ಲೆ ಬಸನಗೌಡ ಪಾಟೀಲ್ ಯತ್ನಾಳ್, ಉಗ್ರಾವತಾರದ ಮಾತುಗಳನ್ನಾಡುತ್ತಿದ್ದರು, ಈ ಹಂತದಲ್ಲಿ ಪ್ರತಿಕ್ರಿಯೆ ವೇಳೆ ಕಾಂಗ್ರೆಸ್‌ನ ಶಾಸಕರೊಂದಿಗೆ ಸಂಘರ್ಷಕ್ಕೆ ಇಳಿದಿದ್ದಾರೆ. ಸಚಿವ ಶಿವಾನಂದ ಪಾಟೀಲ್, ಹುನಗುಂದ ಕ್ಷೇತ್ರದ ಕಾಂಗ್ರೆಸ್ ಶಾಸಕ ವಿಜಯಾನಂದ ಕಾಶಪ್ಪನವರ್ ಅವರಿಗೆ ಯತ್ನಾಳ್ ಸವಾಲು ಹಾಕಿದ್ದರು. ಇಬ್ಬರು ರಾಜೀನಾಮೆ ನೀಡಿ ನನ್ನ ವಿರುದ್ಧ ಚುನಾವಣೆಗೆ ನಿಲ್ಲಲಿ, ಯಾರು ಗೆಲ್ಲುತ್ತಾರೋ ನೋಡೋಣ ಎಂದು ಸವಾಲು ಹಾಕಿದ್ದರು. ಅದಕ್ಕೆ ಪ್ರತಿಕ್ರಿಯೆ ಎಂಬಂತೆ ಶಿವಾನಂದ ಪಾಟೀಲ್ ಶುಕ್ರವಾರ ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

ಶಿವಾನಂದ ಪಾಟೀಲ್ ತಮ್ಮ ರಾಜೀನಾಮೆ ಪತ್ರದಲ್ಲಿ, ವಿಜಯಪುರ ನಗರ ಕ್ಷೇತ್ರದ ಶಾಸಕರಾದ ಬಸನಗೌಡ ಆರ್. ಪಾಟೀಲ ಯತ್ನಾಳ್‌ರವರು ತಮ್ಮ ಕ್ಷೇತ್ರದ ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿ ನನ್ನ ವಿರುದ್ಧ ಬಸವನಬಾಗೇವಾಡಿ ಮತ ಕ್ಷೇತ್ರ ದಿಂದ ಸ್ಪರ್ಧೆ ಮಾಡುವುದಾಗಿ ಸವಾಲು ಹಾಕಿದ್ದಾರೆ. ನಾನು ಅವರ ಸವಾಲನ್ನು ಸ್ವೀಕರಿಸಿ ಯತ್ನಾಳ್ ವಿರುದ್ಧ ಚುನಾವಣೆಗೆ ಸ್ಪರ್ಧಿಸಲು ನಿರ್ಧರಿಸಿದ್ದೇನೆ. ಹಾಗಾಗಿ ನಾನು ಪ್ರತಿನಿಧಿಸುತ್ತಿರುವ ಬಸವನಬಾಗೇ ವಾಡಿ ವಿಧಾನಸಭಾ ಕ್ಷೇತ್ರದ ಶಾಸಕ ಸ್ಥಾನಕ್ಕೆ ರಾಜೀ ನಾಮೆ ಸಲ್ಲಿಸುತ್ತಿದ್ದೇನೆ ಎಂದು ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಅವರಿಗೆ ಸಲ್ಲಿಸಿದ ಪತ್ರದಲ್ಲಿ ತಿಳಿಸಿದ್ದಾರೆ. ಯತ್ನಾಳ್ ಅವರು ಸವಾಲು ಹಾಕಿರುವಂತೆ ಅವರ ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಬೇಕು. ಅವರ ರಾಜೀನಾಮೆ ಅಂಗೀಕಾರವಾದರೆ ಮಾತ್ರ ನನ್ನ ರಾಜೀನಾಮೆಯನ್ನು ಅಂಗೀಕರಿಸುವಂತೆ ಸಭಾಧ್ಯಕ್ಷರಲ್ಲಿ ಕೋರಿದ್ದಾರೆ.

ಸ್ಪರ್ಧೆ ಮಾಡುವುದಾಗಿ ಸವಾಲು



ಉದಯವಾಹಿನಿ ಚಿತ್ರ

**ವೈಯಕ್ತಿಕ ತೀರ್ಮಾನ**

**ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹಾಕಿದ್ದ ಸವಾಲನ್ನು ಸ್ವೀಕಾರ ಮಾಡಿ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದೇನೆ ಎಂದು ಶಿವಾನಂದಪಾಟೀಲ್ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯತ್ನಾಳ್ ಅವರು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ಅಂಗೀಕಾರವಾದರೆ ಮಾತ್ರ ನನ್ನ ರಾಜೀನಾಮೆಯನ್ನು ಅಂಗೀಕರಿಸುವಂತೆ ಸಭಾಧ್ಯಕ್ಷರಲ್ಲಿ ಮನವಿ ಮಾಡಿದ್ದೇನೆ. ಸಭಾಧ್ಯಕ್ಷರು ಯತ್ನಾಳ್ ಅವರನ್ನು ಕರೆದು ವಿಚಾರ ಮಾಡಲಿ ಎಂದರು.**


**ಕಾನೂನಾತಕ ಪರಿಶೀಲನೆ:** ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಮಾತನಾಡಿ, ವೈಯಕ್ತಿಕ ನೆಲೆಗಟ್ಟು ಹಾಗೂ ಸ್ವಾಭಿಮಾನ ಹಿನ್ನೆಲೆಯಲ್ಲಿ ಶಿವಾನಂದ ಪಾಟೀಲ್ ರಾಜೀ ನಾಮೆ ಸಲ್ಲಿಸಿದ್ದಾರೆ. ಶಾಸಕರು ಮತ್ತು ಸಚಿವರು ತಮ್ಮ ತಮ್ಮ ಗೌರವದ ವಿಷಯದ ಹಿನ್ನೆಲೆಯಲ್ಲಿ ರಾಜೀನಾಮೆ ಸಲ್ಲಿಸಿದ್ದಾರೆ ಎಂದರು. ಶಿವಾನಂದ ಪಾಟೀಲ್ ಅವರು ರಾಜೀನಾಮೆ ಕೊಟ್ಟಿದ್ದಾರೆ. ನಾನು ಅದನ್ನು ಪಡೆದುಕೊಂಡಿದ್ದೇನೆ. ಕಾನೂನಾತ್ಮಕವಾಗಿ ಹೇಗೆ ಇದನ್ನು ನೋಡಬೇಕು ಅನ್ನೋದನ್ನು ಪರಿಶೀಲಿಸುತ್ತೇನೆ ಎಂದು ಅವರು ಹೇಳಿದರು.

## ಪಾಕ್ ಜಿಂದಾಬಾದ್ ಕೂಗುವವರಿಗೆ ಕಡಿವಾಣ ಹಾಕಿದ್ದರೆ ಸುಹಾಸ್ ಹತ್ಯೆಯಾಗುತ್ತಿರಲಿಲ್ಲ

• ಉದಯವಾಹಿನಿ, ಬೆಂಗಳೂರು

ಪಾಕಿಸ್ತಾನ ಜಿಂದಾಬಾದ್ ಎಂದು ಘೋಷಣೆ ಕೂಗಿದಾಗಲೇ ಕಾಂಗ್ರೆಸ್ ಸರ್ಕಾರ ಕಠಿಣ ಕ್ರಮ ವಹಿಸಿದ್ದರೆ, ಮಂಗಳೂರಿನಲ್ಲಿ ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿಯ ಹತ್ಯೆ ಆಗುತ್ತಿರಲಿಲ್ಲ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ ಆಕ್ರೋಶ ವ್ಯಕ್ತಪಡಿಸಿದರು.


ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿಯ ಕೊಲೆಯ ಮೂಲಕ ಮಂಗಳೂರಿನಲ್ಲಿ ಉದ್ವಿಗ್ನ ಸ್ಥಿತಿ ನಿರ್ಮಾಣವಾಗಿದೆ. ಮಂಗಳೂರು ಬಂದ್ ಮಾಡಲಾಗಿದೆ. ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ 2013 ರಲ್ಲಿ ಅಧಿಕಾರದಲ್ಲಿದ್ದಾಗ 36 ಹಿಂದೂ ಕಾರ್ಯಕರ್ತರ ಹತ್ಯೆಯಾಗಿತ್ತು. ಪಾಪ್ಯುಲರ್ ಫ್ರಂಟ್ ಮೊದಲಾದ ಸಂಘಟನೆಗಳು ಇಂತಹ ಕೃತ್ಯಗಳನ್ನು ಮಾಡಿವೆ ಎಂದು ಆರೋಪಿಸಿದರು. ಕಾಂಗ್ರೆಸ್ ಅಧಿಕಾರಕ್ಕೆ ಬಂದ ಕೂಡಲೇ ಪಾಕಿಸ್ತಾನ ಜಿಂದಾಬಾದ್ ಎಂದು ಘೋಷಣೆ ಕೂಗಲಾಗುತ್ತದೆ. ಪಾಕಿಸ್ತಾನಕ್ಕೆ ಅಪಮಾನ ಮಾಡಲು ಧ್ವಜವನ್ನು ರಸ್ತೆಗೆ ಅಂಟಿಸಿದರೆ ಅದನ್ನು ಮಹಿಳೆಯರು ಎತ್ತಿಕೊಂಡು ಹೋಗುತ್ತಾರೆ. ಅಮಾ ಯಕ ಹಿಂದೂ ಕಾರ್ಯಕರ್ತರ ಬಳಿ ಯಾವುದೇ ಆಯುಧ ಇಲ್ಲವೆಂದು ತಿಳಿದು ದಾಳಿ ಮಾಡಲಾಗುತ್ತಿದೆ ಎಂದರು. ಸುಹಾಸ್ ಎಲ್ಲೆಲ್ಲಿ ಓಡಾಡುತ್ತಾನೆ, ಆತನ ಬಳಿ ಆಯುಧ ಇಲ್ಲವೆಂದು ತಿಳಿದಿದ್ದು ಹೇಗೆ? ಈ ವಿಚಾರದಲ್ಲಿ ಪೊಲೀಸ್ ಇಲಾಖೆಯಿಂದಲೇ ಮಾಹಿತಿ ಸೋರಿಕೆಯಾಗಿರುವ ಅನುಮಾನವಿದೆ. ಇಂತಹ ಘಟನೆ ನಡೆದಾಗ ಸಿಎಂ ಸಿದ್ದರಾಮಯ್ಯ ಸಬೂಬು ಹೇಳುವ ನಡೆ ತೋರುತ್ತಾರೆ. ಸಚಿವ ದಿನೇಶ್ ಗುಂಡೂರಾವ್ ಅವರಿಗೆ ಪಾಕಿಸ್ತಾನ ಜಿಂದಾ ಬಾದ್ ಎಂದರೂ ಏನೂ ಅನ್ನಿಸುವುದಿಲ್ಲ. ಅವರದ್ದು ಅಂತಹ ಎಮ್ಮೆ ಚರ್ಮ ಎಂದು ಅವರು ಟೀಕಿಸಿದರು. ಪೊಲೀಸ್ ಇಲಾಖೆ ಕಾಂಗ್ರೆಸ್ ಪಕ್ಷದ ಇಲಾಖೆಯಾಗಿದೆ. ಸಿಎಂ ಸಿದ್ದರಾಮಯ್ಯನವರೇ ಪೊಲೀಸರಿಗೆ ಹೊಡೆಯಲು ಮುಂದಾಗುತ್ತಾರೆ ಎಂದು ಅವರು ಆರೋಪಿಸಿದರು.



> ಸಿಎಂ ಸಿದ್ದರಾಮಯ್ಯ ಯುದ್ಧ ಬೇಡ ಎನ್ನುತ್ತಾರೆ. ಪಾಕಿಸ್ತಾನ ಜಿಂದಾಬಾದ್ ಎಂದು ಕೂಗುವ ದೇಶದ್ರೋಹಿಗಳ ವಿರುದ್ಧ ಕ್ರಮ ಕೈಗೊಳ್ಳುವುದಿಲ್ಲ. ಇಂತಹ ದೇಶದ್ರೋಹಿಗಳನ್ನು ಗುಂಡಿಕ್ಕುವ ಕಾನೂನು ಬಂದರೆ ಮಾತ್ರ ದೇಶ ಸುರಕ್ಷಿತವಾಗಿರುತ್ತದೆ. ಇನ್ನೆಷ್ಟು ಹಿಂದೂ ಕಾರ್ಯಕರ್ತರ ಬಲಿಯಾಗಲಿ ಎಂದು ಸಿದ್ದರಾಮಯ್ಯ ಬಯಸುತ್ತಾರೋ ಗೊತ್ತಿಲ್ಲ. ಲವ್ ಜಿಹಾದ್ ಆದಾಗ, ಪಾಕಿಸ್ತಾನ ಜಿಂದಾಬಾದ್ ಎಂದಾಗಲೇ ಕಠಿಣ ಕ್ರಮ ಕೈಗೊಂಡಿದ್ದರೆ ಇಂತಹ ಘಟನೆ ನಡೆಯುತ್ತಿರಲಿಲ್ಲ. ಕಾನೂನು ಸುವ್ಯವಸ್ಥೆ ಹದಗೆಟ್ಟಿರುವುದರ ಬಗ್ಗೆ ಸರ್ಕಾರಕ್ಕೆ ಎಚ್ಚರಿಕೆ ನೀಡಲಿದ್ದೇವೆ
>
> -ಆರ್.ಅಶೋಕ, ಪ್ರತಿಪಕ್ಷ ನಾಯಕ

## ಸುಹಾಸ್ ಹತ್ಯೆಯನ್ನು ಬಿಜೆಪಿಯವರು ರಾಜಕೀಯಕ್ಕೆ ಬಳಸಿಕೊಳ್ಳಬಾರದು

• ಉದಯವಾಹಿನಿ, ಬೆಂಗಳೂರು



ಮಂಗಳೂರಿನಲ್ಲಿ ಸುಹಾಸ್ ಶೆಟ್ಟಿ ಹತ್ಯೆಯನ್ನು ಬಿಜೆಪಿಯವರು ರಾಜಕೀ ಯಕ್ಕೆ ಬಳಸಿಕೊಳ್ಳಬಾರದು. ಕರ್ನಾಟಕ ರಾಜ್ಯ ಶಾಂತಿಯಿಂದಿದೆ. ಶಾಂತಿ ಯಿಂದ ಇರುವುದಕ್ಕೆ ಬಿಜೆಪಿಯವರು ಸಹಕಾರ ನೀಡಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹತ್ಯೆಯಲ್ಲಿ ಭಾಗಿಯಾಗಿರುವ ತಪ್ಪಿತಸ್ಥರ ವಿರುದ್ಧ ಪೊಲೀಸರು ಕಾನೂನು ಕ್ರಮ ತೆಗೆದುಕೊಳ್ಳುತ್ತಾರೆ. ಈ ವಿಚಾರದಲ್ಲಿ ನಾವು ತಲೆಹಾಕಲು ಹೋಗುವುದಿಲ್ಲ ಎಂದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಾಳಾಗಿದೆ ಎನ್ನುವ ಬಿಜೆಪಿ ಆರೋಪಕ್ಕೆ ನಾನು ಪ್ರತಿಕ್ರಿಯೆ ನೀಡಲು ಹೋಗುವುದಿಲ್ಲ. ಮಂಗಳೂರಿನ ಪೊಲೀಸರು ಉತ್ತಮ ಸಾಮರ್ಥ್ಯ ಹೊಂದಿದ್ದಾರೆ. ಈ ಘಟನೆ ಬಗ್ಗೆ ಕಾನೂನು ಕ್ರಮ ತೆಗೆದುಕೊಳ್ಳುತ್ತಾರೆ ಎಂದರು.

## ಸುಹಾಸ್ ಶೆಟ್ಟಿ ಕೊಲೆಯನ್ನು ಖಂಡಿಸಿದ ಖಾದರ್

• ಉದಯವಾಹಿನಿ, ಬೆಂಗಳೂರು



ಮಂಗಳೂರಿನಲ್ಲಿ ನಿನ್ನೆ ನಡೆದ ಸುಹಾಸ್ ಶೆಟ್ಟಿ ಕೊಲೆಯನ್ನು ತೀವ್ರವಾಗಿ ಖಂಡಿಸುವುದಾಗಿ ವಿಧಾನಸಭಾಧ್ಯಕ್ಷ ಯು. ಟಿ. ಖಾದರ್ ಹೇಳಿದರು. ಈ ಹತ್ಯೆಯ ದುಷ್ಕರ್ಮಿಗಳು ಯಾರೇ ಇದ್ದರೂ ಕಠಿಣ ಕ್ರಮ ಕೈಗೊಳ್ಳಬೇಕು. ಶಾಂತಿ, ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಅವರು ಸೂಚಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವೈಯಕ್ತಿಕ ದ್ವೇಷದ ಹಿನ್ನಲೆಯಲ್ಲಿ ಹತ್ಯೆಯಾಗಿರಬಹುದು. ಹತ್ಯೆಯಾದ ಸುಹಾಸ್ ಶೆಟ್ಟಿ ಈ ಹಿಂದೆ ಕೀರ್ತಿ ಎಂಬುವರ ಕೊಲೆ ಪ್ರಕರಣದಲ್ಲಿ ಪ್ರಮುಖ ಆರೋಪಿಯಾಗಿದ್ದರು. ತನಿಖೆ ನಂತರ ಸತ್ಯಾಂಶ ಗೊತ್ತಾಗಲಿದೆ.

ವೈಯಕ್ತಿಕ ಗುಂಪುಗಳ ನಡುವಿನ ಘರ್ಷಣೆಯಾಗಿದೆಯೇ ಹೊರತು ಧರ್ಮ- ಧರ್ಮದ ನಡುವಿನ ದ್ವೇಷ ಇದಲ್ಲ. ಕರಾವಳಿಗೆ ಅದರದೇ ಆದ ಪರಂಪರೆ ಇದೆ ಎಂದು ಹೇಳಿದರು. ದಕ್ಷಿಣ ಕನ್ನಡ ಜಿಲ್ಲೆಯನ್ನು ಮುಂದೆ ಕೊಂಡಯ್ಯಲು ಎಲ್ಲರ ಸಹಕಾರ ಬೇಕು. ಯಾವುದೇ ಸಮಾಜ, ಧರ್ಮ ನಮ್ಮ ಮಂಗಳೂರನ್ನು ಹಿಂದಕ್ಕೆ ಕೊಂಡಯ್ಯಬಾರದು. ಈ ಕೃತ್ಯಗಳು ನಡೆದಾಗ ದ್ವೇಷದ ಭಾವನೆ ಉಂಟಾಗುವುದು ಸಹಜ.

ಇದನ್ನು ನಿಯಂತ್ರಿಸುವ ಕೆಲಸವನ್ನು ಪೊಲೀಸ್ ಇಲಾಖೆ ಮಾಡಬೇಕು ಎಂದರು. ಫಾಜಿಲ್ ಹತ್ಯೆಗೆ ಪ್ರತೀಕಾರ ಎಂಬ ಭಾವ ಜನರಲ್ಲಿತ್ತು. ಆದರೆ ಫಾಜಿಲ್ ಅವರ ತಂದೆಯೇ ದೂರವಾಣಿ ಕರೆ ಮಾಡಿ ಇಂತಹ ಪ್ರತಿಕಾರ ನಮದಲ್ಲ. ಘಟನೆಗೂ ನಮಗೂ ಸಂಬಂಧವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ ಎಂದು ಹೇಳಿದರು.

ರಾಜಕೀಯವಾಗಿ ಉತ್ತರ ಕೊಡಲು ಹೋಗುವುದಿಲ್ಲ. ರಾಜಕೀಯವಾಗಿ ಯಾರೂ ಈ ಘಟನೆಯನ್ನು ಬಳಸಿಕೊಳ್ಳಬೇಡಿ. ಆರೋಪ ಮಾಡುತ್ತಿರುವವರು ಆತಾವಲೋಕನ ಮಾಡಿಕೊಳ್ಳಲಿ ಎಂದು ಅವರು ಹೇಳಿದರು.

## ಚಾಮರಾಜನಗರದ ಡಿಸಿ ಕಚೇರಿಗೆ ಬಾಂಬ್ ಬೆದರಿಕೆ ಸಂದೇಶ

• ಉದಯವಾಹಿನಿ, ಬೆಂಗಳೂರು

ಚಾಮರಾಜನಗರದ ಡಿಸಿ ಕಚೇರಿಗೆ ಇ-ಮೇಲ್‌ನಲ್ಲಿ ಬಂದ ಬಾಂಬ್ ಬೆದರಿಕೆ ಸಂದೇಶದಿಂದ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಡಿಸಿ ಕಚೇರಿಯ ಅಧಿಕೃತ ಮೇಲ್‌ಗೆ ಶುಕ್ರವಾರ ಮಧ್ಯಾಹ್ನ 3 ಗಂಟೆಗೆ ಡಿಸಿ ಕಚೇರಿ ಸ್ಫೋಟಗೊಳ್ಳಲಿದೆ ಎಂಬ ಸಂದೇಶ ಗಮನಿಸಿದ ಸಿಬ್ಬಂದಿ ತಕ್ಷಣ ಡಿಸಿಗೆ ತಿಳಿಸಿದ್ದಾರೆ. ಡಿಸಿ ಅವರು ಈ ವಿಷಯವನ್ನು ಎಸ್‌ಪಿಯವರಿಗೆ ತಿಳಿಸಿದ್ದು, ಜಿಲ್ಲಾಡಳಿತ ಭವನದಲ್ಲಿರುವ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿಯವರುಗಳು ಕಚೇರಿಯಿಂದ ಹೊರ ಕಳುಹಿಸಿದ್ದಾರೆ. ಸ್ಥಳಕ್ಕೆ ದೌಡಾಯಿಸಿದ ಪೊಲೀಸರು, ಬಾಂಬ್ ನಿಷ್ಕ್ರೀಯ ದಳ, ಬಾಂಬ್ ಪತ್ತೆದಳ ಡಿಸಿ ಕಚೇರಿ ಪೂರ್ತಿ ಪರಿಶೀ ಲಿಸಿದರಾದರೂ ಯಾವುದೇ ಬಾಂಬ್ ಮಾದರಿಯ ವಸ್ತುಗಳು ಪತ್ತೆಯಾಗಿಲ್ಲ. ಇದು ಹುಸಿ ಇ-ಮೇಲ್ ಸಂದೇಶ ಎಂಬುವುದು ಗೊತ್ತಾಗಿ ಅಧಿಕಾರಿಗಳು, ಸಿಬ್ಬಂದಿಗಳು ನಿಟ್ಟುಸಿರು ಬಿಟ್ಟಿದ್ದಾರೆ. ಪರಿಶೀಲನೆ ಈ ಇ-ಮೇಲ್ ಸಂದೇಶ ಎಲ್ಲಿಂದ ಬಂದಿದೆ,ಯಾರು ಯಾತಕ್ಕಾಗಿ ಡಿಸಿ ಕಚೇರಿಗೆ ಸಂದೇಶ ಕಳುಹಿಸಿದ್ದಾರೆ ಎಂಬುವುದರ ಬಗ್ಗೆ ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಈ ನಡುವೆ ರಾಯಚೂರು ಜಿಲ್ಲಾಧಿಕಾರಿಗಳ ಕಚೇರಿಗೂ ಇದೇ ರೀತಿಯ ಬಾಂಬ್ ಬೆದರಿಕೆ ಸಂದೇಶ ಬಂದಿದ್ದು, ಪೊಲೀಸರು ಹಾಗೂ ಬಾಂಬ್ ನಿಷ್ಕ್ರೀಯ ದಳ ಪರಿಶೀಲನೆ ನಡೆಸಿದ್ದು, ಯಾವುದೇ ಬಾಂಬ್ ಪತ್ತೆಯಾಗಿಲ್ಲ.

## ಸುಹಾಸ್ ಶೆಟ್ಟಿ ಕೊಲೆ ಪ್ರಕರಣದ ಸಮಗ್ರ ತನಿಖೆಗೆ ಸಿಎಂ ಸೂಚನೆ

• ಉದಯವಾಹಿನಿ, ಬೆಂಗಳೂರು

ಮಂಗಳೂರಿನಲ್ಲಿ ನಡೆದಿರುವ ರೌಡಿಶೀಟರ್ ಕೊಲೆಗೆ ಕಾರಣಗಳೇನು ಎಂಬುದನ್ನು ಸಮಗ್ರ ತನಿಖೆ ನಡೆಸಲು ಪೊಲೀಸರಿಗೆ ಸೂಚನೆ ನೀಡಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ಮಂಡ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಗಳೂರಿನಲ್ಲಿ ಕೊಲೆ ಆದವನು ರೌಡಿ ಶೀಟರ್ ಎನ್ನಲಾಗುತ್ತಿದೆ. ಸಮಗ್ರ ತನಿಖೆಗೆ ಸೂಚನೆ ಅಪರಾಧಿಗಳನ್ನು ಪತ್ತೆ ಹಚ್ಚಿ ಬಂಧಿಸಿ ಕಾನೂನಿನ ಪ್ರಕಾರ ಕ್ರಮ ಕೈಗೊಳ್ಳಲು ಕಾನೂನು ಸುವ್ಯವಸ್ಥೆಯ ಎಡಿಜಿಪಿಯವರಿಗೆ ಸೂಚನೆ ನೀಡಲಾಗಿದೆ ಎಂದರು.

ಮನುಷ್ಯರ ಪ್ರಾಣ ಮುಖ್ಯ. ಅಪರಾಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಆದೇಶಿಸಲಾಗಿದೆ. ಕೊಲೆ ಪೂರ್ವ ನಿಯೋಜಿತವೇ ಅಲ್ಲವೇ ಎಂಬುದು ಇನ್ನು ಗೊತ್ತಿಲ್ಲ. ಅದರ ತನಿಖೆ ನಡೆಯಬೇಕು ಎಂದು ಹೇಳಿದರು. ಇಂತಹ ಘಟನೆಗಳು ನಡೆದಾಗ ಬಿಜೆಪಿಯವರು ಸ್ಥಳಕ್ಕೆ ಹೋಗಿ ರಾಜಕೀಯ ಮಾಡುತ್ತಾರೆ. ಕಳೆದ ವಾರ ಪಹಲ್ಗಾಮ್ ನಲ್ಲಿ ಉಗ್ರರ ದಾಳಿ ಯಾಗಿ 26 ಮಂದಿ ಸಾವನ್ನಪ್ಪಿದ್ದರು. ಅಲ್ಲಿಗೆ ಪ್ರಧಾನಿ ಯವರು ಭೇಟಿ ನೀಡಿದ್ದಾರೆಯೇ? ಅದು ಭದ್ರತಾ ಲೋಪವಲ್ಲವೇ ಎಂದು ಪ್ರಶ್ನಿಸಿದರು.



ಉದಯವಾಹಿನಿ ಚಿತ್ರ

ನಮ್ಮಿಂದ ಸಚಿವ ಸಂತೋಷ್ ಲಾಡ್ ಪಹಲ್ಗಾಮ್‌ಗೆ ಹೋಗಿದ್ದರು. ಅವರನ್ನು ವಿಚಾರಿಸಿದಾಗ ದಾಳಿಯಾದ ಸಂದರ್ಭದಲ್ಲಿ ಒಬ್ಬ ಭದ್ರತಾ ಸಿಬ್ಬಂದಿಯೂ ಇರಲಿಲ್ಲ ಎನ್ನಲಾಗಿದೆ. ಇದೆಲ್ಲ ವೈಫಲ್ಯ ಎಂದು ಹೇಳಲಾಗುವುದಿಲ್ಲವೇ? ಎಂದು ಮರುಪ್ರಶ್ನೆ ಮಾಡಿದರು.

ಸಭಾಧ್ಯಕ್ಷ ಯು.ಟಿ.ಖಾದರ್ ಅವರಿಗೆ ಬೆದರಿಕೆ ಬಂದಿರುವುದರ ಬಗ್ಗೆ ನನಗೆ ಮಾಹಿತಿ ಇಲ್ಲ. ಹಾಗೆ ನೋಡಿದರೆ ನನಗೂ ಕೂಡ ಬಹಳಷ್ಟು ಬೆದರಿಕೆಗಳು ಬರುತ್ತಿರುತ್ತವೆ. ಅದಕ್ಕೆಲ್ಲ ತಲೆ ಕೆಡಿಸಿಕೊಳ್ಳುವುದಿಲ್ಲ ಎಂದರು. ಚಾಮರಾಜನಗರ ಜಿಲ್ಲಾಧಿಕಾರಿಗಳ ಕಚೇರಿಯನ್ನು ಸ್ಫೋಟಿಸುವುದಾಗಿ ಬೆದರಿಕೆ ಕರೆ ಬಂದಿರುವ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದು ಹೇಳಿದರು. ಮದ್ಯದ ಬೆಲೆ ಹೆಚ್ಚಾಗುವುದಕ್ಕೆ ಟೆಂಪ್ರೆನ್ಸ್ ಕೋಡ್ ಅನ್ವಯವಾಗಲಿದೆ. ಅದು ಕಾರಣ ಎಂದು ತಿಳಿಸಿದರು.

# ಹಿಂದೂಗಳನ್ನೇ ಹತ್ಯೆ ಮಾಡುವ ಸಂಚನ್ನು ಕೂಡಲೇ ನಿಲ್ಲಿಸಬೇಕು

### ಹಿಂದೂಗಳನ್ನು ರಕ್ಷಿಸುವಂತ ಸರ್ಕಾರ ಇರಬೇಕೆ ಹೊರತು ಜಿಹಾದಿಗಳನ್ನು ಬೆಂಬಲಿಸುವ ಸರ್ಕಾರವಲ್ಲ : ಯತ್ನಾಳ್

• ಉದಯವಾಹಿನಿ, ಬೆಂಗಳೂರು



ಹಿಂದೂಗಳನ್ನು ರಕ್ಷಿಸುವಂತ ಸರ್ಕಾರ ಇರಬೇಕೆ ಹೊರತು, ರಾಜಕೀಯ ಕಾರಣಕ್ಕಾಗಿ ನಿಷೇಧಿತ ಪಿ.ಎಫ್.ಐ ರಂತ ಸಂಘಟನೆಗಳಿಗೆ ಸರ್ಕಾರ ಬೆಂಬಲ ನೀಡಬಾರದು ಎಂದು ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ತಿಳಿಸಿದ್ದಾರೆ.

ಮಂಗಳೂರಿನಲ್ಲಿ ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಹತ್ಯೆಯನ್ನು ತಮ್ಮ ಎಕ್ಸ್ ಖಾತೆಯಲ್ಲಿ ಖಂಡಿಸಿರುವ ಅವರು, ಬಹುಸಂಖ್ಯಾತ ಹಿಂದೂಗಳನ್ನೇ ಗುರಿಯಾಗಿಸಿಕೊಂಡು ಹತ್ಯೆ ಮಾಡುವ ಈ ಸಂಚನ್ನು ಕೂಡಲೇ ನಿಲ್ಲಿಸಬೇಕು ಎಂದು ಒತ್ತಾಯಿಸಿದ್ದಾರೆ. ಹಿಂದೂ ಕಾರ್ಯಕರ್ತರು, ಬಜರಂಗ ದಳ ದವರು, ರಾಷ್ಟ್ರೀಯ ಸ್ವಯಂ ಸೇವಕ ಸಂಘದವರು ಸಮಾಜಕ್ಕಾಗಿ ಕೆಲಸ ಮಾಡುತ್ತಿದ್ದಾರೆ ಹೊರತು, ದೇಶ ವಿರೋಧಿ ಚಟುವಟಿಕೆಯಲ್ಲಿ ಭಾಗವಹಿಸಿಲ್ಲ.

ಗೋ ರಕ್ಷಣೆ, ಅಕ್ರಮ ಕಸಾಯಿ ಖಾನೆ ವಿರುದ್ಧ ಹೋರಾಟ ಮಾಡುತ್ತಿರುವುದು ಕೆಲವರಿಗೆ ಅಪಥ್ಯವಾಗಿದೆ. ಕೊಲೆಗಡುಕರು ಸ್ಲೀಪರ್ ಸೆಲ್‌ಗಳನ್ನೂ ಅವರಿಗೆ ಉತ್ತೇಜನ ಆರ್ಥಿಕ ನೆರವು, ಉಳಿದುಕೊಳ್ಳುವುದಕ್ಕೆ ಸ್ಥಳ ನೀಡಿದವರನ್ನು ಪತ್ತೆ ಹಚ್ಚಿ ಅವರನ್ನು ಗಲ್ಲಿಗೇರಿಸಲಿ ಎಂದು ಅವರು ಆಗ್ರಹಿಸಿದ್ದಾರೆ. 2015ರ ಫೆಬ್ರವರಿಯಲ್ಲಿ ಹಿಂದೂ ಕಾರ್ಯಕರ್ತ ವಿಶ್ವನಾಥ್ ಅವರನ್ನು ಪಾಪ್ಯುಲರ್ ಫ್ರಂಟ್ ಆಫ್ ಇಂಡಿಯಾ ಸಂಘಟನೆಯ ಉಗ್ರರಿಂದ ಹತ್ಯೆ ಮಾಡಲಾಗಿತ್ತು ಎಂದು ಆರೋಪಿಸಿರುವ ಅವರು, 2015ರ ಅಕ್ಟೋಬರ್ ನಲ್ಲಿ ರಾಷ್ಟ್ರೀಯ ಸ್ವಯಂ ಸೇವಕ, ಬಜರಂಗ ದಳದ ಕಾರ್ಯಕರ್ತ, ಗೋ ರಕ್ಷಣೆಯಲ್ಲಿ ಕೆಲಸ ಮಾಡುತ್ತಿದ್ದ ಪ್ರಶಾಂತ್ ಪೂಜಾರಿ ಅವರನ್ನು ಮೂಡಬಿದ್ರೆಯಲ್ಲಿ ಕೊಲೆ ಮಾಡಲಾಗಿತ್ತು ಎಂದು ಹೇಳಿದ್ದಾರೆ. 2015ರ ನವೆಂಬರ್‌ನಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಸ್ವಯಂಸೇವಕರು, ವಿಶ್ವ ಹಿಂದೂ ಪರಿಷದ್ ಸಂಘಟನಾ ಕಾರ್ಯದರ್ಶಿಗಳಾಗಿದ್ದ ಕುಟ್ಟಪ್ಪ ಅವರನ್ನು ಹಾಡ ಹಗಲಿನಲ್ಲೇ ದುಷ್ಕರ್ಮಿಗಳು ಕೊಡಗಿನಲ್ಲಿ ಬರ್ಬರವಾಗಿ ಹತ್ಯೆ ಮಾಡಿದರು. ಟಿಪ್ಪು ಜಯಂತಿ ವಿರುದ್ಧ ಪ್ರತಿಭಟನೆ ಮಾಡುತ್ತಿದ್ದ ಹರೀಶ್ ಅವರನ್ನು ಜಿಹಾದಿಗಳು ಕೊಲೆ ಮಾಡಿದರು. ಇದೆ ವೇಳೆ, ರಾಜು ಎಂಬುವವರನ್ನು ಸಹ ಹತ್ಯೆ ಮಾಡಲಾಗಿತ್ತು. 2016ರ ಆಗಸ್ಟ್‌ನಲ್ಲಿ ಬಜರಂಗ ದಳದ ಸಕ್ರಿಯ ಕಾರ್ಯಕರ್ತ ಚರಣ್ ಪೂಜಾರಿ ಅವರನ್ನು ಮಂಗಳೂರಿನ ವಾಮಂಜೂರಿನಲ್ಲಿ ಹತ್ಯೆ ಮಾಡಿದರು. ಹತ್ಯೆಯನ್ನು ಮೊಹಮ್ಮದ್ ಶಾಹ್ರುಖ್, ಮುಸ್ತಫಾ, ರಹೀಫ್, ನವಾಜ್ ಮಾಡಿದ್ದಾರೆಂದು ಪೊಲೀಸರು ಅರೆಸ್ಟ್ ಮಾಡಿದ್ದರು.

> 2017ರ ಡಿಸೆಂಬರ್ ಹೊನ್ನಾವರದಲ್ಲಿ ವಿಶ್ವ ಹಿಂದೂ ಪರಿಷದ್‌ನ ಯುವ ಕಾರ್ಯಕರ್ತ ಪರೇಶ್ ಮೇಸ್ತ್ರ ಅವರನ್ನು ಹತ್ಯೆ ಮಾಡಲಾಗಿತ್ತು 2024ರ ಡಿಸೆಂಬರ್ ನಲ್ಲಿ ದಕ್ಷಿಣ ಕನ್ನಡದ ಬಿಜೆಪಿ ಯುವ ಮೋರ್ಚಾ ಕಾರ್ಯದರ್ಶಿಯಾಗಿದ್ದ ಪ್ರವೀಣ್ ನೆಟ್ಟಾರು ಅವರನ್ನು ದಕ್ಷಿಣ ಕನ್ನಡ ಬೆಳ್ಳಾರೆ ಗ್ರಾಮದಲ್ಲಿ ಹತ್ಯೆ ಮಾಡಲಾಗಿತ್ತು. 2014ರ ಆಗಸ್ಟ್‌ನಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಫಣೀಂದ್ರ ಅವರನ್ನು ಬೆಂಗಳೂರಿನ ಜಾಲಹಳ್ಳಿಯಲ್ಲಿ ಹತ್ಯೆ ಮಾಡಲಾಗಿತ್ತು. ಪಟ್ಟಿ ಇನ್ನೂ ದೊಡ್ಡದಿದೆ
>
> - ಬಸನಗೌಡ ಪಾಟೀಲ್ ಯತ್ನಾಳ್
> ಬಿಜೆಪಿ ಉಚ್ಚಾಟಿತ ಶಾಸಕ

**2016ರ ನವಂಬರ್‌ನಲ್ಲಿ ತಿಪಟೂರಿನ ರುದ್ರೇಶ್ ಅವರನ್ನು ಜಿಹಾದಿಗಳು ಹತ್ಯೆ ಮಾಡಿದರು. 2016ರ ಮಾರ್ಚ್‌ನಲ್ಲಿ ಮೈಸೂರಿನ ಉದಯಗಿರಿಯ ಚಹಾ ಅಂಗಡಿಯಲ್ಲಿ ಚಹಾ ಸೇವಿಸುತ್ತಿದ್ದ ಬಿಜೆಪಿ ಕಾರ್ಯಕರ್ತ ರಾಜು ಕ್ಯಾತಮಾರನಹಳ್ಳಿಯನ್ನು ಹತ್ಯೆ ಮಾಡಲಾಗಿತ್ತು. 2016ರ ಆಗಸ್ಟ್‌ನಲ್ಲಿ ಅಖಂಡ ಭಾರತ ಸಂಕಲ್ಪ ದಿವಸ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಮನೆಗೆ ತೆರಳುತ್ತಿದ್ದ ಪ್ರವೀಣ್ ಪೂಜಾರಿ ಅವರನ್ನು ಕೊಡಗಿನ ಕುಶಾಲನಗರದಲ್ಲಿ ಹತ್ಯೆ ಮಾಡಲಾಗಿತ್ತು. 2016ರ ಅಕ್ಟೋಬರ್‌ನಲ್ಲಿ ಬೆಂಗಳೂರಿನ ಶಿವಾಜಿನಗರದಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ರುದ್ರೇಶ್ ಅವರನ್ನು ಹತ್ಯೆ ಮಾಡಲಾಗಿತ್ತು.**

# ರಾಜ್ಯದಲ್ಲಿ ಹಿಂದೂ ನಾಯಕರ ಕಗ್ಗೊಲೆ ನಡೆಯುತ್ತಿದೆ: ಸಂಸದ

## ಸುಹಾಸ್ ಶೆಟ್ಟಿ ಹತ್ಯೆ ಕೇಸ್: ಕಾಂಗ್ರೇಸ್ ಸರ್ಕಾರದ ಅನುಕಂಪದಿಂದ ಇಂತಹ ಘಟನೆಗಳು ಮರುಕಳಿಸುತ್ತಿದೆ: ಬಿ ವೈ ರಾಘವೇಂದ್ರ

• ಉದಯವಾಹಿನಿ, ಮೈಸೂರು

ರಾಜ್ಯದಲ್ಲಿ ಹಿಂದೂ ನಾಯಕರ ಕಗ್ಗೊಲೆ ನಡೆಯುತ್ತಿದೆ ಎಂದು ಸಂಸದ ಬಿ.ವೈ.ರಾಘವೇಂದ್ರ ಖಂಡಿಸಿದ್ದಾರೆ. ನಗರದ ಬಿಜೆಪಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ



ಮಾತನಾಡಿದ ಅವರು, ಮಂಗಳೂರಿನಲ್ಲಿ ಹಿಂದೂ ಕಾರ್ಯ ಕರ್ತ ಸುಹಾಸ್ ಶೆಟ್ಟಿ ಅವರನ್ನು ಸಾರ್ವಜನಿಕ ಸ್ಥಳದಲ್ಲೇ, ಸಾವಿರಾರು ಜನರ ಎದುರು ಹತ್ಯೆ ಮಾಡಿ ಗೂಂಡಾಗಿರಿ ಪ್ರದರ್ಶಿಸಿರುವುದು ಅಮಾನವೀಯ ಎಂದರು.

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದ ನಂತರ ಹಿಂದೂ ನಾಯಕರ ಹತ್ಯೆ ಪ್ರಕರಣಗಳು ಹೆಚ್ಚಾಗಿವೆ. ಶಿವಮೊಗ್ಗ, ಮಂಗಳೂರು, ಮೈಸೂರಿನಲ್ಲಿ ಇಂತಹ ಘಟನೆಗಳು ಮರುಕಳಿಸುತ್ತಿವೆ. ಹಿಂದುತ್ವ ತುಳಿಯುವ ಷಡ್ಯಂತ್ರ ನಡೆದಿದೆ ಎಂದು ಟೀಕಿಸಿದರು. ಕಾಂಗ್ರೆಸ್ ಅಧಿಕಾರಕ್ಕೆ ಬಂದ ಬಳಿಕ ಕೆ.ಜೆ.ಹಳ್ಳಿ, ಡಿ.ಜೆ.ಹಳ್ಳಿ ಪ್ರಕರಣಗಳ ಕೇಸ್ ಹಿಂಪಡೆಯಲಾಯಿತು. ಹುಬ್ಬಳ್ಳಿ ಠಾಣೆಗೆ ಬೆಂಕಿ ಹಚ್ಚಲಾಯಿತು. ಸರಕಾರದ ಬಿಗಿಯಾದ ಕ್ರಮ ತೆಗೆದುಕೊಳ್ಳಲು, ಈ ಸರಕಾರದಲ್ಲಿ ತಮಗೇ ರಕ್ಷಣೆ ಇದೆ ಎಂಬ ಕಾರಣಕ್ಕೆ ಹತ್ಯೆಗಳು ನಡೆಯುತ್ತಿವೆ ಎಂದರು.

**ಜಾತಿ ಗಣತಿ ಸ್ವಾಗತಾರ್ಹ:** ಸ್ವಾತಂತ್ರ್ಯ ನಂತರ ದೇಶಾದ್ಯಂತ ಜಾತಿ ಗಣತಿ ನಡೆಸುವ ಕೇಂದ್ರ ಸರಕಾರದ ನಿರ್ಧಾರ ಸ್ವಾಗತಾರ್ಹ. ಅಂಬೇಡ್ಕರ್ ಫೋಟೋ ಪೂಜೆಗೆ ಸೀಮಿತಗೊಳಿಸಿದವರಿಂದ ಜಾತಿ ಗಣತಿ ನಿರೀಕ್ಷೆ ಮಾಡಲು ಸಾಧ್ಯವಿರಲಿಲ್ಲ.

ಅಂಬೇಡ್ಕರ್ ಸೋಲಿಸಿದ್ದು ಯಾರು ಎಂಬುದು ಜಗತ್ತಿಗೆ ಗೊತ್ತಿದೆ. ಜನಗಣತಿಯೂ ಸಾಮಾಜಿಕ ದನಿ ಕೊಡಲಿದೆ, ಎಂದರು. ಜಾತಿ ಗಣತಿಯನ್ನು ರಾಜ್ಯ ಸರಕಾರದಿಂದ ಕೇಂದ್ರ ನಕಲು ಮಾಡಿದೆಯೇ? ಎಂಬ ಪ್ರಶ್ನೆಗೆ ಉತ್ತರಿಸಿದ ಬಿ.ವೈ.ರಾಘವೇಂದ್ರ, ಒಂದು ರಾಜ್ಯದ ಕಾರ್ಯಕ್ರಮದಿಂದ ಕಲಿತು ದೇಶ ನಡೆಸುವ ಸ್ಥಿತಿ ಮೋದಿ ಅವರಿಗೆ ಬಂದಿಲ್ಲ, ಎಂದು ಪ್ರತ್ಯುತ್ತರಿಸಿದರು.



> ಪ್ರಧಾನಿ ನರೇಂದ್ರ ಮೋದಿ ಅವರ ಯುದ್ಧದ ಬಗೆಗಿನ ನಿರ್ಧಾರವನ್ನು ಸಿಎಂ ಸಿದ್ದರಾಮಯ್ಯ ಟೀಕಿಸಿದ್ದು, ಹಿಂದೂ ಕಾರ್ಯಕರ್ತರ ಹತ್ಯೆಯನ್ನು ದೇಶ ಗಮನಿಸುತ್ತಿದೆ. ಎರಡೂ ಧರ್ಮಗಳ ಮಧ್ಯೆ ದುರ್ಘಟನೆ ಮರುಕಳಿಸುತ್ತಿದೆ. ಬಿಗಿ ನಿಲುವು ತೆಗೆದುಕೊಳ್ಳದಿದ್ದರೆ ಕಾಂಗ್ರೆಸ್ ನುಚ್ಚು ನೂರಾಗುತ್ತದೆ
>
> – ಬಿ.ವೈ.ರಾಘವೇಂದ್ರ, ಸಂಸದ

> ಮಂಗಳೂರಿನ ಘಟನೆಯನ್ನು ಉಗ್ರವಾಗಿ ಇಡೀ ರಾಜ್ಯ ಖಂಡಿಸುತ್ತದೆ. ಆದರೆ, ಅಲ್ಲಿನ ಪೊಲೀಸ್ ಕಮಿಷನರ್ ಆರಂಭದ ತನಿಖೆಯಲ್ಲಿ ಅವನನ್ನು ರೌಡಿ ಶೀಟರ್ ಎಂದು ಬಿಂಬಿಸಿದ್ದಾರೆ. ಮಾತ್ರವಲ್ಲದೇ ಕೊಲೆಯಾದ ವ್ಯಕ್ತಿ ಬೇಲ್ ಮೇಲೆ ಇದ್ದ ಎಂದು ಹೇಳಿಕೆ ನೀಡಿದ್ದಾರೆ. ಬೇಲ್ ಮೇಲೆ ಇದ್ದ ಮಾತ್ರಕ್ಕೆ ಕೊಲೆ ಮಾಡಬಹುದೇ?
>
> – ಟಿ.ಎಸ್.ಶ್ರೀವತ್ಸ, ಶಾಸಕ

**ಹಂತಕರನ್ನು ಬಂಧಿಸದಿದ್ದರೆ ಉಗ್ರ ಹೋರಾಟ:** ಕೇಂದ್ರ ಸರಕಾರ ಕಾಶ್ಮೀರದ ಪಹಲ್ಗಾಮ್ ದಾಳಿಗೆ ಕಾರಣರಾದ ಉಗ್ರರ ಮನೆಗಳನ್ನು ಧ್ವಂಸ ಮಾಡಿದಂತೆ ಮಂಗಳೂರಿನಲ್ಲಿ ಹಿಂದೂ ಕಾರ್ಯಕರ್ತರ ಕೊಲೆ ಪ್ರಕರಣದಲ್ಲಿ ರಾಜ್ಯ ಸರಕಾರ ಕಠಿಣ ಕ್ರಮ ಕೈಗೊಳ್ಳಬೇಕೆಂದು ಎಂದು ಶಾಸಕ ಟಿ.ಎಸ್.ಶ್ರೀವತ್ಸ ಒತ್ತಾಯಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರು ನಡೆಸಿದ ಭಯೋತ್ಪಾದನಾ ದಾಳಿ ಮತ್ತು ಮಂಗಳೂರಿನ ಹಿಂದೂ ಕಾರ್ಯಕರ್ತನನ್ನು ಬರ್ಬರವಾಗಿ ಹತ್ಯೆ ಮಾಡಿರುವ ಪ್ರಕರಣಗಳೆರಡೂ ತಾಳೆಯಾಗುತ್ತಿದ್ದು, ಇದು ಪ್ರತೀಕಾರದ ಹತ್ಯೆ ಆಗಿರಬಹುದು ಎಂಬ ಅನುಮಾನ ಮೂಡುತ್ತದೆ, ಎಂದರು. ಪ್ರಸ್ತುತ ಕಾಂಗ್ರೆಸ್ ಸರಕಾರವಿರುವುದರಿಂದ ನಾವು ತಪ್ಪಿಸಿಕೊಳ್ಳಬಹುದು ಎಂಬ ಮನಸ್ಥಿತಿಯೇ ಈ ತರಹದ ಘಟನೆಗಳು ಮರುಕಳಿಸಲು ಕಾರಣವಾಗಿವೆ. ಹಾಗಾಗಿ ಕೂಡಲೇ ಈ ಪ್ರಕರಣದ ಹಂತಕರನ್ನು ಬಂಧಿಸಬೇಕು. ಇಲ್ಲದಿದ್ದರೆ ಉಗ್ರ ಹೋರಾಟ ಮಾಡುತ್ತೇವೆ, ಎಂದು ಎಚ್ಚರಿಸಿದರು.

# ಮನೆ ದೇವರ ಲಾವಣಿ ಹಾಡಿದ ಸಿದ್ದರಾಮಯ್ಯ

• ಉದಯವಾಹಿನಿ, ಮಂಡ್ಯ



ಅಲ್ಲಾಪಟ್ಟಣದಿಂದ ಮೆಲ್ಲ ಮೆಲ್ಲನೇ ಬಂದೆ, ಅನ್ನದಾನೇಶ್ವರಾ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಮನೆದೇವರ ಕುರಿತಾದ ಲಾವಣಿಯ ಸಾಲುಗಳನ್ನು ಹಾಡಿದ್ದಾರೆ. ಶ್ರೀರಂಗಪಟ್ಟಣದ ಅಲ್ಲಾಪಟ್ಟಣದ ಶ್ರೀಅನ್ನದಾನೇಶ್ವರ ಸ್ವಾಮಿ ದೇವಸ್ಥಾನ ಪುನರ್ ನಿರ್ಮಾಣ, ವಿಗ್ರಹಗಳ ಸ್ಥಾಪನೆ ಹಾಗೂ ಗೋಪುರ ಕುಂಭಾಭಿಷೇಕ ನೆರವೇರಿಸಿ ಮಾತನಾಡುವ ವೇಳೆ ತಾವು ಬಾಲ್ಯದಲ್ಲಿ ಹಾಡುತ್ತಿದ್ದನ್ನು ಹಾಗೂ ವೀರ ಕುಣಿತದಲ್ಲಿ ನರ್ತಿಸುತ್ತಿದ್ದದ್ದನ್ನು ಸರಿಸಿಕೊಂಡು, ಲಾವಣಿ ಹಾಡಿದರು. ಸಿದ್ದರಾಮೇಶ್ವರ ಪೂಜೆಗೆ ವೀರಕುಣಿತದ ಜನಪದ ನೃತ್ಯ ಈಗಲೂ ಚಾಲ್ತಿಯಲ್ಲಿದೆ. ನಾನೂ ವೀರ ಕುಣಿತಕ್ಕೆ ಸೇರಿದ್ದೆ. ಆಮೇಲೆ ರಾಜಪ್ಪ ಮೇಸ್ಟ್ರು ನನ್ನನ್ನು ಕರೆದುಕೊಂಡು ಹೋಗಿ ಐದನೇ ತರಗತಿಗೆ ಶಾಲೆಗೆ ಸೇರಿಸಿದರು. ಹೀಗೆ ನನ್ನ ಶಿಕ್ಷಣ ಆರಂಭವಾಯಿತು. ಅಲ್ಲಿಂದ ನಾನು ಎಲ್ಲೂ ಫೇಲಾಗಲೇ ಇಲ್ಲ ಎಂದರು.

ಜನರ ಸೇವೆಯೇ ದೇವರ ಸೇವೆ ಎಂದು ನಂಬಿದವನು ನಾನು. ಬಸವಣ್ಣನವರು ಇದನ್ನೇ ದೇಹವೇ ದೇಗುಲ ಎಂದು ಹಾಡಿದರು. ದೇವರು ಮತ್ತು ಜನರ ನಡುವೆ ಮಧ್ಯವರ್ತಿ ಇರಬಾರದು ಎನ್ನುವುದು ಬಸವಣ್ಣನವರ ಮೌಲ್ಯವಾಗಿತ್ತು. ನಾವು ಮಾನವೀಯವಾಗಿ ಇದ್ದರಷ್ಟೆ ದೇವರ ಸಹಾಯ ಸಿಗುತ್ತದೆ. ಅಮಾನವೀಯತೆಯಿಂದ ನಡೆದುಕೊಳ್ಳುವವರಿಗೆ ಯಾವ ದೇವರೂ ಸಹಾಯ ಮಾಡುವುದಿಲ್ಲ ಎಂದರು. ಅಂಬೇಡ್ಕರ್ ಅವರ ಸಂವಿಧಾನ, ಬಸವಾದಿ ಶರಣರ ಆಶಯದಂತೆ ಜಾತಿ ನಿರ್ಮೂಲನೆ ಮಾಡಬೇಕಿದೆ. ಜಾತಿಗೆ ಚಲನೆ ಇಲ್ಲ, ವರ್ಗಕ್ಕೆ ಚಲನೆ ಇದೆ. ನಿಂತ ನೀರಾಗಿರುವ ಜಾತಿಯನ್ನು ಅಳಿಸಬೇಕಾದರೆ ಶಿಕ್ಷಣ ಮತ್ತು ಆರ್ಥಿಕ ಹಾಗೂ ಸಾಮಾಜಿಕ ಸ್ವಾತಂತ್ರ್ಯ ಮತ್ತು ಅವಕಾಶಗಳನ್ನು ಒದಗಿಸಬೇಕು. ಆಗ ಮಾತ್ರ ಜಾತಿ ಅಳಿಸುವ ದಿಕ್ಕಿನಲ್ಲಿ ಸಾಗಬಹುದು ಎಂದರು. ಮೊದಲೆಲ್ಲಾ ವ್ಯಕ್ತಿಗಳ ಅರ್ಹತೆಯನ್ನು ಜಾತಿ ಆಧಾರದಲ್ಲಿ ಅಳೆಯುತ್ತಿದ್ದರು. ಇದು ಹೋಗಿ ನಿಜವಾದ ಅರ್ಹತೆ ಆಧಾರದಲ್ಲಿ ಅಳೆಯಬೇಕು. ನಾನು ಉಪಮುಖ್ಯಮಂತ್ರಿಯಾಗಿ ಮೊದಲ ಬಜೆಟ್ ಮಂಡಿಸುವಾಗ ನೂರು ಕುರಿ ಎಣಿಸಲು ಬರದವನು ಬಜೆಟ್ ಮಂಡಿಸ್ತಾನಾ ಎಂದು ಅಣಕಿಸಿದ್ದರು.

ಈಗ ನಾನು 16 ಬಜೆಟ್ ಮಂಡಿಸಿದ್ದೇನೆ. ಆದ್ದರಿಂದ ಅವಕಾಶ ಮುಖ್ಯ. ಅವಕಾಶ ಸಿಕ್ಕಾಗ ಎಲ್ಲರ ಪ್ರತಿಭೆ ಹೊರಗೆ ಬರುತ್ತದೆ ಎಂದರು. ಆಚಾರವೇ ಸ್ವರ್ಗ, ಅನಾಚಾರವೇ ನರಕ ಎನ್ನುವ ಬಸವಣ್ಣನವರ ಸರಳ ಧರ್ಮದ ಸಾರವನ್ನು ಪಾಲಿಸ ಬೇಕು. ಕರ್ಮ ಸಿದ್ಧಾಂತವನ್ನು ತಿರಸ್ಕರಿಸಿ. ಮಾಡಬಾರದ ಪಾಪದ ಕೆಲಸಗಳನ್ನು ಮಾಡಿ ಒಳ್ಳೇದು ಮಾಡಪ್ಪಾ ಎಂದರೆ ದೇವರು ಒಳ್ಳೇದು ಮಾಡಲ್ಲ ಎಂದರು.

# ಕ್ಷಮೆ ಕೇಳದಿದ್ದರೆ ರಾಜ್ಯದಾದ್ಯಂತ ಪ್ರತಿಭಟನೆಗೆ ಕರೆ

• ಉದಯವಾಹಿನಿ, ಚಿಕ್ಕಬಳ್ಳಾಪುರ



ಉದಯವಾಹಿನಿ ಚಿತ್ರ

ಗುಡಿಬಂಡೆಯ ಅಂಬೇಡ್ಕರ್ ವೃತ್ತದಲ್ಲಿ ಪುತ್ಥಳಿ ನಿರ್ಮಾಣದ ವಿಚಾರವಾಗಿ ಒಕ್ಕಲಿಗರು, ಬಲಿಜ ಸಮುದಾಯ ನಡುವೆ ನಡೆದ ಜಟಾಪಟಿಯ ವೇಳೆ ಕೆಂಪೇಗೌಡರಿಗೆ ಅವಮಾನ ಮಾಡಲಾಗಿದೆ. ಅವಮಾನಿಸಿರುವ ವ್ಯಕ್ತಿ ಕ್ಷಮೆ ಕೇಳದಿದ್ದರೆ ರಾಜ್ಯದಾದ್ಯಂತ ಪ್ರತಿಭಟನೆಗೆ ಕರೆ ನೀಡಬೇಕಾಗುತ್ತದೆ. ಅಧಿಕಾರಿಗಳು ವಿವಾದವನ್ನು ಕಾನೂನು ರೀತಿಯಲ್ಲಿ ಪರಿಹರಿಸಬೇಕು ಎಂದು ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕರು ಆಗ್ರಹಿಸಿದರು.

ನಗರದಲ್ಲಿ ಶುಕ್ರವಾರ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಟಿ.ಕೋನಪ್ಪರೆಡ್ಡಿ, ಗುಡಿಬಂಡೆಯ ಅಂಬೇಡ್ಕರ್ ವೃತ್ತದಲ್ಲಿ ಎರಡು ಗುಂಟೆ ಸರ್ಕಾರಿ ಖರಾಬಿನಲ್ಲಿ ಅವಳಿ ಬೈರೇಗೌಡ ಅವರ ವಿಗ್ರಹ ಪ್ರತಿಷ್ಠಾಪಿಸಲು ಈ ಹಿಂದೆಯೇ ತೀರ್ಮಾನಿಸಲಾಗಿತ್ತು. ಕೆಲವರು ಕೈವಾರ ತಾತಯ್ಯ ಅವರ ಪುತ್ಥಳಿ ಸ್ಥಾಪಿಸಬೇಕು ಎಂದು ಭೂಮಿ ಪೂಜೆ ನಡೆಸಲು ಮುಂದಾಗಿದ್ದಾರೆ. ಆ ಸಮಯದಲ್ಲಿ ಕೆಂಪೇಗೌಡರ ಪುತ್ಥಳಿಗೆ ಚಪ್ಪಲಿಯಲ್ಲಿ ಹಾರ ಹಾಕುತ್ತೇವೆ ಎಂದು ಕಿಡಿಗೇಡಿಯೊಬ್ಬ ಮಾತನಾಡಿದ್ದಾನೆ. ಆ ವಿಡಿಯೋಗಳು ಇವೆ ಎಂದು ಹೇಳಿದರು. ಕೈವಾರ ತಾತಯ್ಯ ಅವರ ಬಗ್ಗೆ ನಮಗೆ ಗೌರವವಿದೆ. ಆದರೆ ಕೆಲವರು ಜಾತಿಗಳ ನಡುವೆ ಸಾಮರಸ್ಯ ಕೆಡಿಸುವ ಕೆಲಸ ಮಾಡುತ್ತಿದ್ದಾರೆ. ಬಲಿಜ ಸಮುದಾಯದ ಹಿರಿಯರು ಸಾಮರಸ್ಯ ಕೆಡಿಸುವವರಿಗೆ ಬುದ್ದಿ ಹೇಳಬೇಕು. ಕೆಂಪೇಗೌಡರನ್ನು ಅವಮಾನಗೊಳಿಸಿದ ವ್ಯಕ್ತಿ ಕ್ಷಮೆ ಕೇಳಬೇಕು. ಇಲ್ಲದಿದ್ದರೆ ಪೊಲೀಸರು ಆತನನ್ನು ಬಂಧಿಸಬೇಕು ಎಂದು ಒತ್ತಾಯಿಸಿದರು.

**ಊರು ಖಾಲಿ ಮಾಡಬೇಕಾಗುತ್ತದೆ**


**ನಾವು ಇತರೆ ಸಮುದಾಯಗಳಿಗೆ ಗೌರವ ಕೊಡುತ್ತೇವೆ. ನಮ್ಮದು ಅಲ್ಪಸಂಖ್ಯಾತ ಸಮುದಾಯವಲ್ಲ. ಕೆಂಪೇಗೌಡರ ವಿರುದ್ಧ ಹೇಳಿಕೆ ನೀಡಿರುವುದನ್ನು ವಿರೋಧಿಸಿ ನಾವು ಜನರನ್ನು ಸೇರಿಸಿದರೆ ಅವಹೇಳನ ಮಾಡಿದವರು ಊರು ಖಾಲಿ ಮಾಡಬೇಕಾಗುತ್ತದೆ ಎಂದು ಉಮಾಪತಿ ಶ್ರೀನಿವಾಸಗೌಡ ತಿಳಿಸಿದರು.**

ರಾಜ್ಯ ಒಕ್ಕಲಿಗರ ಸಂಘದ ಗೌರವಾಧ್ಯಕ್ಷ ಯಲುವಳ್ಳಿ ರಮೇಶ್ ಮಾತನಾಡಿ, ಒಕ್ಕಲಿಗರು ಜಿಲ್ಲೆಯಲ್ಲಿ ಜಾತಿ ತಾರತಮ್ಯವನ್ನು ಮಾಡಿಲ್ಲ. ಇತರೆ ಸಮುದಾಯಗಳ ಜೊತೆ ಅಣ್ಣತಮ್ಮಂದಿರ ರೀತಿಯಲ್ಲಿ ಬದುಕುತ್ತಿದ್ದೇವೆ. ಆದರೆ ಕೆಲವು ಕಿಡಿಗೇಡಿಗಳು ಸಾರಮಸ್ಯ ಕೆಡಿಸುವ ಕೃತ್ಯ ಮಾಡುತ್ತಿದ್ದಾರೆ. ನಾವು ಯಾರ ತಂಟೆಗೂ ಹೋಗುವುದಿಲ್ಲ. ನಮ್ಮ ತಂಟೆಗೆ ಬಂದರೆ ಸುಮ್ಮನೆ ಬಿಡುವವರೂ ಅಲ್ಲ ಎಂದರು. ಒಕ್ಕಲಿಗ ಸಂಘದ ನಿರ್ದೇಶಕ ಹಾಗೂ ಚಿತ್ರ ನಿರ್ಮಾಪಕ ಉಮಾಪತಿ ಶ್ರೀನಿವಾಸಗೌಡ ಮಾತನಾಡಿ, ಗುಡಿಬಂಡೆ, ಚಿಕ್ಕಬಳ್ಳಾಪುರಕ್ಕೆ ತನ್ನದೇ ಇತಿಹಾಸವಿದ್ದು ಇದನ್ನು ಹಾಳು ಮಾಡಬಾರದು. ನಮ್ಮ ಸಮುದಾಯಕ್ಕೆ ಕಳಂಕ ತಂದರೆ ಬುದ್ಧಿ ಕಲಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

# ಬೋಗಸ್ ಖಾತೆ ವಿರುದ್ಧ ಕ್ರಮಕ್ಕೆ ಆಗ್ರಹ

• ಉದಯವಾಹಿನಿ, ಮಾಗಡಿ

ಮಾಜಿ.ಶಾಸಕ ಎ.ಮಂಜುನಾಥ್ ಅವರು ಎರಡು ವರ್ಷದ ನಂತರ ತಾಲ್ಲೂಕು ಕಚೇರಿಗೆ ಭೇಟಿ ನೀಡಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು. ಪಟ್ಟಣದ ತಾಲ್ಲೂಕು ಕಚೇರಿಗೆ ಶುಕ್ರವಾರ ಮಧ್ಯಾಹ್ನ 12ಗಂಟೆಗೆ ಭೇಟಿ ನೀಡಿದ ಅವರು, ಸಾರ್ವಜನಿಕ ಸಮಸ್ಯೆಗಳ ಬಗ್ಗೆ ಗ್ರೇಡ್ 2 ತಹಶೀಲ್ದಾರ್ ಜತೆ ಚರ್ಚೆ ನಡೆಸಿ ಕೂಡಲೇ ರೈತರ ಸಮಸ್ಯೆ ಬಗೆಹರಿಸುವ ಕೆಲಸ ಮಾಡಬೇಕು ಎಂದು ಹೇಳಿದರು. ತಹಶೀಲ್ದಾರ್ ಶರತ್ ಕುಮಾರ್, ಯಾವ ಕಾರಣಕ್ಕೆ ಗೈರು ಹಾಜರಾಗಿದ್ದಾರೆ ಎಂದು ತಿಳಿದಿಲ್ಲ. ಮುಂದಿನ ಬಾರಿ ತಾಲ್ಲೂಕು ಕಚೇರಿಗೆ ಭೇಟಿ ನೀಡಿದಾಗ ತಹಶೀಲ್ದಾರ್ ಇರುತ್ತಾರೆ ಎಂಬ ವಿಶ್ವಾಸವಿದೆ. ತಾಲ್ಲೂಕು ಆಡಳಿತ ಸಾಕಷ್ಟು ಭ್ರಷ್ಟಾಚಾರದಿಂದ ಕೂಡಿದೆ. ದಾಖಲೆ ಸಮೇತ ಶಾಸಕ ಬಾಲಕೃಷ್ಣ ಅವರಿಗೆ ನೀಡಲು ಸಿದ್ದ. ಬೋಗಸ್ ಖಾತೆಗಳ ವಿರುದ್ಧ ಕ್ರಮಕೈಗೊಳ್ಳಬೇಕು. ಇಲ್ಲವಾದರೆ ದಾಖಲೆ ಸಮೇತ ಅಧಿಕಾರಿಗಳಿಗೆ ನೀಡಲು ಸಿದ್ದನಿದ್ದೇನೆ ಎಂದು ಸವಾಲು ಹಾಕಿದರು.



ಉದಯವಾಹಿನಿ ಚಿತ್ರ

**ಮಾಜಿ ಶಾಸಕ ಎ.ಮಂಜುನಾಥ ಭೇಟಿ**

**ಲಂಚ ತಾಂಡವಾಡುತ್ತಿದೆ:** ನಾನು ಶಾಸಕನಾಗಿದ್ದ ಅವಧಿಯಲ್ಲಿ ಪ್ರತಿ 15 ದಿನಕ್ಕೊಮ್ಮೆ ಅಧಿಕಾರಿಗಳ ಸಭೆ ಕರೆದು ಸಾರ್ವಜನಿಕರ ಸಮಸ್ಯೆ ಬಗೆಹರಿಸಬೇಕೆಂದು ತಹಶೀಲ್ದಾರ್, ಕಂದಾಯ ಅಧಿಕಾರಿಗಳಿಗೆ ಸೂಚನೆ ಕೊಡುತ್ತಿದ್ದೆ. ಶಾಸಕ ಎಚ್.ಸಿ ಬಾಲಕೃಷ್ಣ ಅವರು ಎರಡು ವರ್ಷದ ಅವಧಿಯಲ್ಲಿ ಏನು ಬದಲಾವಣೆ ತಂದಿದ್ದಾರೆ ಎಂದರೆ ಕಿಟಕಿ, ಬಾಗಿಲು ಎಲ್ಲವೂ ಕೂಡ ಲಂಚ ಲಂಚ ಎಂದು ಕೇಳುವಂತೆ ಮಾಡಿದ್ದಾರೆ ಎಂದು ಟೀಕಿಸಿದರು.

**ಹಕ್ಕು ಪತ್ರ ಎಲ್ಲಿ?:** ಎರಡು ವರ್ಷದ ಅವಧಿಯಲ್ಲಿ ಶಾಸಕ ಬಾಲಕೃಷ್ಣ ಅವರು ಎಷ್ಟು ಜನಕ್ಕೆ ಹಕ್ಕುಪತ್ರ ನೀಡಿದ್ದಾರೆ ಎಂಬುದನ್ನು ತೋರಿಸಬೇಕು. ಬಗರ್ ಹುಕುಂ ಕಮಿಟಿ ಸದಸ್ಯರು ನಾನು ಶಾಸಕನಾಗಿದ್ದ ಅವಧಿಯಲ್ಲಿ 950ಕ್ಕೂ ಹಕ್ಕು ಪತ್ರಗಳಿಗೆ ಸಹಿ ಮಾಡಿ ಅಂತಿಮ ಹಂತಕ್ಕೆ ಕೊಡಲಾಗಿತ್ತು. ಈಗ ಅದನ್ನೆಲ್ಲ ಪರಿಶೀಲನೆ ಮಾಡುತ್ತೇನೆ ಎಂದು ಸುಳ್ಳು ದಾಖಲಾತಿ ಅದರಲ್ಲಿ ಸೇರಿಸಿ ಹಣ ಪಡೆಯಲು ಮುಂದಾಗುತ್ತಿದ್ದಾರೆ ಎಂದು ದೂರಿದರು.

ಇನ್ನು ಮುಂದೆ ಪ್ರತಿ ಶುಕ್ರವಾರ ರಜಾ ದಿನ ಹೊರತುಪಡಿಸಿ ತಾಲ್ಲೂಕು ಕಚೇರಿಗೆ ನಾನು ಭೇಟಿ ಕೊಡಲಿದ್ದು ರೈತರು ಯಾವುದೇ ಸಮಸ್ಯೆ ಇದ್ದರೂ ಅರ್ಜಿ ಕೊಟ್ಟರೆ ತಹಶೀಲ್ದಾರ್ ಮೂಲಕ ಆ ಅರ್ಜಿಗಳನ್ನು ಬಗೆಹರಿಸುವ ಕೆಲಸ ಮಾಡಲಾಗುವುದು ಎಂದರು.

# ವಾಹನ ಸವಾರರಿಗೆ, ಸಾರ್ವಜನಿಕರಿಗೆ ಕಂಟಕವಾಗಿರುವ ಗುಂಡಿಗಳು

• ಉದಯವಾಹಿನಿ, ಚಾಮರಾಜನಗರ

ನಗರದಲ್ಲಿ ಯುಜಿಡಿ ಮ್ಯಾನ್‌ಹೋಲ್‌ಗಳು ನಿರ್ವಹಣೆಯ ಕೊರತೆಯಿಂದ ಅಪಾಯಕಾರಿ ಸ್ಥಿತಿ ತಲುಪಿದ್ದು ಸಾರ್ವಜನಿಕರ ಜೀವಕ್ಕೆ ಕಂಟಕವಾಗಿ ಪರಿಣಮಿಸಿದೆ. ನಗರದ ಹಲವು ಬಡಾವಣೆಗಳಲ್ಲಿ ಅವೈಜ್ಞಾನಿಕ ವಾಗಿ ನಡುರಸ್ತೆಯಲ್ಲೇ ನಿರ್ಮಾಣ ಮಾಡಿರುವ ಮ್ಯಾನ್‌ಹೋಲ್‌ಗಳು ನಿರ್ವಹಣೆಯ ಕೊರತೆಯಿಂದ ಶಿಥಿಲಗೊಂಡಿದ್ದು ಅಲ್ಲಲ್ಲಿ ಮುಚ್ಚಳಗಳು ಮುರಿದು ಹೋಗಿದ್ದು ಅಪಾಯಕ್ಕೆ ಆಹ್ವಾನ ನೀಡುತ್ತಿವೆ. ಜೀವಹಾನಿಯಾಗುವ ಮುನ್ನ ದುರಸ್ತಿ ಮಾಡುವಂತೆ ನಗರಸಭೆ ಅಧಿಕಾರಿಗಳಿಗೆ ಹಾಗೂ ಜನಪ್ರತಿನಿಧಿಗಳಿಗೆ ಮನವಿ ಮಾಡಿದರೂ ಸ್ಪಂದನೆ ದೊರೆಯುತ್ತಿಲ್ಲ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

**ಎಲ್ಲೆಲ್ಲಿ ಸಮಸ್ಯೆ ಗಂಭೀರ:** ರಾಮಸಮುದ್ರದ ಕುಲುಮೆ ರಸ್ತೆಯಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿ ಮ್ಯಾನ್‌ಹೋಲ್ ಮುಚ್ಚಳ ಮುರಿದು ಬಿದ್ದಿದೆ. ಸರಿಯಾಗಿ ರಸ್ತೆಯ ಮಧ್ಯೆಯೇ ಯುಜಿಡಿ ಗುಂಡಿ ಇದ್ದು ಈ ಭಾಗದ ಸಾರ್ವಜನಿಕರು ನಿತ್ಯವೂ ಆತಂಕದಲ್ಲಿ ಓಡಾಡುವಂತಾಗಿದೆ. ರಸ್ತೆಯ ಆಸುಪಾಸಿನಲ್ಲಿ ಸುಮಾರು 30 ರಿಂದ 40 ಮನೆಗಳಿದ್ದು ನಿತ್ಯವೂ ಇದೇ ರಸ್ತೆಯಲ್ಲೇ ಸಂಚರಿಸುತ್ತಾರೆ.

ಬಡಾವಣೆಯ ನಾಗರಿಕರು ಪ್ರತಿದಿನ ಬೆಳಿಗ್ಗೆ ಹಾಗೂ ಸಂಜೆ ರಸ್ತೆಯಲ್ಲಿ ವಾಕಿಂಗ್ ಮಾಡುತ್ತಾರೆ.



ಉದಯವಾಹಿನಿ ಚಿತ್ರ

ಮಕ್ಕಳು ಸೈಕಲ್ ತುಳಿಯುತ್ತಾರೆ. ರಾತ್ರಿಯ ಹೊತ್ತು ಸರಿಯಾಗಿ ಬೀದಿ ದೀಪಗಳು ಉರಿಯುವುದಿಲ್ಲ. ಈ ವೇಳೆಯಲ್ಲಿ ಸಾರ್ವಜನಿಕರು ರಸ್ತೆಯ ಮಧ್ಯೆ ಬಾಯ್ದೆರೆದಿರುವ ಯುಜಿಡಿ ಗುಂಡಿಗೆ ಬಿದ್ದು ಪ್ರಾಣಕ್ಕೆ ಕುತ್ತು ತಂದುಕೊಳ್ಳುವ ಆತಂಕ ಹೆಚ್ಚಾಗಿದೆ ಎನ್ನುತ್ತಾರೆ ಸ್ಥಳೀಯರು. ಯುಜಿಡಿ ಗುಂಡಿ ಐದಾರು ಅಡಿ ಆಳವಿದ್ದು ಚಿಕ್ಕ ಮಕ್ಕಳು ಆಕಸ್ಮಿಕವಾಗಿ ಬಿದ್ದರೆ ಪ್ರಾಣಕ್ಕೆ ಕುತ್ತು ಖಚಿತ. ಅವಘಡಗಳು ಸಂಭವಿಸುವ ಮುನ್ನ ನಗರಸಭೆ ಅಧಿಕಾರಿಗಳು ಹಾಗೂ ಸ್ಥಳೀಯ ಜನಪ್ರತಿನಿಧಿಗಳು ದುರಸ್ತಿಗೊಳಿಸಬೇಕು ಎಂದು ಒತ್ತಾಯಿಸುತ್ತಾರೆ ಬಡಾವಣೆಯ ನಿವಾಸಿಗಳು.

ಬಿ.ರಾಚಯ್ಯ ಜೋಡಿ ರಸ್ತೆಯಲ್ಲಿರುವ ಭಾರತ್ ಪೆಟ್ರೋಲ್ ಬಂಕ್ ಪಕ್ಕದ ಕಚ್ಚಾರಸ್ತೆಯಲ್ಲಿ ಯುಜಿಡಿ ಗುಂಡಿಗಳು ರಸ್ತೆಯ ಮಟ್ಟದಿಂದ ಅಡಿಯಷ್ಟು ಮೇಲಿದ್ದು ವಾಹನ ಸವಾರರು ಸಮಸ್ಯೆ ಎದುರಿಸುತ್ತಿದ್ದಾರೆ.

ರಸ್ತೆಯ ಮಧ್ಯೆ ಯುಜಿಡಿ ಗುಂಡಿಗಳಿದ್ದು ಸಾರ್ವಜನಿಕರ ಸುಗಮ ಸಂಚಾರಕ್ಕೂ ಸಮಸ್ಯೆಯಾಗುತ್ತಿದೆ. ರಾತ್ರಿಯ ಹೊತ್ತು ವಾಹನಗಳು ಯುಜಿಡಿ ಮೇಲೆ ಹರಿದು ನಿಯಂತ್ರಣ ತಪ್ಪಿ ಬಿದ್ದು ಪೆಟ್ಟು ಮಾಡಿಕೊಳ್ಳುತ್ತಿದ್ದಾರೆ ಎಂದು ಸ್ಥಳೀಯರಾದ ಮಹದೇವ್ ದೂರಿದರು. ಹೌಸಿಂಗ್ ಬೋರ್ಡ್ ಬಡಾವಣೆ, ಬುದ್ಧನಗರ, ಪ್ರಶಾಂತ್ ನಗರ, ಪ್ರಗತಿ ನಗರ ಸಹಿತ ನಗರದ ಬಹುತೇಕ ಬಡಾವಣೆಗಳಲ್ಲಿ ಯುಜಿಡಿ ಗುಂಡಿಗಳು ಶಿಥಿಲಗೊಂಡಿದ್ದು ಕೆಲವು ಕಡೆಗಳಲ್ಲಿ ರಸ್ತೆಗಿಂತ ಕೆಳ ಮಟ್ಟದಲ್ಲಿದ್ದರೆ, ಕೆಲವು ಕಡೆಗಳಲ್ಲಿ ರಸ್ತೆಗಿಂತ ಮೇಲ್ಮಟ್ಟದಲ್ಲಿದ್ದು ಸಮಸ್ಯೆ ಸೃಷ್ಟಿಸುತ್ತಿವೆ. ನಗರಕ್ಕೆ ನೂತನ ಯುಜಿಡಿ ವ್ಯವಸ್ಥೆ ಕಲ್ಪಿಸುವವರೆಗೆ ತಾತ್ಕಾಲಿಕವಾಗಿ ದುರಸ್ತಿ ಮಾಡಿಕೊಡಬೇಕು ಎಂದು ಆಗ್ರಹಿಸುತ್ತಾರೆ ಸಾರ್ವಜನಿಕರು.

> ಮುಕ್ತ ವಿಶ್ವವಿದ್ಯಾಲಯಕ್ಕೆ ಬರುವ ವಿದ್ಯಾರ್ಥಿಗಳು, ಸಿಬ್ಬಂದಿಯೂ ಇದೇ ರಸ್ತೆಯಲ್ಲಿ ಸಾಗಬೇಕಿದೆ. ಸುತ್ತಮುತ್ತಲಿನ ನಿವಾಸಿಗಳು ಮಕ್ಕಳನ್ನು ಹೊರಗೆ ಬಿಡಲು ಭಯಪಡುವ ಸ್ಥಿತಿ ಇದೆ
>
> –ಪರಮೇಶ್ವರಪ್ಪ, ಸ್ಥಳೀಯ

# ಸಮಗ್ರ ಕೃಷಿಯಲ್ಲಿ ಯಶಸ್ಸು ಕಂಡ ಎಂಬಿಎ ಪದವೀಧರ

• ಉದಯವಾಹಿನಿ, ಮಡಿಕೇರಿ

ಕೊಡಗು ಜಿಲ್ಲೆಯ ಪೊನ್ನಂಪೇಟೆ ತಾಲ್ಲೂಕಿನ ಮಾಯಾಮುಡಿಯಲ್ಲಿ ಮಾಯದಂತಹ ಲೋಕ ನಿರ್ಮಿಸಿದವರು ಚೆಪ್ಪುಡೀರ ಸುಬ್ಬಯ್ಯ. ಇವರ ಬಳಿ ಬಗೆಬಗೆ ತಳಿಯ ಆರ್ಕಿಡ್ ಸಸ್ಯಗಳಿವೆ. ಸ್ವತಃ ಬೆಳೆದು ಸಸಿಗಳನ್ನು ಮಾರಾಟ ಮಾಡುತ್ತಿದ್ದಾರೆ. ಅವುಗಳಲ್ಲಿ ವಿದೇಶಿ ತಳಿಗಳೂ ಇದ್ದು, ಆರ್ಕಿಡ್ ಪ್ರಿಯರಿಗೆ ಇವರ ಸಸ್ಯಾಗಾರ ಅಚ್ಚುಮೆಚ್ಚಿನ ತಾಣವಾಗಿದೆ. ಕೊಡಗಿನಲ್ಲಿ ಸ್ವತಃ ಆರ್ಕಿಡ್ ಗಿಡಗಳನ್ನು ಬೆಳೆದು ಹೂವು ಸಮೇತ ಮಾರಾಟ ಮಾಡುತ್ತಿರುವ ಅತಿ ವಿರಳ ಮಂದಿಯಲ್ಲಿ ಇವರೂ ಒಬ್ಬರು.

ಹಾಲೆಂಡ್‌ನಿಂದ ಗಿಡಗಳನ್ನು ತರಿಸಿ ಅದನ್ನು ಸ್ಥಳೀಯವಾಗಿ ತಾವೇ ಬೆಳೆಸಿ ಮಾರಾಟ ಮಾಡುತ್ತಿರುವುದು ವಿಶೇಷ. ಡೆಂಡೋಬಿಯಂ, ಅನ್ಸಿಡಿಯಂ, ವ್ಯಾಂಡಾ, ಕೆಟಿಯಾ ಸೇರಿದಂತೆ ಹಲವು ಆರ್ಕಿಡ್ ಪ್ರಬೇಧಗಳು ಇವರ ಬಳಿ ಇವೆ. ಕೇವಲ ಆರ್ಕಿಡ್ ಮಾತ್ರವಲ್ಲ, ಇವರ ಬಳಿ ಅಂಥೋರಿಯಂ ತೆರನಾದ ಒಳಾಂಗಣ ಆಲಂಕಾರಿಕ ಸಸ್ಯಗಳೂ ಇವರ ಬಳಿ ಇವೆ. ಇವರ ಬಳಿ ಕಾಫಿ ಮಂಡಳಿ ನೀಡುವ ಬೀಜಗಳಿಂದ ತಯಾರಿಸಿದ ಕಾಫಿ ಗಿಡಗಳ ನರ್ಸರಿಯೂ ಇದೆ. ವಿಯಟ್ನಾಂ ತಳಿ ಟಿಆರ್– 9 ಮತ್ತು 11, ಸೆಲೆಕ್ಷನ್ 274, ಸಿ,ಆರ್ ಸೇರಿದಂತೆ ಹಲವು ವೈವಿಧ್ಯಮಯ ಕಾಫಿ ತಳಿಗಳ ಸಸ್ಯಗಳು ಇವರ ಬಳಿ ಲಭ್ಯ. ಅಂದ ಹಾಗೆ, ಇವರು ಓದಿದ್ದು ಎಂಬಿಎ. ಬೆಂಗಳೂರಿನಲ್ಲಿ 3 ವರ್ಷ ಕೆಲಸ ಮಾಡಿ, ಕೃಷಿಯಲ್ಲಿ ತೊಡಗಿಸಿಕೊಳ್ಳುವ ಉದ್ದೇಶದಿಂದ ವಾಪಸ್ ಊರಿಗೆ ಬಂದರು. 12 ವರ್ಷದಿಂದ ಕಾಫಿ, ಕಾಳುಮೆಣಸು, ಅಡಿಕೆ ಹಾಗೂ ಭತ್ತವನ್ನು ಬೆಳೆಯುವ ಮೂಲಕ ಸಮಗ್ರ ಕೃಷಿಯಲ್ಲಿ ತೊಡಗಿಸಿಕೊಂಡರು. 5 ವರ್ಷದಿಂದ ಈಚೆಗೆ ಸಸ್ಯಾಗಾರ ಆರಂಭಿಸಿದರು.



ಉದಯವಾಹಿನಿ ಚಿತ್ರ

3 ವರ್ಷದಿಂದ ಈಚೆಗೆ ಕಾಫಿ ಸಸ್ಯಾಗಾರ ಶುರು ಮಾಡಿ ಯಶಸ್ಸು ಪಡೆದಿದ್ದಾರೆ. ಇವರ ಬಳಿ ಕನಿಷ್ಠ 150 ರಿಂದ ಆರಂಭಿಸಿ, ಗರಿಷ್ಠ 4 ಸಾವಿರದವರೆಗೆ ಆರ್ಕಿಡ್ ಗಿಡಗಳು ಸಿಗುತ್ತವೆ. ಗಿಡಗಳ ವಯಸ್ಸು, ಅವುಗಳ ಪ್ರಬೇಧದ ಆಧಾರದ ಮೇಲೆ ಬೆಲೆ ನಿರ್ಧಾರಿತವಾಗುತ್ತದೆ ಎಂದು ಚೆಪ್ಪುಡೀರ ಸುಬ್ಬಯ್ಯ ಹೇಳುತ್ತಾರೆ. ಇವರ ಸಮಗ್ರ ಕೃಷಿಯನ್ನು ಮೆಚ್ಚಿದ ಕೃಷಿ ಇಲಾಖೆಯ ಆತ್ಮ ಯೋಜನೆಯಡಿ ಜಿಲ್ಲಾಮಟ್ಟದ ಶ್ರೇಷ್ಠ ಕೃಷಿಕ ಪ್ರಶಸ್ತಿ ನೀಡಿ ಸಿಕ್ಕಿದೆ.

## ಭೋವಿಗಳ ಕುಲಕಸುಬು ಉಲ್ಲೇಖದಲ್ಲಿ ಲೋಪ: ರಾಜ್ಯ ಸರ್ಕಾರದ ವಿರುದ್ಧ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ಬೇಸರ

# ಇತಿಹಾಸ ಅಳಿಸುವ ಕೆಲಸ ಮಾಡಬೇಡಿ: ಸ್ವಾಮೀಜಿ

• ಉದಯವಾಹಿನಿ, ಕೋಲಾರ

ನಾಗರಿಕತೆಯ ಆರಂಭದಿಂದಲೂ ಭೋವಿ ಸಮುದಾಯ ಹಲವಾರು ಕುಲಕಸುಬು ಮಾಡಿಕೊಂಡು ಬಂದಿದೆ. ಆದರೆ, ಅವುಗಳನ್ನು ಕೈಬಿಟ್ಟು ಇತಿಹಾಸ ಅಳಿಸಿ ಹಾಕುವ ಕೆಲಸವನ್ನು ರಾಜ್ಯ ಸರ್ಕಾರ ಮಾಡಬಾರದು ಎಂದು ಚಿತ್ರದುರ್ಗ ಭೋವಿ ಗುರು ಪೀಠದ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ತಿಳಿಸಿದರು. ನಗರದ ಪತ್ರಕರ್ತರ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪರಿಶಿಷ್ಟ ಜಾತಿ ಸಮೀಕ್ಷೆಗಾಗಿ ಸಿದ್ಧಪಡಿಸಿರುವ ಕೈಪಿಡಿಯಲ್ಲಿ ಭೋವಿ ಸಮುದಾಯದ ಹಲವಾರು ಕುಲ ಕಸುಬುಗಳನ್ನು ಕೈಬಿಡಲಾಗಿದೆ. ಪರಿಶಿಷ್ಟ ಜಾತಿಯಲ್ಲಿ ಅತೀ ಹೆಚ್ಚು ಜನಸಂಖ್ಯೆ ಹೊಂದಿರುವ ಭೋವಿ ಸಮಾಜದ ಕುಲಕಸುಬನ್ನು ಸರ್ಕಾರವೇ ನಾಶ ಮಾಡಿದಂತಾಗುತ್ತದೆ’ ಎಂದು ಆಕ್ರೋಶ ವ್ಯಕ್ತಪಡಿಸಿದರು.ಸಮಸಮಾಜ ನಿರ್ಮಾಣ ಮಾಡಬೇಕಾದರೆ ಸಮುದಾಯ ಗಳ ದತ್ತಾಂಶದ ಅಗತ್ಯವಿದೆ. ನಿವೃತ್ತ ನ್ಯಾಯಮೂರ್ತಿ ಎಚ್.ಎಸ್.ನಾಗಮೋಹನದಾಸ್ ನೇತೃತ್ವದ ಏಕ ಸದಸ್ಯ ಆಯೋಗ ಕುಲಕಸುಬುಗಳ ಕೈಪಿಡಿ ರೂಪಿಸಿದೆ. ಪರಿಶಿಷ್ಟ ಜಾತಿಯ 101 ಜಾತಿಯಲ್ಲಿ 80 ಕುಲಕಸುಬು ಗುರುತಿಸಲಾಗಿದೆ. ಹಾವಾಡಿಗ, ಗೊಂಬೆ ಆಡಿಸುವವ, ಹಕ್ಕಿಪಿಕ್ಕಿ ವೃತ್ತಿಗಳನ್ನು ಗುರುತಿಸಿ ಭೋವಿ ಸಮುದಾಯದ ಹಲವು ಕಸುಬುಗಳನ್ನು ಕೈಬಿಟ್ಟಿರುವುದು ಸರಿಯಲ್ಲ. ಸಮೀಕ್ಷೆ ಆರಂಭಗೊಳ್ಳಲು 2 ದಿನಗಳಷ್ಟೇ ಉಳಿದಿವೆ. ತಪ್ಪು ಸರಿಪಡಿಸದಿದ್ದರೆ ನ್ಯಾಯಾಲಯದಲ್ಲಿ ಪ್ರಶ್ನಿಸಲಾಗುವುದು’ ಎಂದು ಎಚ್ಚರಿಕೆ ನೀಡಿದರು.



ಉದಯವಾಹಿನಿ ಚಿತ್ರ

**ಎರಡು ದಿನಗಳಷ್ಟೇ ಉಳಿದಿವೆ**

ಕೈಪಿಡಿ ರೂಪಿಸುವುದಕ್ಕೂ ಮೊದಲು ಪರಿಶಿಷ್ಟ ಜಾತಿ ಪಟ್ಟಿಯಲ್ಲಿರುವ 101 ಸಮುದಾಯಗಳ ಮುಖಂಡರ ಸಭೆ ನಡೆಸಿ ಚರ್ಚೆ ನಡೆಸಬೇಕಾಗಿತ್ತು. ಭೋವಿ ಸಮುದಾಯದಲ್ಲಿ ನಿರ್ಮಾಣ ಕೆಲಸ ಮಾಡುವ ಅವರ ಕುಲಕಸುಬನ್ನು ಸಮೀಕ್ಷೆಯಲ್ಲಿ ನಮೂದು ಮಾಡದಿದ್ದರೆ ಅವರಿಗೆ ಅನ್ಯಾಯ ಮಾಡಿದಂತಾಗುತ್ತದೆ’ ಎಂದರು. ನಾಗರಿಕತೆಯ ಆರಂಭದಿಂದಲೂ ನಾವು ನಮ್ಮ ಕುಲ ಕಸುಬನ್ನು ಮಾಡಿಕೊಂಡು ಬಂದಿದ್ದೇವೆ. ಆಧುನೀಕರಣ, ನಗರೀಕರಣದ ಸಂದರ್ಭದಲ್ಲೂ ನಮ್ಮ ಕಸುಬು ಉಳಿದಿವೆ. ಕೊಳವೆ ಬಾವಿ ಬರುವುದಕ್ಕೆ ಮೊದಲು ಭೋವಿ ಸಮುದಾಯದ ಕಾರ್ಮಿಕರು ನಿರ್ಮಿಸಿದ ಬಾವಿ, ಕೆರೆ, ಕಟ್ಟೆಗಳೇ ಜನರಿಗೆ ಜೀವಜಲ ಒದಗಿಸುತ್ತಿದ್ದವು. ಸರ್ಕಾರಗಳು ಇಂತಹ ಕುಲಕಸುಬುಗಳನ್ನು ಸಮೀಕ್ಷೆ ವೇಳೆ ಗುರುತಿಸಬೇಕು, ಇತಿಹಾಸವನ್ನು ಅಳಿಸಿ ಹಾಕುವ ಕೆಲಸ ಮಾಡಬಾರದು ಎಂದು ಹೇಳಿದರು. ಸಮುದಾಯದ ಮುಖಂಡ ಸಿ.ವಿ.ಗೋಪಾಲ್ ಮಾತನಾಡಿ, ಒಳಮೀಸಲಾತಿ ಸಂಬಂಧ ಜಾತಿಗಣತಿ ಸಮೀಕ್ಷೆ ಮೇ 5ಕ್ಕೆ ಆರಂಭವಾಗಲಿದೆ. ಭೋವಿ ಸಮಾಜ ಕೆರೆ ಕಟ್ಟೆ ನಿರ್ಮಾಣ, ಸ್ವಚ್ಛತೆ ಕೆಲಸ ಮಾಡಿಕೊಂಡು ಬಂದಿದೆ. ವಡ್ಡರು ಎಂದು ಹೇಳಿಕೊಳ್ಳಲು ಹಿಂದೆ ಹಿಂಜರಿಯುತ್ತಿದ್ದೆವು. ಈಗ ಅದನ್ನು ಬಹಿರಂಗವಾಗಿ ಹೇಳಿ ಕೊಳ್ಳಬೇಕಾದ ಪರಿಸ್ಥಿತಿ ಬಂದಿದೆ. ಸಮೀಕ್ಷೆ ವೇಳೆ ಭೋವಿ ಎಂದೇ ನಮೂದಿಸಬೇಕು’ ಎಂದರು. ಮುಖಂಡ ಶ್ರೀಕೃಷ್ಣ ಮಾತನಾಡಿ, ’ಭೋವಿ ಎಂದರೆ ಪರಿಶಿಷ್ಟ ಜಾತಿಗೆ ಬರುತ್ತದೆ. ಮೂಲತಃ ನಮ್ಮದು ಅಲೆಮಾರಿ ಸಮುದಾಯ. ಸಮೀಕ್ಷೆ ವಿಚಾರವಾಗಿ ಸಮುದಾಯದ ಜನರಿಗೆ ತಿಳಿವಳಿಕೆ ಮೂಡಿಸಲಾಗುತ್ತಿದೆ’ ಎಂದು ಹೇಳಿದರು.

ಮುಖಂಡ ಎಲ್.ಜಿ.ಮುನಿರಾಜು ಮಾತನಾಡಿ, ’ಸಮಾಜದ ಹಿರಿಯರು, ವಿದ್ಯಾವಂತರು, ಯುವಕರು ಭೋವಿ (ವಡ್ಡರು) ಎಂದು ನಮೂದಿಸಲು ಸಹಾಯ ಮಾಡಬೇಕು. ಎಲ್ಲೇ ಇದ್ದರೂ ಬಂದು ತಮ್ಮ ಕರ್ತವ್ಯ ನಿಭಾಯಿಸಬೇಕು, ಜನಗಣತಿಯಲ್ಲಿ ಭಾಗವಹಿಸಬೇಕು’ ಎಂದು ಕೋರಿದರು. ಭೋವಿ ಸಮುದಾಯದ ಮುಖಂಡರಾದ ವರದೇನಹಳ್ಳಿ ವೆಂಕಟೇಶ್, ಚದುಮನಹಳ್ಳಿ ವೆಂಕಟೇಶ್, ಚೆಲುವನಹಳ್ಳಿ ಶ್ರೀನಿವಾಸ್, ರಾಮಾಂಜನಪ್ಪ, ಶ್ರೀನಾಥ್, ಹರಿಪ್ರಸಾದ್, ಬಾಬು, ಮಣಿ, ಪ್ರಕಾಶ್, ಕಾಶಿ, ಗಾಂಧಿನಗರ ಮುರಳಿ ಇದ್ದರು.

> **ಭೋವಿ (ವಡ್ಡರು) ಎಂದೇ ನಮೂದಿಸಿ ಜಾತಿಗಣತಿ ಸಮೀಕ್ಷೆಯ ವೇಳೆ ಭೋವಿ ಸಮುದಾಯದವರು ಭೋವಿ (ವಡ್ಡರು) ಎಂದೇ ನಮೂದಿಸಬೇಕು. ಯಾವುದೇ ಹಿಂಜರಿಕೆ ಬೇಡ. ಈ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಕೇರಿ ಹೋಬಳಿ ಗ್ರಾಮ ಜಿಲ್ಲೆ, ರಾಜ್ಯ ಮಟ್ಟದಲ್ಲಿ ಸಮುದಾಯದ ಮುಖಂಡರು ವಿದ್ಯಾವಂತರು ಯುವಕರು ಅರಿವು, ಜಾಗೃತಿ ಮೂಡಿಸಬೇಕು**
>
> –ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ
> ಚಿತ್ರದುರ್ಗ ಭೋವಿ ಗುರುಪೀಠ

# ಮಿನಿ ನ್ಯೂಸ್

## ಮಳೆಗೆ ನೆಲ ಕಚ್ಚಿದ ಹೀರೇಕಾಯಿ ಬೆಳೆ

• ಉದಯವಾಹಿನಿ, ಬಾಗೇಪಲ್ಲಿ

ತಾಲ್ಲೂಕಿನ ಮಿಟ್ಟೇಮರಿ ಹೋಬಳಿಯ ಕಾನಗಮಾಕಲಪಲ್ಲಿ ಸುತ್ತ ಮುತ್ತ ಶುಕ್ರವಾರ ಸಂಜೆ ಭಾರಿ ಗಾಳಿ, ಮಳೆ ಆಗಿದೆ. ತಾಲ್ಲೂಕಿನ ಕಾನಗಮಾಕಲಪಲ್ಲಿ ಗ್ರಾಮದ ರೈತ ಮುರಳಿ ತನ್ನ 2 ಎಕರೆಯಲ್ಲಿ ಹೀರೇಕಾಯಿ ಬೆಳೆದಿದ್ದಾರೆ. 2 ದಿನಗಳ ಒಳಗೆ ಮೊದಲ ಕಟಾವು ಮಾಡಬೇಕಾಗಿತ್ತು. ಆದರೆ ಭಾರಿ ಗಾಳಿ, ಮಳೆಯಾಗಿದ್ದರಿಂದ ಸಂಪೂರ್ಣವಾಗಿ ನೆಲ ಕಚ್ಚಿವೆ. ಹೊಲದಲ್ಲಿ ಮಳೆ ನೀರು ಸಂಗ್ರಹವಾಗಿದೆ.

ಒಂದೂವರೆ ಲಕ್ಷ ಸಾಲ ಮಾಡಿ ಹೀರೇಕಾಯಿ ಬೆಳೆ ಬೆಳೆದಿದ್ದೇನೆ. ಮೊದಲ ಹಂತದಲ್ಲಿ ಕಟಾವು ಮಾಡಬೇಕಾಗಿತ್ತು. ಆದರೆ ಶುಕ್ರವಾರ ಗಾಳಿ, ಮಳೆಗೆ ಹೀರೇಕಾಯಿಗಳು ನೆಲ ಕಚ್ಚಿವೆ. ಇದರಿಂದ 3 ಲಕ್ಷದಷ್ಟು ನಷ್ಟ ಉಂಟಾಗಿದೆ ಎಂದು ರೈತ ಮುರಳಿ ತಿಳಿಸಿದರು. ಕಾನಗಮಾಕಲಪಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮೂಗಚಿನ್ನೇಪಲ್ಲಿ, ವನಗಾನಪಲ್ಲಿ, ವರದಯ್ಯಗಾರಿಪಲ್ಲಿ ಸೇರಿದಂತೆ ಭಾರಿ ಗಾಳಿ, ಮಳೆಗೆ ರಸ್ತೆಗಳಲ್ಲಿ, ಹೊಲ ಗದ್ದೆಗಳಲ್ಲಿ ಮಳೆ ನೀರು ಸಂಗ್ರಹ ಆಗಿದೆ. ಜನ ಹಾಗೂ ಜಾನುವಾರುಗಳ ಸಂಚಾರಕ್ಕೆ ತೊಂದರೆ ಆಗಿದೆ. ಕುರಿ, ಮೇಕೆ, ಹಸುಗಳ ಶೆಡ್‌ಗಳಲ್ಲಿ ಮಳೆಯ ನೀರು ಸಂಗ್ರಹ ಆಗಿದೆ. ಗಿಡ, ಮರಗಳು ಸಹ ನೆಲಕ್ಕುರುಳಿವೆ.

## ಎಸ್‌ಎಸ್‌ಎಲ್‌ಸಿ ಪರೀಕ್ಷೆ; ಕನಕಪುರ ತಾಲ್ಲೂಕಿಗೆ ಕೊನೆ ಸ್ಥಾನ

• ಉದಯವಾಹಿನಿ, ಕನಕಪುರ

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕನಕಪುರ ತಾಲ್ಲೂಕಿಗೆ ಶೇ57.37ರಷ್ಟು ಫಲಿತಾಂಶ ಬಂದಿದೆ. 3714 ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಂಡಿದ್ದು 2131 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ಈ ಬಾರಿ ಫಲಿತಾಂಶದಲ್ಲಿ ಬಾಲಕಿಯರೇ ಮೇಲುಗೈ ಸಾಧಿಸಿದ್ದಾರೆ. ಅನುದಾನಿತ ಮತ್ತು ಸರ್ಕಾರಿ ಶಾಲೆಗಳಿಗಿಂತ ಅನುದಾನ ರಹಿತ ವಿದ್ಯಾ ಸಂಸ್ಥೆಗಳು ಉತ್ತಮ ಸಾಧನೆ ಮಾಡಿವೆ. ಹಾರೋಹಳ್ಳಿ ತಾಲ್ಲೂಕು ವಡೇರಹಳ್ಳಿ ಸುವರ್ಣಮುಖಿ ವಸತಿ ಶಾಲೆಯು ನೂರಕ್ಕೆ ನೂರರಷ್ಟು ಫಲಿತಾಂಶ ಪಡೆದಿದೆ. ಕೋಡಿಹಳ್ಳಿ ಹೋಬಳಿ ಹಲಸೂರು ಸರ್ಕಾರಿ ಶಾಲೆ ಅತ್ಯಂತ ಕಡಿಮೆ ಶೇ6ರಷ್ಟು ಫಲಿತಾಂಶ ಪಡೆದು ಕಳಪೆ ಸಾಧನೆ ಮಾಡಿದೆ. 17 ವಿದ್ಯಾರ್ಥಿಗಳಲ್ಲಿ ಒಬ್ಬ ವಿದ್ಯಾರ್ಥಿ ಮಾತ್ರ ತೇರ್ಗಡೆ ಆಗಿದ್ದಾನೆ. ಕನಕಪುರ ತಾಲ್ಲೂಕಿನಲ್ಲಿ ಬಿಜಿಎಸ್ ಕಾಲಭೈರವೇಶ್ವರ ಶಾಲೆ ಪ್ರಣತಿ.ವಿ ಮತ್ತು ಹಾರೋಹಳ್ಳಿ ಪ್ರಗತಿ ಶಾಲೆ ರಚನಾ.ಜಿ 619 ಅಂಕ ಪಡೆದು ತಾಲ್ಲೂಕಿಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಕನಕಪುರ ತಾಲ್ಲೂಕು ಶೈಕ್ಷಣಿಕ ಪ್ರಗತಿಯಲ್ಲಿ ಜಿಲ್ಲೆಯಲ್ಲಿ ನಾಲ್ಕನೇ ಸ್ಥಾನಕ್ಕೆ ಕುಸಿದಿದೆ.

## ಗ್ರಾಮಪಂಚಾಯಿತಿ ಅಧ್ಯಕ್ಷರಾಗಿ ಎಂ.ಗುರುಪ್ರಸಾದ್ ಆಯ್ಕೆ



• ಉದಯವಾಹಿನಿ, ಯಳಂದೂರು

ತಾಲ್ಲೂಕಿನ ಹೊನ್ನೂರು ಗ್ರಾಮದಲ್ಲಿ ಶುಕ್ರವಾರ ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ಎಚ್.ಎಂ. ಗುರುಪ್ರಸಾದ್, ಉಪಾಧ್ಯಕ್ಷರಾಗಿ ನೇತ್ರಾವತಿ ಅವಿರೋಧವಾಗಿ ಆಯ್ಕೆಯಾದರು. ಹಿಂದಿನ ಅಧ್ಯಕ್ಷರಾಗಿದ್ದ ಆರ್. ಪುಟ್ಟಬಸವಯ್ಯ, ಉಪಾಧ್ಯಕ್ಷೆ ಭಾಗ್ಯಮ್ಮ ರಾಜಿನಾಮೆ ನೀಡಿದ್ದರಿಂದ ತೆರವಾದ ಸ್ಥಾನಕ್ಕೆ ಚುನಾವಣೆ ನಿಗಧಿಯಾಗಿತ್ತು. ಕ್ಷೇತ್ರ ಶಿಕ್ಷಣಾಧಿಕಾರಿ ಮಾರಯ್ಯ ಚುನಾವಣಾಧಿಕಾರಿಯಾಗಿ ಭಾಗವಹಿಸಿದ್ದರು.

## ಸುಹಾಸ್ ಶೆಟ್ಟಿ ಹತ್ಯೆ ಖಂಡಿಸಿ ಪ್ರತಿಭಟನೆ

• ಉದಯವಾಹಿನಿ, ಮಂಡ್ಯ

ಮಂಗಳೂರಿನಲ್ಲಿ ನಡೆದ ಹಿಂದುತ್ವವಾದಿ ಕಾರ್ಯಕರ್ತ ಸುಹಾಸ್ ಶೆಟ್ಟಿ ಹತ್ಯೆ ಖಂಡಿಸಿ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರು ನಗರದಲ್ಲಿ ಶುಕ್ರವಾರ ಸಂಜೆ ದಿಢೀರ್ ಪ್ರತಿಭಟನೆ ನಡೆಸಿದರು. ಜಿಲ್ಲಾ ಬಿಜೆಪಿ ಘಟಕದ ಅಧ್ಯಕ್ಷ ಎನ್.ಎಸ್. ಇಂದ್ರೇಶ್ ನೇತೃತ್ವದಲ್ಲಿ ನಗರದ ಜೆ.ಸಿ. ವೃತ್ತದಲ್ಲಿ ಜಮಾಯಿಸಿದ ಬಿಜೆಪಿ ಕಾರ್ಯಕರ್ತರು, ಕೊಲೆ ಘಟನೆಯನ್ನು ಖಂಡಿಸಿ ಘೋಷಣೆ ಮೊಳಗಿಸಿದರು.

ಸುಹಾಸ್‌ಶೆಟ್ಟಿ ಅವರನ್ನು ಹಂತಕರು ಸಾರ್ವಜನಿಕ ಸ್ಥಳದಲ್ಲೇ ಭೀಕರವಾಗಿ ಹತ್ಯೆ ಮಾಡಿದ್ದಾರೆ. ಇದೊಂದು ಅಮಾನವೀಯ ಕೃತ್ಯ ಎಂದು ಖಂಡಿಸಿದರು. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಾಳಾಗಿರುವುದಕ್ಕೆ ಈ ಘಟನೆಯೇ ಸಾಕ್ಷಿಯಾಗಿದೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಹಿಂದೂಪರ ಸಂಘಟನೆಗಳ ಕಾರ್ಯಕರ್ತರಿಗೆ ರಕ್ಷಣೆ ಇಲ್ಲದಂತಾಗಿದೆ ಎಂದು ಕಿಡಿಕಾರಿದ ಪ್ರತಿಭಟನಾಕಾರರು ಟೈರ್‌ಗಳಿಗೆ ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತಪಡಿಸಿದರು.

## ರೋಡ್ ರೋಲರ್ ಹರಿದು ಮಹಿಳೆ ಸಾವು

• ಉದಯವಾಹಿನಿ, ಪಾಂಡವಪುರ

ಮಹಿಳೆಯೊಬ್ಬರು ಜಮೀನಿಗೆ ತೆರಳುವಾಗ ರೋಡ್ ರೋಲರ್ ಹರಿದು ಸ್ಥಳದಲ್ಲೇ ದಾರುಣವಾಗಿ ಸಾವಿಗೀಡಾಗಿರುವ ಘಟನೆ ತಾಲ್ಲೂಕಿನ ಸಣಬ ಗ್ರಾಮದಲ್ಲಿ ಶುಕ್ರವಾರ ನಡೆದಿದೆ. ಗ್ರಾಮದ ನಿವಾಸಿ ಗೌರಮ್ಮ ಬಿನ್ ಪಾಪಣ್ಣ (58) ಮೃತಪಟ್ಟವರು. ಘಟನೆ ನಂತರ ಮಂಡ್ಯ ತಾಲ್ಲೂಕಿನ ಪುರದಕೊಪ್ಪಲು ಗ್ರಾಮದ ಚಾಲಕ ಶ್ರೀಧರ್ ಪರಾರಿಯಾಗಿದ್ದಾನೆ. ನಾರಾಯಣಪುರದಿಂದ ಕಾಮನಾಯಕನಹಳ್ಳಿ– ಸಣಬ ಗ್ರಾಮದ ಮಾರ್ಗವಾಗಿ ರಾಜ್ಯ ಹೆದ್ದಾರಿಯ ಸಂಪರ್ಕ ರಸ್ತೆ ಅಭಿವೃದ್ಧಿ ಕಾಮಗಾರಿ ನಡೆಯುವ ವೇಳೆ ಶುಕ್ರವಾರ ಮಧ್ಯಾಹ್ನ ಸುಮಾರು 12.30ರ ಸಮಯದಲ್ಲಿ ಜಮೀನಿಗೆ ತೆರಳುತ್ತಿದ್ದ ಮಹಿಳೆ ಗೌರಮ್ಮ ಅವರ ಮೇಲೆ ರೋಡ್ ರೋಲರ್ ಹರಿದಿದೆ. ಈ ವೇಳೆ ಗೌರಮ್ಮ ಅವರ ದೇಹ ಛಿದ್ರಛಿದ್ರವಾಗಿದೆ. ರೋಡ್ ರೋಲರ್ ಮೂಲಕ ರಸ್ತೆ ಕಾಮಗಾರಿ ಮಾಡುವ ವೇಳೆ ಯಾವುದೇ ಮುಂಜಾಗ್ರತಾ ಕ್ರಮ ಅನುಸರಿಸದೇ ನಿರ್ಲಕ್ಷ್ಯ ವಹಿಸಿದ್ದೇ ಈ ಘಟನೆಗೆ ಕಾರಣವಾಗಿದೆ ಎಂದು ಗ್ರಾಮಸ್ಥರು ಆರೋಪಿಸಿದರು. ಚನ್ನರಾಯಪಟ್ಟಣ ತಾಲ್ಲೂಕಿನ ಸಾರಂಗಿ ಗ್ರಾಮಕ್ಕೆ ಗೌರಮ್ಮ ಅವರನ್ನು ಮದುವೆ ಮಾಡಿಕೊಡಲಾಗಿತ್ತು. ಗಂಡ ಸತ್ತ ಬಳಿಕ ಹಲವಾರು ವರ್ಷಗಳಿಂದ ಸಣಬ ಗ್ರಾಮದ ತಂಗಿ ಮನೆಯಲ್ಲೇ ಗೌರಮ್ಮ ವಾಸವಿದ್ದರು ಎನ್ನಲಾಗಿದೆ.

**3 ಲಕ್ಷ ಪರಿಹಾರ:** ಘಟನಾ ಸ್ಥಳಕ್ಕೆ ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಭೇಟಿ ನೀಡಿ ಮೃತರ ಕುಟುಂಬ ವರ್ಗದವರಿಗೆ ಸಾಂತ್ವನ ಹೇಳಿದರಲ್ಲದೇ, ಗುತ್ತಿಗೆದಾರ ರವಿ ಬೋಜೇಗೌಡ ಅವರಿಂದ 3 ಲಕ್ಷ ಪರಿಹಾರ ಕೊಡಿಸಿದರು. ಈ ಸಂಬಂಧ ಪಾಂಡವಪುರ ಠಾಣೆಯ ಪೊಲೀಸ್ ಸಬ್ ಇನ್‌ಸ್ಪೆಕ್ಟರ್ ಧನಪಾಲ್ ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

## ಬೆಳೆ ಹಾನಿ ಪ್ರದೇಶಕ್ಕೆ ಉಮೇಶ್ ಮುದ್ನಾಳ್ ಭೇಟಿ: ಪರಿಹಾರಕ್ಕೆ ಆಗ್ರಹ


ಉದಯವಾಹಿನಿ ಚಿತ್ರ

• ಉದಯವಾಹಿನಿ ಯಾದಗಿರಿ

ಕಳೆದ ಎರಡು ದಿನಗಳ ಹಿಂದೆ ಸುರಿದ ಬಿರುಗಾಳಿ ಸಹಿತ ಆಲಿಕಲ್ಲು ಮಳೆಗೆ ಹಾನಿಗೀಡಾದ ಪ್ರದೇಶಕ್ಕೆ ಅಖಿಲ ಭಾರತೀಯ ಕೋಲಿ ಸಮಾಜದ ರಾಜ್ಯ ಸಂಘಟನಾ ಕಾರ್ಯದರ್ಶಿ ಉಮೇಶ್ ಮುದ್ನಾಳ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಯಾದಗಿರಿ ಜಿಲ್ಲೆಯ ಗುರುಮಠಕಲ್ ತಾಲ್ಲೂಕಿನ ತಾತಳಗೇರಾ ಸೇರಿ ಸುತ್ತಲಿನ ಹತ್ತಾರು ಗ್ರಾಮದಲ್ಲಿ ಅಕಾಲಿಕ ಮಳೆಗೆ ಭತ್ತ ನೆಲಕಚ್ಚಿ ಅಪಾರ ಪ್ರಮಾಣದ ಹಾನಿಯುಂಟಾಗಿದೆ. ತಾತಳಗೇರಾ ಗ್ರಾಮದ ರೈತ ಬಸಲಿಂಗಪ್ಪ ತನ್ನ ಹತ್ತಾರು ಎಕರೆ ಜಮೀನಿನಲ್ಲಿ ಬೆಳೆದ ಭತ್ತ ಉದುರಿ ಕಣ್ಣೀರು ಹಾಕಿದ್ದಾರೆ. ಸರ್ಕಾರದಿಂದ ಸೂಕ್ತ ಪರಿಹಾರ ಕೊಡಿಸುವ ಭರವಸೆ ನೀಡಿ ಉಮೇಶ್ ಮುದ್ನಾಳ್ ರೈತರ ಕಣ್ಣೀರು ಒರೆಸುವ ಕೆಲಸ ಮಾಡಿದ್ದಾರೆ.

ಅಧಿಕಾರಿಗಳು ಅತಿವೃಷ್ಟಿಯಿಂದ ಹಾನಿಗೀಡಾದ ಪ್ರದೇಶಕ್ಕೆ ಭೇಟಿ ನೀಡದೆ ಕಾಲಹರಣ ಮಾಡ್ತಿದ್ದಾರೆ. ಇದು ತೀರಾ ಬೇಸರದ ಸಂಗತಿ ಅಂತ ಕಳವಳ ವ್ಯಕ್ತಪಡಿಸಿದ್ದಾರೆ. ಕೂಡಲೇ ಅಧಿಕಾರಿಗಳು ಭೇಟಿ ನೀಡಿ ಪರಿಹಾರ ನೀಡುವಂತೆ ಆಗ್ರಹಿಸಿದರು.

ಈ ಸಂದರ್ಭದಲ್ಲಿ ತಾತಳಗೇರಾ ಗ್ರಾಮದ ರೈತರು ಹಾಗೂ ಮಹಿಳೆಯರು ಉಪಸ್ಥಿತರಿದ್ದರು.

### ರೆಡ್ಡಿ ಬೆಂಬಲಿತ ಅಭ್ಯರ್ಥಿಗಳು ಆಯ್ಕೆ, ಮೂಲ ಮತ್ತು ವಲಸೆ ಬಿಜೆಪಿ ಆಕಾಂಕ್ಷಿಗಳಿಗೆ ಮುಖಭಂಗ

## ನಗರಸಭೆಯಲ್ಲಿ ರೆಡ್ಡಿ ತಂತ್ರ: ಆಕಾಂಕ್ಷಿಯಲ್ಲದವರಿಗೆ ಅಧಿಕಾರ ಪಟ್ಟ

• ಉದಯವಾಹಿನಿ ಗಂಗಾವತಿ

ಇಲ್ಲಿನ ನಗರಸಭೆಯ ಆರು ತಿಂಗಳ ಅಧಿಕಾರಾವಧಿಗೆ ಶುಕ್ರವಾರ ಕೊಪ್ಪಳ ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ ನೇತೃತ್ವದಲ್ಲಿ ನಡೆದ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆಯಲ್ಲಿ ಶಾಸಕ ಜಿ.ಜನಾರ್ದನರೆಡ್ಡಿ ಬೆಂಬಲಿತ ಅಭ್ಯರ್ಥಿಗಳು ಆಯ್ಕೆಯಾಗಿ, ಮೂಲ ಮತ್ತು ವಲಸೆ ಬಿಜೆಪಿ ಆಕಾಂಕ್ಷಿಗಳಿಗೆ ಮುಖಭಂಗ ಉಂಟು ಮಾಡಿದ್ದಾರೆ.

ನಗರಸಭೆ ಕೊನೆಯ 15 ತಿಂಗಳ ಅಧಿಕಾರಾವಧಿಯಲ್ಲಿ 7 ತಿಂಗಳ ಆಡಳಿತ ನಡೆಸಿ, ಅಧ್ಯಕ್ಷ, ಉಪಾಧ್ಯಕ್ಷರು ರಾಜೀನಾಮೆ ನೀಡಿದ ನಂತರ, ಕೊನೆಯ 6 ತಿಂಗಳ ಅಧಿಕಾರವಧಿ ಅಧ್ಯಕ್ಷ ಸ್ಥಾನಕ್ಕೆ ಮೂಲ ಬಿಜೆಪಿ ನಗರಸಭೆ ಸದಸ್ಯ ಪರಶುರಾಮ ಮಟ್ಟೇರಾ, ವಲಸೆ ಬಿಜೆಪಿ ಸದಸ್ಯ ಅಜಯ್ ಬಿಚ್ಚಾಲಿ ನಡುವೆ ತೀವ್ರ ಪೈಪೋಟಿ ಇತ್ತು.

ಬದಲಾದ ಪರಿಸ್ಥಿತಿ, ಹಾಲಿ ಶಾಸಕರ ಮತ್ತು ಮಾಜಿ ಬಿಜೆಪಿ ಶಾಸಕ, ಸಂಸದ ಸೇರಿ ಹಿರಿಯ ನಾಯಕ, ಮುಖಂಡರು, ಬಿಜೆಪಿ ನಗರಸಭೆ ಸದಸ್ಯರ ನಡುವಿನ ಸಮನ್ವಯ ಕೊರತೆ, ಭಿನ್ನಭಿಪ್ರಾಯಗಳ ನಡುವೆ ಶಾಸಕ ಜಿ.ಜನಾರ್ದನರೆಡ್ಡಿ ಬೆಂಬಲಿತ ಅಭ್ಯರ್ಥಿ ಅಜಯ್ ಬಿಚ್ಚಾಲಿ ನಾಮಪತ್ರ ಸಲ್ಲಿಕೆಯನ್ನೇ ಮಾಡಲಿಲ್ಲ. ಪರಶುರಾಮ ಮಡೇರಾ ಅವರಿಗೆ ಶಾಸಕ ಜಿ. ಜನಾರ್ದನರೆಡ್ಡಿ ಅಧ್ಯಕ್ಷ ಪಟ್ಟ ಕೊಡಿಸಲು ಆಸಕ್ತಿ ತೋರದ ಕಾರಣ ಶುಕ್ರವಾರ ಅಧ್ಯಕ್ಷ ಸ್ಥಾನಕ್ಕೆ ನಾಮಪತ್ರ ಸಲ್ಲಿಕೆ ಮಾಡಿ, ಕೊನೆಯಲ್ಲಿ ಹಿಂಪಡೆದರು. ಕೊನೆಗೆ ಅಧ್ಯಕ್ಷ ಸ್ಥಾನಕ್ಕೆ (ಹಿಂದುಳಿದ ವರ್ಗ ಅ) ವಿಧಾನಸಭಾ ಚುನಾವಣೆಯಲ್ಲಿ ರೆಡ್ಡಿಗೆ ಬೆಂಬಲಿಸಿದ ನಗರಸಭೆ 2ನೇ ವಾರ್ಡಿನ ಈರಬಾಯಿ, ಕಾಂಗ್ರೆಸ್ ಅಭ್ಯರ್ಥಿ ಖಾಸಿಂಸಾಬ ಗದ್ವಾಲ್ ನಡುವೆ ಪೈಪೋಟಿ ನಡೆಯಿತು. ಒಟ್ಟು 36 ಮತಗಳಲ್ಲಿ ಈರಬಾಯಿ 28 ಮತ ಪಡೆದು ಅಧ್ಯಕ್ಷರಾದರೆ, ಖಾಸಿಂಸಾಬ 8 ಮತ ಪಡೆದು ಪರಾಭವಗೊಂಡರು.

ಉಪಾಧ್ಯಕ್ಷ ಸ್ಥಾನಕ್ಕೆ (ಪರಿಶಿಷ್ಟ ಜಾತಿ ಮಹಿಳೆ) 32ನೇ ವಾರ್ಡಿನ ಹುಲಿಗೆಮ್ಮ ಕಿರಿಕಿರಿ ಸ್ಪರ್ಧಿಸಿ 7 ಮತಗಳು ಪಡೆದಿದ್ದು, ರೆಡ್ಡಿ ಬೆಂಬಲಿತ ಅಭ್ಯರ್ಥಿ ಸುಧಾ ಸೋಮನಾಥ 29 ಮತಗಳು ಪಡೆದು ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.

ಈ ಹಿಂದೆ ನಗರಸಭೆ ಮೊದಲ ಹಂತದ ಆಡಳಿತವಧಿಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲಿಸಿ, ಇವರು ಉಪಾಧ್ಯಕ್ಷರಾಗಿದ್ದರು. ಈಗ ಎರಡನೇ ಬಾರಿಗೆ ಉಪಾಧ್ಯಕ್ಷರಾಗಿದ್ದಾರೆ.

ಆ ಚುನಾವಣೆ ನಿಮಿತ್ತ ನಗರಸಭೆ ಬಳಿ ಅಗತ್ಯ ಪೊಲೀಸ್ ಬಂದೋಬಸ್ತ್ ನಿಯೋಜಿಸಲಾಗಿತ್ತು. ಬಿಜೆಪಿ ಜಿಲ್ಲಾಧ್ಯಕ್ಷ ಬಸವರಾಜ ದಡೇಸೂಗುರು ಮಾಜಿ ಶಾಸಕ ಪರಣ್ಣ ಮುನವಳ್ಳಿ ಕಾಡಾ ಮಾಜಿ ಅಧ್ಯಕ್ಷ ತಿಪ್ಪೇರುದ್ರಸ್ವಾಮಿ ವಿರೂಪಾಕ್ಷಪ್ಪ ಸಿಂಗನಾಳ ಪೌರಾಯುಕ್ತರ ಆರ್.ವಿರೂಪಾಕ್ಷಮೂರ್ತಿ ಸೇರಿ ನಗರಸಭೆ ಸದಸ್ಯರು ಪೊಲೀಸ್ ಅಧಿಕಾರಿಗಳು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

**ಮಹಿಳೆಯರಿಗೆ ಹೆಚ್ಚಿನ ಆದ್ಯತೆ**

**ಮಹಿಳೆಯರಿಗೆ ಆದ್ಯತೆ ನೀಡುವ ಆಶಯ**

ನಂತರ ಶಾಸಕ ಜಿ.ಜನಾರ್ದನರೆಡ್ಡಿ ಮಾತನಾಡಿ ನರೇಂದ್ರ ಮೋದಿ ಆಶಯದಂತೆ ಮಹಿಳೆಯರಿಗೆ ಹೆಚ್ಚಿನ ಆದ್ಯತೆ ನೀಡುವ ಉದ್ದೇಶದಿಂದ ಅಧ್ಯಕ್ಷ ಉಪಾಧ್ಯಕ್ಷ ಸ್ಥಾನಗಳನ್ನು ಮಹಿಳೆಯರಿಗೆ ನೀಡಲಾಗಿದೆ ಎಂದರು. ಪಕ್ಷದ ಹಿತದೃಷ್ಟಿಯಿಂದ ಅಜಯ್ ಪರಶುರಾಮ ಮನವೊಲಿಸಲಾಗಿದೆ. ಕೆಲವೇ ದಿನಗಳಲ್ಲಿ ನಗರೋತ್ಥಾನದಡಿ ನಗರದ ಎಲ್ಲಾ ವಾರ್ಡ್‌ಗಳನ್ನು ಅಭಿವೃದ್ಧಿಪಡಿಸಲಾಗುತ್ತದೆ. ಈ ಕಾಮಗಾರಿಗಳಿಗೆ ಬೇಕಾಗುವ ಅನುದಾನ ಬಿಡುಗಡೆಯಾಗಿದೆ. ಮೇ 31ರ ಒಳಗಾಗಿ ಎಲ್ಲಾ ವ್ಯಾಪಾರಿಗಳನ್ನು ಮಾರುಕಟ್ಟೆಗೆ ಸ್ಥಳಾಂತರ ಮಾಡಲಾಗುತ್ತದೆ ಎಂದರು.

**ಆಯ್ಕೆಯಾದ ಅಭ್ಯರ್ಥಿಗಳು ಆಕಾಂಕ್ಷಿಗಳೇ ಆಗಿರಲಿಲ್ಲ**

ಈಗ ಅಧ್ಯಕ್ಷ, ಉಪಾಧ್ಯಕ್ಷರಾಗಿ ಆಯ್ಕೆಯಾದ ಅಭ್ಯರ್ಥಿಗಳು ಆಕಾಂಕ್ಷಿಗಳೇ ಆಗಿರಲಿಲ್ಲ. ಶಾಸಕ ಜಿ.ಜನಾರ್ದನರೆಡ್ಡಿ ಮತ್ತೊಮ್ಮೆ ಅಧ್ಯಕ್ಷ ಸ್ಥಾನವನ್ನು ಆಕಾಂಕ್ಷಿತರಿಗೆ ತಪ್ಪಿಸಿ, ಮಹಿಳೆಯರಿಗೆ ಮಣೆಹಾಕಿ ಅಧಿಕಾರ ಪಟ್ಟಕಟ್ಟಿದ್ದಾರೆ.

## ಬಾಗಿದ ವಿದ್ಯುತ್ ಕಂಬಗಳು

• ಉದಯವಾಹಿನಿ ಉಜಿರೆ

ಕಕ್ಕಿಂಜೆಯಿಂದ ವಿದ್ಯುತ್ ಪೂರೈಸುವ ಮುಂಡಾಜೆ ವಿದ್ಯುತ್ ಲೈನಿನ ಕಂಬಗಳನ್ನು ಹೆದ್ದಾರಿ ಕಾಮಗಾರಿಗಾಗಿ ಸ್ಥಳಾಂತರಗೊಳಿಸಿದ್ದು, ಅವುಗಳು ವಾಲಿವೆ. ಅವೈಜ್ಞಾನಿಕವಾಗಿ ಮರುಸ್ಥಾಪಿಸಿದ ಕಾರಣ ಹಲವು ಕಂಬಗಳು ವಾಲಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಆ ಪ್ರದೇಶದಲ್ಲಿ ವಿದ್ಯುತ್ ಪೂರೈಕೆ ಸ್ಥಗಿತಗೊಂಡಿದೆ.

ಪಿಲಕಳದಲ್ಲಿ ವಿದ್ಯುತ್ ಟವರ್ ಮುರಿದು ಬಿದ್ದಿದೆ. ಗುಡುಗು ಸಹಿತ ಭಾರಿ ಮಳೆಯಿಂದಾಗಿ ವಿದ್ಯುತ್ ಪೂರೈಕೆ ವ್ಯತ್ಯಯವಾಗುತ್ತಿದ್ದು ಗ್ರಾಹಕರು ಸಮಸ್ಯೆ ಎದುರಿಸುತ್ತಿದ್ದಾರೆ.

## ಜಾಹೀರಾತು ಫಲಕ ತೆರವು

• ಉದಯವಾಹಿನಿ ಹಾವೇರಿ

ನಗರದ ಪ್ರಮುಖ ವೃತ್ತಗಳಲ್ಲಿರುವ ಸ್ವಾತಂತ್ರ್ಯ ಹೋರಾಟಗಾರರ ಪ್ರತಿಮೆ ಬಳಿ ಹಾಕಲಾಗಿದ್ದ ಜಾಹೀರಾತು ಫಲಕಗಳನ್ನು ನಗರಸಭೆ ಸಿಬ್ಬಂದಿ ಶುಕ್ರವಾರ ತೆರವುಗೊಳಿಸಿದರು. ನಗರದ ಹಲವು ಕಡೆಗಳಲ್ಲಿ ಎಲ್ಲೆಂದರಲ್ಲಿ ಜಾಹೀರಾತು ಫಲಕ ಹಾಗೂ ಪೋಸ್ಟರ್ ಅಂಟಿಸುತ್ತಿದ್ದ ಬಗ್ಗೆ ವರದಿ ಪ್ರಕಟಿಸಲಾಗಿತ್ತು. ವರದಿ ಗಮನಿಸಿದ ನಗರಸಭೆ ಅಧ್ಯಕ್ಷೆ ಶಶಿಕಲಾ ಮಾಳಗಿ ಅವರು ಜಾಹೀರಾತು ಫಲಕಗಳನ್ನು ತೆರವುಗಳಿಸುವಂತೆ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದ್ದರು.

ಹೊಸಮನಿ ಸಿದ್ದಪ್ಪ ವೃತ್ತಕ್ಕೆ ತೆರಳಿದಿದ್ದ ನಗರಸಭೆ ಸಿಬ್ಬಂದಿ, ಪ್ರತಿಮೆ ಬಳಿ ನೇತು ಹಾಕಿದ್ದ ಫಲಕಗಳನ್ನು ತೆರವುಗೊಳಿಸಿದರು. ಇದರ ಜೊತೆಯಲ್ಲಿಯೇ ನಗರದ ಹಲವು ಕಡೆಗಳಲ್ಲಿ ಅಳವಡಿಸಿದ್ದ ಜಾಹೀರಾತುಗಳನ್ನು ತೆರವುಗೊಳಿಸಿದ್ದಾರೆ. ಪತ್ರಿಕೆಯಲ್ಲಿ ಬಂದ ವರದಿಯಿಂದ ಎಚ್ಚೆತ್ತು ಜಾಹೀರಾತು ಫಲಕ ತೆರವು ಮಾಡಿರುವ ನಗರಸಭೆಗೆ ಅಭಿನಂದನೆಗಳು. ಮುಂಬರುವ ದಿನಗಳಲ್ಲಿಯೂ ಪ್ರತಿಮೆ ಬಳಿ ಯಾವುದೇ ಜಾಹೀರಾತು ಹಾಕದಂತೆ ಕಠಿಣ ಕ್ರಮ ಕೈಗೊಳ್ಳಬೇಕು' ಎಂದು ಜನರು ಆಗ್ರಹಿಸಿದ್ದಾರೆ.

## ಶಂಕರಾಚಾರ್ಯರಿಂದ ಪರಂಪರೆಯ ನೆಲೆಗಟ್ಟು ಭದ್ರ

• ಉದಯವಾಹಿನಿ ಶಿವಮೊಗ್ಗ

ಶಂಕರಾಚಾರ್ಯರು ಸದಾ ಪ್ರಾತಃಸ್ಮರಣೀಯರು. ದೇಶದ ಉದ್ದಗಲಕ್ಕೂ ಸಂಚರಿಸಿ ತತ್ವಗಳು ಹಾಗೂ ಸಂಸ್ಕೃತಿಯನ್ನು ಪಸರಿಸಿ ನಮ್ಮ ಪರಂಪರೆಯ ನೆಲೆಗಟ್ಟನ್ನು ಭದ್ರಪಡಿಸಿದ್ದಾರೆ ಎಂದು ಶಾಸಕ ಎಸ್.ಎನ್. ಚನ್ನಬಸಪ್ಪ ಅಭಿಪ್ರಾಯಪಟ್ಟರು. ಜಿಲ್ಲಾಡಳಿತದಿಂದ ಶುಕ್ರವಾರ ಕುವೆಂಪು ರಂಗಮಂದಿರದಲ್ಲಿ ಏರ್ಪಡಿಸಿದ್ದ ಶಂಕರಾಚಾರ್ಯ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶಂಕರಾಚಾರ್ಯರ ಮಹತ್ವದ ಕಾರ್ಯದಿಂದಾಗಿ ಧರ್ಮ ಉಳಿದಿದೆ. ದೇಶದ ಉದ್ದಗಲಕ್ಕೂ ಸಂಚರಿಸಿ ಜೀವನಕ್ಕೆ ಅಗತ್ಯವಾದ ತತ್ವಗಳನ್ನು ಉಪದೇಶಿಸಿದ್ದಾರೆ. ಐದು ಕಡೆ ಪೀಠ ಸ್ಥಾಪನೆ ಮಾಡಿರುವ ಇವರು ಶ್ರೇಷ್ಠ ಪರಂಪರೆಯ ರೂವಾರಿ. ಸಾಂಸ್ಕೃತಿಕ ಪರಂಪರೆಯ ನೆಲೆಗಟ್ಟು ಭದ್ರ ಆಗಿರುವುದು ಅವರಿಂದ ಎಂದರು. ಶಿವಮೊಗ್ಗದ ಪ್ರವಚನಕಾರ ಜಿ.ಎಸ್. ನಟೇಶ್ ವಿಶೇಷ ಉಪನ್ಯಾಸ ನೀಡಿ, ಶಂಕರಾಚಾರ್ಯರು ನಮ್ಮೆಲ್ಲರಿಗೆ ಜಾಗೃತಿ ಮಾತು ಹೇಳಿದ್ದಾರೆ. ಅತ್ಯಂತ ಸರಳವಾಗಿ ಜೀವನದ ತತ್ವ, ವಿಚಾರಗಳ ಕಟ್ಟಿಕೊಟ್ಟಿದ್ದಾರೆ. ಮಾನವರ ಬದುಕನ್ನು ಸುಂದರ, ಸಾರ್ಥಕಗೊಳಿಸಿಕೊಳ್ಳುವ ತತ್ವಗಳ ನೀಡಿದ್ದಾರೆ. ಭಗವಂತನನ್ನು ಅರಿಯುವುದೇ ತತ್ವ ಎಂದಿರುವ ಅವರು 4 ವೇದಗಳನ್ನು ಆಯ್ದ ಮಹಾವಾಕ್ಯ ನೀಡಿದ್ದಾರೆ. ಹಿಂದೆ ಜಾತಿ, ಮತ ಇರಲಿಲ್ಲ. ಅದನ್ನು ನಾವು ಮಾಡಿಕೊಂಡಿದ್ದು. ಬ್ರಹ್ಮ ನೀತಿಯೊಂದೇ ಇದ್ದದ್ದು. ದಾರ್ಶನಿಕರು ನಮ್ಮ ಜೀವನ ಸಾರ್ಥಕಗೊಳಿಸಲು, ಸುಗುಮಗೊಳಿಸುವುದಕ್ಕಾಗಿ ತತ್ವಗಳನ್ನು ನೀಡಿದ್ದಾರೆ ಎಂದರು. ರಾಜ್ಯ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಸ್.ರವಿಕುಮಾರ್ ಮಾತನಾಡಿ, ಶಂಕರಾಚಾರ್ಯರು ಎಲ್ಲ ಸಮಾಜಕ್ಕೆ ಸೇರಿದ ದಾರ್ಶನಿಕರು, ಎಲ್ಲರೂ ಸೇರಿ ಜಯಂತಿ ಆಚರಣೆ ಮಾಡೋಣ ಎಂದರು.


ಉದಯವಾಹಿನಿ ಚಿತ್ರ

## ದೇವಸ್ಥಾನದೊಂದಿಗೆ ಶಾಲೆಗಳನ್ನೂ ನಿರ್ಮಿಸಿ: ಜಿ.ಬಿ. ವಿನಯಕುಮಾರ್

• ಉದಯವಾಹಿನಿ ಹೊನ್ನಾಳಿ

ದೇವಸ್ಥಾನಗಳನ್ನು ಕಟ್ಟುವುದರ ಜತೆಗೆ ಶಾಲೆಗಳನ್ನೂ ನಿರ್ಮಿಸಬೇಕು. ಉತ್ತಮ ಗ್ರಂಥಾಲಯಗಳನ್ನೂ ಆರಂಭಿಸಿ ಎಂದು ಇನ್‌ಸೈಟ್ಸ್ ಐಎಎಸ್‌ನ ಸಂಸ್ಥಾಪಕ ಜಿ.ಬಿ. ವಿನಯಕುಮಾರ್ ಸಲಹೆ ನೀಡಿದರು.

ತಾಲ್ಲೂಕಿನ ಯರಲಬನ್ನಿಕೋಡು ಗ್ರಾಮದಲ್ಲಿ ಶುಕ್ರವಾರ ನಡೆದ ಕರಿಯಮ್ಮದೇವಿ, ಮಾತಂಗಮ್ಮ ದೇವಾಲಯದ ನೂತನ ಶಿಲಾಮೂರ್ತಿ ಪ್ರತಿಷ್ಠಾಪನೆ, ಕರಿಗಲ್ಲು ಸ್ಥಾಪನೆ ಮತ್ತು ನೂತನ ಗೋಪುರ ಕಳಶಾರೋಹಣ ಕಾರ್ಯಕ್ರಮದಲ್ಲಿ ಮಾತನಾಡಿದರು.

ಇತ್ತೀಚೆಗೆ ದೇವಸ್ಥಾನದ ಗೃಹಪ್ರವೇಶವೊಂದರ ಕಾರ್ಯಕ್ರಮದಲ್ಲಿ ಸಾಣೇಹಳ್ಳಿ ಶ್ರೀಗಳು ದೇವಸ್ಥಾನ ಕಟ್ಟುವುದಕ್ಕೆ ಹಣ ಕೊಡಬೇಡಿ ಎಂದು ಹೇಳಿದ್ದಾರೆ. ಇದರಿಂದ ನನಗೂ ಅನುಕೂಲವಾಯಿತು. ಗ್ರಾಮಸ್ಥರು ದೇವಸ್ಥಾನಗಳನ್ನು ನಿರ್ಮಿಸುವಲ್ಲಿ ತೋರುವ ಶ್ರದ್ಧೆ ಕಾಳಜಿಯನ್ನು ಉತ್ತಮ ಸುಸಜ್ಜಿತ ಶಾಲೆಗಳನ್ನು ನಿರ್ಮಿಸಲೂ ತೋರಬೇಕು.

ಪ್ರತಿಯೊಂದು ಗ್ರಾಮದಲ್ಲಿ ಉತ್ತಮ ಗ್ರಂಥಾಲಯಗಳನ್ನು ಸ್ಥಾಪಿಸಬೇಕು. ಗ್ರಂಥಾಲಯಕ್ಕೆ ಪುಸ್ತಕಗಳ ಖರೀದಿಗೆ ನಾನು ಹಣ ಕೊಡುತ್ತೇನೆ' ಎಂದು ಹೇಳಿದರು. 'ಭಕ್ತಿ, ಸಂಸ್ಕೃತಿ ಉಳಿಯಬೇಕಾದರೆ ದೇವಸ್ಥಾನಗಳ ಅಗತ್ಯ ಇದೆ. ದೇವಸ್ಥಾನಗಳು ನೆಮ್ಮದಿಯ ತಾಣಗಳು' ಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಹೇಳಿದರು.


ಉದಯವಾಹಿನಿ ಚಿತ್ರ

> ಪ್ರತಿಯೊಂದು ಗ್ರಾಮದಲ್ಲಿ ಮಾರಿಹಬ್ಬಕ್ಕೆ 20 ಕೋಟಿಗೂ ಅಧಿಕ ವೆಚ್ಚ ಮಾಡುತ್ತಾರೆ. ಚುನಾವಣೆಗೆ ಲಕ್ಷಗಟ್ಟಲೇ ಹಣ ಖರ್ಚು ಮಾಡುತ್ತಾರೆ. ದೇವಸ್ಥಾನ ನಿರ್ಮಾಣಕ್ಕೆ 2ರಿಂದ 3 ಕೋಟಿ ಖರ್ಚು ಮಾಡುತ್ತಾರೆ. ಆದರೆ ಶಾಲೆಗಳ ದುರಸ್ತಿಗೆ ದುಡ್ಡು ಕೊಡ್ರಪ್ಪ ಎಂದರೆ ಯಾರೂ ಕೊಡುವುದಿಲ್ಲ' ಎಂದು ಶಾಸಕ ಡಿ.ಜಿ. ಶಾಂತನಗೌಡ ಬೇಸರಿಸಿದರು. ದೇವಸ್ಥಾನಗಳನ್ನು ನಿರ್ಮಿಸುವ ಗ್ರಾಮಗಳಲ್ಲಿ ಇನ್ನು ಮುಂದೆ ಯಾರೂ ಪೊಲೀಸ್ ಠಾಣೆ, ಕೋರ್ಟ್‌ಗೆ ಹೋಗಬಾರದು -ಡಿ.ಜಿ. ಶಾಂತನಗೌಡ, ಶಾಸಕ

## ಚಿರತೆ ಪ್ರತ್ಯಕ್ಷ: ಗ್ರಾಮಸ್ಥರಲ್ಲಿ ಆತಂಕ

• ಉದಯವಾಹಿನಿ ಬಾಳೆಹೊನ್ನೂರು

ಅತ್ತಿಕುಡಿಗೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಬೆತ್ತದಕೊಳಲು ಗ್ರಾಮದ ದೊಡ್ಡಬಿಳಾಲುವಿನಲ್ಲಿ ರಾತ್ರಿ ವಾಹನದಲ್ಲಿ ಹೋಗುತ್ತಿದ್ದವರಿಗೆ ರಸ್ತೆ ಬದಿಯಲ್ಲಿ ಚಿರತೆ ಕಂಡಿದೆ. ರಾತ್ರಿ ಟಿಟಿ ವಾಹನದಲ್ಲಿ ಹೋಗುತ್ತಿದ್ದವರಿಗೆ ಚಿರತೆ ಕಂಡಿದ್ದು, ಅವರು ಮೊಬೈಲ್ ಫೋನ್‌ನಲ್ಲಿ ಚಿರತೆಯ ಚಿತ್ರ ತೆಗೆದಿದ್ದಾರೆ. ಇದು ಈಗ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ.

ಹೊಂಡ ಇರುವ ಈ ಗ್ರಾಮದ ರಸ್ತೆಯಲ್ಲಿ ಚಲಿಸುವುದೇ ದೊಡ್ಡ ಸವಾಲಾಗಿದ್ದು, ಇಲ್ಲಿ ಚಿರತೆ ಕಂಡಿರುವುದು ವಾಹನ ಸವಾರರು ವಾಹನ ಚಲಾಯಿಸಲು ಭಯಪಡುವ ಪರಿಸ್ಥಿತಿ ಎದುರಾಗಿದೆ. ಅರಣ್ಯ ಇಲಾಖೆ ಚಿರತೆಯನ್ನು ಹಿಡಿದು ಸ್ಥಳಾಂತರ ಮಾಡಬೇಕು ಎಂದು ಗ್ರಾಮಸ್ಥರು ಮನವಿ ಮಾಡಿದ್ದಾರೆ.

## ಬಳಕೆಗೆ ಬಾರದೆ ಪಾಳು ಬಿದ್ದ ಮೀನು ಮಾರುಕಟ್ಟೆ

• ಉದಯವಾಹಿನಿ ಗೋಕರ್ಣ

ಇಲ್ಲಿನ ಮುಖ್ಯ ಕಡಲತೀರದಲ್ಲಿ ನಿರ್ಮಾಣಗೊಂಡ ಮೀನು ಮಾರುಕಟ್ಟೆ ಬಳಕೆಗೆ ಬಾರದೆ ಪಾಳು ಬಿದ್ದಿದ್ದು ಒಂದೆಡೆಯಾದರೆ, ಪ್ರವಾಸಿಗರು ಓಡಾಟ ನಡೆಸುವ ರಸ್ತೆಯೇ ಮಾರುಕಟ್ಟೆಯಂತಾಗಿರುವ ಪರಿಣಾಮ ಸಂಚಾರ ದಟ್ಟಣೆ ಸಮಸ್ಯೆ ಬಿಗಡಾಯಿಸಿರುವ ದೂರುಗಳಿವೆ.

ಇಲ್ಲಿ ಮೀನು ಮಾರಾಟಕ್ಕೆ ರಸ್ತೆ ಬದಿಯೇ ಮುಖ್ಯ ಸ್ಥಳವಾಗಿದೆ. ಮುಖ್ಯ ಕಡಲತೀರಕ್ಕೆ ಹೋಗುವ ರಸ್ತೆ ಮೀನು ಮಾರುಕಟ್ಟೆ ರಸ್ತೆ ಎಂದೇ ಪ್ರಸಿದ್ಧಿ ಪಡೆದಿದೆ. ಅದೇ ರಸ್ತೆಯಲ್ಲಿಯೇ ಮೀನು ಮಾರಾಟ ಮಾಡಲಾಗುತ್ತಿದೆ. ಮುಖ್ಯ ಸಮುದ್ರ ತೀರದಲ್ಲಿ ಗ್ರಾಮ ಪಂಚಾಯಿತಿ ಸ್ಥಳದಲ್ಲಿ ನೂತನ ಮೀನು ಮಾರುಕಟ್ಟೆ ಕಟ್ಟಲ್ಪಟ್ಟರೂ, ಮೀನುಗಾರರು ಬಳಸದೇ ನಿರುಪಯುಕ್ತವಾಗಿದೆ.

'ಸದ್ಯ ಮೀನು ಮಾರಾಟ ಮಾಡುತ್ತಿರುವ ಸ್ಥಳ ಮೀನು ಮಾರಾಟಗಾರರಿಗೆ ಮತ್ತು ಮೀನು ಕೊಳ್ಳುವವರಿಗೆ ಅನುಕೂಲವಾಗಿಲ್ಲದಿದ್ದರೂ ಆ ಸ್ಥಳ ಬಿಟ್ಟು ಬೇರೆಡೆಗೆ ಹೋಗಲು ಮೀನುಗಾರರು ಒಪ್ಪುತ್ತಿಲ್ಲ. ಅದೇ ರಸ್ತೆ ಸಮುದ್ರಕ್ಕೂ ಕೂಡುವ ರಸ್ತೆಯಾಗಿರುವ ಕಾರಣದಿಂದ ವಾಹನಗಳ ಸಂಚಾರ ಹೆಚ್ಚು. ಗುಡ್ಡದ ಮೇಲಿನಿಂದ ಬರುವ ವಾಹನಗಳು ಪಾರ್ಕಿಂಗ್ ಸ್ಥಳದಿಂದ ಮುಖ್ಯ ರಸ್ತೆಗೆ ಹೋಗಲೂ ಇದೇ ಮಾರ್ಗವಾಗಿದೆ. ಇದರಿಂದ ಸಂಚಾರ ದಟ್ಟಣೆ ಸಮಸ್ಯೆ ನಿರಂತರವಾಗಿದೆ' ಎನ್ನುತ್ತಾರೆ ಸ್ಥಳೀಯರು.

ಸುಮಾರು 40 ಲಕ್ಷ ವೆಚ್ಚದಲ್ಲಿ ಮುಖ್ಯ ಸಮುದ್ರ ತೀರದಲ್ಲಿ ಸುಸಜ್ಜಿತ ಮೀನು ಮಾರುಕಟ್ಟೆ ನಿರ್ಮಾಣವಾಗಿ ಹಲವು ಸಮಯವಾಗಿದೆ. ಆದರೆ ಮೀನುಗಾರರು ಇನ್ನೂ ನೂತನ ಕಟ್ಟಡವನ್ನು ಉಪಯೋಗಿಸುತ್ತಿಲ್ಲ. ಕಟ್ಟಡ ಪಾಳು ಬೀಳುತ್ತಿದ್ದು, ರಾತ್ರಿ ವೇಳೆ ಅನೈತಿಕ ಚಟುವಟಿಕೆಗಳಿಗೆ ಬಳಕೆಯಾಗುತ್ತಿದೆ. ಇದರಿಂದ ಈ ಭಾಗದ ಪರಿಸರ ಹದಗೆಡುತ್ತಿದೆ' ಎಂದು ದೂರಿದರು.

ಮುಖ್ಯ ಕಡಲತೀರದಲ್ಲಿ ಕರಾವಳಿ ಅಭಿವೃದ್ಧಿ ಪ್ರಾಧಿಕಾರ ಮತ್ತು ಸಂಸದರ ನಿಧಿಯಿಂದ ಮೀನು ಮಾರುಕಟ್ಟೆ ನಿರ್ಮಿಸಲಾಗಿದೆ. ಆದರೆ ಅಧಿಕಾರಿಗಳು ಅದನು ಸರಿಯಾಗಿ ನಿರ್ವಹಣೆ ಮಾಡದೇ ಹಾಳುಗೆಡವಿದಾರೆ. ಮಾರುಕಟ್ಟೆಯನ್ನು ಈ ಕಟ್ಟಡಕ್ಕೆ ಸ್ಥಳಾಂತರಿಸುವ ಕುರಿತು ಶಾಸಕರೊಂದಿಗೂ ಚರ್ಚಿಸಲಾಗಿದೆ ಎಂದು ಕರಾವಳಿ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಸದಸ್ಯ ಮಂಜುನಾಥ ಜನ್ನು ಹೇಳಿದರು.


ಉದಯವಾಹಿನಿ ಚಿತ್ರ

> ರಸ್ತೆ ಬದಿಯಲ್ಲೇ ಮೀನು ಮಾರಾಟದಿಂದ ಸಂಚಾರ ದಟ್ಟಣೆ ಸಮಸ್ಯೆ ಉಂಟಾಗಿದೆ. ಮೀನುಗಾರರು ನೂತನ ಮೀನು ಮಾರುಕಟ್ಟೆಯನ್ನು ಮೀನು ಮಾರಾಟಕ್ಕೆ ಬಳಕೆ ಮಾಡಿದರೆ ಸಮಸ್ಯೆ ಬಗೆಹರಿಯಬಹುದು
> -ಪ್ರಭಾಕರ ಪ್ರಸಾದ, ಗ್ರಾಮ ಪಂಚಾಯಿತಿ ಸದಸ್ಯ

## ಪ್ರತಿ ಜಿಲ್ಲೆಗೊಂದು ಐಸಿಯು ಇರಲಿ: ಡಾ.ಸಿ.ಎನ್.ಮಂಜುನಾಥ

• ಉದಯವಾಹಿನಿ ಕಲಬುರಗಿ

ಪ್ರತಿ ಜಿಲ್ಲಾ ಆಸ್ಪತ್ರೆಯಲ್ಲಿ ಅತ್ಯಾಧುನಿಕ ವ್ಯವಸ್ಥೆಯ ತುರ್ತು ನಿಗಾ ಘಟಕ (ಐಸಿಯು)ದ ಸೌಲಭ್ಯ ಆಗಬೇಕು' ಎಂದು ಜಯದೇವ ಆಸ್ಪತ್ರೆ ನಿವೃತ್ತ ನಿರ್ದೇಶಕ ಮತ್ತು ಬೆಂಗಳೂರು ಗ್ರಾಮಾಂತರ ಸಂಸದ ಡಾ.ಸಿ.ಎನ್.ಮಂಜುನಾಥ ಹೇಳಿದರು.

ನಗರದ ಎಂಆರ್‌ಎಂಸಿ ಬಾಯ್ಸ್ ಹಾಸ್ಟೆಲ್ ಕ್ಯಾಂಪಸ್‌ನಲ್ಲಿ ಫಿಜಿಸಿಯನ್ ಅಸೋಸಿಯೇಷನ್, ಮೆಸಾರ್ಟ್ ಮತ್ತು ಭಾರತೀಯ ವೈದ್ಯಕೀಯ ಸಂಘದ ಸಹಯೋಗದಲ್ಲಿ ನಡೆದ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ಅವರು, ದೇಶದಲ್ಲಿ ಶೇ 40 ವೈದ್ಯರ ಸ್ಥಾನಗಳು ಖಾಲಿ ಇವೆ. ಬಜೆಟ್ ಪೂರ್ವಭಾವಿ ಸಭೆಯಲ್ಲಿ ಭಾರತೀಯ ವೈದ್ಯಕೀಯ ಸಂಘವನ್ನು ಒಳಗೊಳ್ಳಿಸಬೇಕು. ಆಯುಷ್ಮಾನ್ ಭಾರತದ ಹೊಸ ಪ್ಯಾಕೇಜ್ ಅ ನ್ನು ರಾಜ್ಯ ಸರ್ಕಾರ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ವೈದ್ಯರು ನಾಯಕತ್ವ ಗುಣ ಬೆಳೆಸಿಕೊಳ್ಳಬೇಕು, ಸಂವಹನ ಕೌಶಲ ಹೆಚ್ಚಿಸಿಕೊಳ್ಳಬೇಕು. ಸಾಯುವ ರೋಗಿಯನ್ನು ಬೇರೆ ಆಸ್ಪತ್ರೆಗೆ ಶಿಫ್ಟ್ ಮಾಡಬಾರದು. ಸಾಧ್ಯವಿದ್ದರೆ ವೈದ್ಯರನ್ನೇ ಕರೆಯಿಸಿಕೊಳ್ಳಬೇಕು' ಎಂದು ಯುವ ವೈದ್ಯರಿಗೆ ಸಲಹೆಗಳನ್ನು ನೀಡಿದರು. ಭಾರತೀಯ ವೈದ್ಯಕೀಯ ಸಂಘದ ರಾಷ್ಟ್ರೀಯ ಅಧ್ಯಕ್ಷ ಡಾ.ದಿಲೀಪ ಭಾನುಶಾಲಿ ಮಾತನಾಡಿ, ದೇಶದಲ್ಲಿ 32 ಲಕ್ಷಕ್ಕೂ ಅಧಿಕ ವೈದ್ಯರಿದ್ದಾರೆ. ಆದರೆ 4 ಲಕ್ಷ ವೈದ್ಯರು ಮಾತ್ರ ಐಎಂಎ ಸದಸ್ಯತ್ವ ಹೊಂದಿದ್ದಾರೆ. ಕಲಬುರಗಿಯಲ್ಲಿ 700 ವೈದ್ಯರು ಹೊಂದಿದ್ದಾರೆ. ಐಎಂಎಗೆ ಯುವಶಕ್ತಿ ಬೇಕಾಗಿದೆ. ಹಾಗಾಗಿ ಇದರ ಸಂಖ್ಯೆ ಇನ್ನೂ ಹೆಚ್ಚಾಗಬೇಕು' ಎಂದರು.

ಎಚ್‌ಕೆಇ ಸೊಸೈಟಿ ಅಧ್ಯಕ್ಷ ಶಶೀಲ್ ನಮೋಶಿ ಮಾತನಾಡಿ, ಸಿ.ಎನ್.ಮಂಜುನಾಥ ಕೇಂದ್ರ ಮಂತ್ರಿಮಂಡಲದಲ್ಲಿ ಆರೋಗ್ಯ ಸಚಿವರಾಗಬೇಕಿತ್ತು ಎಂದು ಆಶಯ ವ್ಯಕ್ತಪಡಿಸಿದರು. ನಾಗಪುರ ವೈದ್ಯಕೀಯ ಕಾಲೇಜಿನ ಡಾ.ವೇದಪ್ರಕಾಶ ಮಿಶ್ರಾ ವರ್ಚ್ಯುವಲ್ ಮೂಲಕ ಮಾತನಾಡಿದರು. ಕೆಬಿಎನ್ ವಿವಿಯ ಡಾ.ಪಿ.ಎಸ್.ಶಂಕರ್ ಪ್ರಾಸ್ತಾವಿಕವಾಗಿ ಮಾತನಾಡಿದರು.


ಉದಯವಾಹಿನಿ ಚಿತ್ರ

## ಜಿಲ್ಲೆಗೆ 21ನೇ ಸ್ಥಾನ

• ಉದಯವಾಹಿನಿ ದಾವಣಗೆರೆ

ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯ ಫಲಿತಾಂಶ ಶುಕ್ರವಾರ ಪ್ರಕಟಗೊಂಡಿದ್ದು, ದಾವಣಗೆರೆ ಜಿಲ್ಲೆಯು 21ನೇ ಸ್ಥಾನ ಪಡೆದಿದೆ. ಜಿಲ್ಲೆಯಲ್ಲಿ 19,964 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದರು. ಈ ಪೈಕಿ 13,195 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಜಿಲ್ಲೆಯು ಶೇ 66.09ರಷ್ಟು ಫಲಿತಾಂಶ ಪಡೆದಿದೆ. ಕಳೆದ ವರ್ಷ ಜಿಲ್ಲೆಯು ಶೇ 74.28 ರಷ್ಟು ಫಲಿತಾಂಶ ಪಡೆಯುವ ಮೂಲಕ 23ನೇ ಸ್ಥಾನ ಪಡೆದಿತ್ತು.

## ರಸ್ತೆಯಲ್ಲಿ ಕಾಣಿಸಿಕೊಂಡ ಕರಡಿ

• ಉದಯವಾಹಿನಿ ಸಂಡೂರು

ಪಟ್ಟಣದ ಕೋರ್ಟ್ ರಸ್ತೆ, ಎಪಿಎಂಸಿ, ವೆಂಕಟೇಶ್ವರ ದೇವಸ್ಥಾನದ ಬಳಿ ತಡರಾತ್ರಿ ಕರಡಿ ಕಾಣಿಸಿಕೊಂಡಿದ್ದರಿಂದ ಜನರು ಆತಂಕಕ್ಕೆ ಒಳಗಾಗಿದ್ದಾರೆ. ಕರಡಿಯು ರಸ್ತೆಯಲ್ಲಿ ಸಂಚಾರ ಮಾಡುವ ದೃಶ್ಯವನ್ನು ಸಾರ್ವಜನಿಕರು ಮೊಬೈಲ್‌ನಲ್ಲಿ ಸೆರೆ ಹಿಡಿದ್ದಾರೆ. ಕೋರ್ಟ್ ರಸ್ತೆಯ ಮೂಲಕ ಕರಡಿಯು ಮನೆಯ ಭದ್ರತಾ ಗೋಡೆ ದಾಟಿ ಎಪಿಎಂಸಿ ಸರ್ಕಾರಿ ಶಾಲೆಯ ಕಡೆಗೆ ಓಡಿ ಹೋಗಿದೆ. ಜನರು ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದ್ದಾರೆ. ಅರಣ್ಯ ಇಲಾಖೆಯ ಸಿಬ್ಬಂದಿ ಬಂದು ಕರಡಿಯನ್ನು ಅರಣ್ಯಕ್ಕೆ ಓಡಿಸಿದ್ದಾರೆ.

'ಕರಡಿ ಆಹಾರ ಅರಿಸಿಕೊಂಡು ಪಟ್ಟಣಕ್ಕೆ ಬಂದಿರಬಹುದು. ರಸ್ತೆಯಲ್ಲಿ ಬಿದ್ದ ಮಾವಿನ ಹಣ್ಣುಗಳ ವಾಸನೆ ಹಿಡಿದು ಬಂದಿದ್ದು, ಜನರ ಸುರಕ್ಷತೆಯ ದೃಷ್ಟಿಯಿಂದ ಪಟ್ಟಣದಲ್ಲಿ ಒಂದು ವಾರ ಅರಣ್ಯ ಇಲಾಖೆ ಸಿಬ್ಬಂದಿಯನ್ನು ಭದ್ರತೆಗಾಗಿ ನಿಯೋಜಿಸಲಾಗಿದೆ' ಎಂದು ಸಂಡೂರಿನ ವಲಯ ಅರಣ್ಯಾಧಿಕಾರಿ ದಾದ ಕಲಂದರ್ ಹೇಳಿದರು.

## ಹಳೇ ಅನ್ವೇಷಣೆ ವರದಿ ಆಧರಿಸಿ ಅದಿರು ಬ್ಲಾಕ್ ಹರಾಜು

• ಉದಯವಾಹಿನಿ ಬಳ್ಳಾರಿ

55 ವರ್ಷಗಳ ಹಿಂದೆ ನಡೆಸಿದ ಖನಿಜ ಅನ್ವೇಷಣೆಯ ಆಧಾರದ ಮೇಲೆ ಬೇರೆ ಸಂಸ್ಥೆಯೊಂದರಿಂದ ವರದಿ ಪಡೆದು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯು ಬಳ್ಳಾರಿ ತಾಲ್ಲೂಕಿನ ಸಂಡೂರಿನಲ್ಲಿ ದಟ್ಟಾರಣ್ಯದ (ವರ್ಜಿನ್ ಅರಣ್ಯ) ಅದಿರು ಬ್ಲಾಕ್ ಅನ್ನು ಹರಾಜು ಹಾಕಿರುವುದು ಗೊತ್ತಾಗಿದೆ.

ಹೋರಾಟಗಾರರೊಬ್ಬರು ಮಾಹಿತಿ ಹಕ್ಕು (ಆರ್‌ಟಿಐ) ಕಾಯ್ದೆಯಡಿ ಕೇಳಿದ ಮಾಹಿತಿಗೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ನೀಡಿದ ವಿವರಣೆಯಿಂದ ಈ ವಿಷಯ ಗೊತ್ತಾಗಿದೆ.

ಸಂಡೂರು ತಾಲ್ಲೂಕಿನಲ್ಲಿ ಒಟ್ಟು 7 ಅದಿರು ಬ್ಲಾಕ್‌ಗಳನ್ನು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯು ಈಚೆಗೆ ಹರಾಜು ಹಾಕಿತ್ತು. ಈ ಪೈಕಿ 217.453 (88 ಹೆಕ್ಟೇರ್) ಎಕರೆ ವ್ಯಾಪ್ತಿಯ ಕುಮಾರಸ್ವಾಮಿ ಐರನ್ ಓರ್' ಹೆಸರಿನ ಅದಿರು ಬ್ಲಾಕ್ ದಟ್ಟಾರಣ್ಯವಾಗಿತ್ತು. ಆರ್‌ಬಿಎಸ್‌ಎಸ್‌ಎನ್ ಎಂಬ ಸಂಸ್ಥೆ ಅತ್ಯಧಿಕ ಪ್ರೀಮಿಯಮ್ (ಶೇ. 200) ನೀಡಿ ಈ ಬ್ಲಾಕ್ ಅನ್ನು ತನ್ನದಾಗಿಸಿಕೊಂಡಿತ್ತು.

ಈ ಬ್ಲಾಕ್‌ನಲ್ಲಿ 'ಮಿನರಲ್ ಎಕ್ಸ್‌ಪ್ಲೋರೇಷನ್ ಅಂಡ್ ಕನ್ಸಲ್ಟೆನ್ಸಿ ಲಿಮಿಟೆಡ್ (ಎಂಇಸಿಎಲ್)' ಎಂಬ ಸಂಸ್ಥೆ ಖನಿಜಾನ್ವೇಷಣೆ ಮಾಡಿದೆ ಎಂದು ಟೆಂಡರ್ ದಾಖಲೆಗಳಲ್ಲಿ ಹೇಳಲಾಗಿತ್ತು. ಈ ಸಂಸ್ಥೆ ಖನಿಜಾನ್ವೇಷಣೆ ನಡೆಸಿದ್ದು ಯಾವಾಗ ಎಂದು ಆರ್‌ಟಿಐ ಅಡಿ ಹೋರಾಟಗಾರರು ಪ್ರಶ್ನೆ ಮಾಡಿದ್ದರು.


ಉದಯವಾಹಿನಿ ಚಿತ್ರ

ಇದಕ್ಕೆ ಉತ್ತರಿಸಿರುವ ಗಣಿ ಮತ್ತು ಭೂ ವಿಜ್ಞಾನ ಇಲಾಖೆ 'ಕುಮಾರಸ್ವಾಮಿ ಐರನ್ ಓರ್ ಬ್ಲಾಕ್‌ನಲ್ಲಿ ಹೊಸದಾಗಿ ಯಾವುದೇ ಅನ್ವೇಷಣೆ ಕೈಗೊಂಡಿಲ್ಲ.

ಈ ಪ್ರದೇಶದಲ್ಲಿ ಭಾರತೀಯ ಭೂವೈಜ್ಞಾನಿಕ ಸಂಸ್ಥೆ 1968–72ನೇ ಸಾಲಿನಲ್ಲಿ ಹಾಗೂ ರಾಷ್ಟ್ರೀಯ ಖನಿಜ ಅಭಿವೃದ್ಧಿ ನಿಗಮ (ಎನ್‌ಎಂಡಿಸಿ) 1973–81ನೇ ಸಾಲಿನಲ್ಲಿ ಖನಿಜಾನ್ವೇಷಣೆ ನಡೆಸಿದ್ದು, ಅದರ ವಿವರಗಳನ್ನು ಪರಿಗಣಿಸಿ ಎಂಇಸಿಎಲ್ ಸಂಸ್ಥೆಯು ಖನಿಜಾನ್ವೇಷಣೆ ವರದಿಯನ್ನು ಸಿದ್ದಪಡಿಸಿದೆ. ಈ ವರದಿ ಅನ್ವಯ ಬ್ಲಾಕ್‌ಗಳನ್ನು ಹರಾಜಿಗೆ ಹಾಕಲಾಗಿದೆ. ಹರಾಜು ಪ್ರಕ್ರಿಯೆಯ ಅನುಮೋದನೆಯು ಸರ್ಕಾರದ ಹಂತದಲ್ಲಿ ಬಾಕಿ ಇರುತ್ತದೆ' ಎಂದು ಉತ್ತರ ನೀಡಿದೆ.

### • ದೈನಂದಿನ ಬಳಕೆಗಾಗಿ ನೀರು ತರಲು ಖಾಲಿ ಕೊಡ ಹಿಡಿದುಕೊಂಡು ಗ್ರಾಮದಲ್ಲಿ ಅಲೆದಾಡುವುದು ಸಾಮಾನ್ಯವಾಗಿದೆ

## ಇವಣಿ ಗ್ರಾಮದಲ್ಲಿ ನೀರಿಗಾಗಿ ಹಾಹಾಕಾರ: ಗ್ರಾಮಸ್ಥರು ಆಕ್ರೋಶ

• ಉದಯವಾಹಿನಿ ಚಿತ್ತಾಪುರ

ನೀರು ಪೂರೈಕೆಗೆ ಸಮರ್ಪಕ ವ್ಯವಸ್ಥೆ ಹಾಗೂ ಬೇಸಿಗೆಯಲ್ಲಿ ನೀರಿನ ಸಮಸ್ಯೆ ಉಲ್ಬಣಿಸದಂತೆ ಮುನ್ನೆಚ್ಚರಿಕೆ ವಹಿಸದೆ ಕಡೆಗಣಿಸಿದ್ದರಿಂದ ತಾಲ್ಲೂಕಿನ ಇವಣಿ ಗ್ರಾಮದಲ್ಲಿ ಕುಡಿಯುವ ನೀರಿಗಾಗಿ ಹಾಹಾಕಾರ ಶುರುವಾಗಿದೆ.

ಗ್ರಾಮಕ್ಕೆ ಕುಡಿಯುವ ನೀರು ಸರಬರಾಜು ಮಾಡುವ ಹೊಲದಲ್ಲಿನ ತೆರೆದ ಬಾವಿಯಲ್ಲಿ ಬಿಸಿಲಿನ ತಾಪ ಮತ್ತು ಮರಳು ಗಣಿಗಾರಿಕೆ ದುಷ್ಪರಿಣಾಮದಿಂದ ದಿನೇ ದಿನೇ ನೀರು ಕಡಿಮೆಯಾಗುತ್ತಿದೆ. ಇಡೀ ಗ್ರಾಮಕ್ಕೆ ನೀರು ಸರಬರಾಜು ಮಾಡಲು ಸಾಧ್ಯವಾಗುತ್ತಿಲ್ಲ. ಒಂದೇ ಮೇಲ್ಮಟ್ಟದ ಜಲಸಂಗ್ರಹಗಾರದಿಂದ ನೀರು ಪೂರೈಕೆ ಕಷ್ಟವಾಗುತ್ತಿದೆ. ಟ್ಯಾಂಕ್ ಹತ್ತಿರ ಇರುವ ನಳ ಮತ್ತು ಅಗಸಿ ಹತ್ತಿರ ಮಠದ ಗೋಡೆಗೆ ಅಳವಡಿಸಿದ ನಳಗಳೇ ಗ್ರಾಮಕ್ಕೆ ನೀರಿನ ಆಧಾರವಾ ಗಿದೆ. ಸಮಸ್ಯೆ ಪರಿಹಾರಕ್ಕೆ ಗ್ರಾಮ ಪಂಚಾಯಿತಿ ಆಡಳಿತ ನಿರ್ಲಕ್ಷ್ಯ ವಹಿಸುತ್ತಿದೆ ಎಂದು ಗ್ರಾಮಸ್ಥರು ಆಕ್ರೋಶ ಹೊರಹಾಕುತ್ತಿದ್ದಾರೆ.

ನಿತ್ಯ ಬೆಳಗಾದರೆ ಜನ ಸುಡುವ ಬಿಸಿಲನ್ನೂ ಲೆಕ್ಕಿಸದೆ ಕುಡಿಯಲು ಮತ್ತು ದೈನಂದಿನ ಬಳಕೆಗಾಗಿ ನೀರು ತರಲು ಖಾಲಿ ಕೊಡ ಹಿಡಿದುಕೊಂಡು ಗ್ರಾಮದಲ್ಲಿ ಅಲೆದಾಡುವುದು ಸಾಮಾನ್ಯವಾಗಿದೆ.

ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆ ಮಾಡಬೇಕು ಎಂದು ಮಹಿಳೆಯರು ಖಾಲಿ ಕೊಡದೊಂದಿಗೆ ಗ್ರಾಮ ಪಂಚಾಯಿತಿಗೆ ಹೋಗಿ ಪಿಡಿಒ ಅವರನ್ನು ಮನವಿ ಮಾಡಿದ್ದಾರೆ. ಆದರೆ, ಪಿಡಿಒ ಅವರು ಮಹಿಳೆಯರನ್ನೇ ಹೆದರಿಸಿ, ಅಧ್ಯಕ್ಷರೇ ಬರುವುದಿಲ್ಲ, ನಾವೇನು ಮಾಡಬೇಕು' ಎಂದು ಹಾರಿಕೆಯ ಉತ್ತರ ನೀಡುತ್ತಿದ್ದಾರೆ ಎಂದು ಗ್ರಾಮದ ಮಹೆಬೂಬ್ ಕೂಡಿ, ಹುಸೇನಸಾಬ್ ಭಾಗೋಡಿ, ಭರಮಣ್ಣಾ ಮಡಿವಾಳ, ಆಕಾಶ ಅವರು ತಿಳಿಸಿದರು.

ಗ್ರಾಮದ ದ್ಯಾವಣ್ಣಾ ನಾಟಿಕಾರ ಮತ್ತು ಮಹೆಬೂಬ್ ಸಾಬ್ ಅವದಾನ ಅವರು ತೋಟದಲ್ಲಿನ ನೀರನ್ನು ಉಚಿತವಾಗಿ ನೀಡುತ್ತಿದ್ದು ಗ್ರಾಮಸ್ಥರಿಗೆ ಅನುಕೂಲವಾಗಿದೆ. ಸಮೀಪದ ಬೆಳಗುಂಪಾ, ಭಾಗೋಡಿ, ದಂಡೋತಿ ಹಾಗೂ ಕಲಬುರಗಿ–ಸೇಡಂ ರಾಜ್ಯ ಹೆದ್ದಾರಿಯಲ್ಲಿರುವ ತೆಂಗಳಿ ಕ್ರಾಸ್ ಸಮೀಪದ ಹಬಿಪುರ ದರ್ಗಾದ ಹತ್ತಿರವಿರುವ ಕೊಳವೆ ಬಾವಿಗಳಿಗೆ ಹೋಗಿ ನೀರು ತರುವ ಪರಿಸ್ಥಿತಿಯಿದೆ. ಬೈಕ್, ಎತ್ತಿನ ಗಾಡಿ ಇದ್ದವರು ತರುತ್ತಾರೆ ನಾವೇನು ಮಾಡಬೇಕು ಎಂದು ಮಾಶಾಬಿ, ಹನೀಫಾ, ಲಾಲಾಹ್ಮದ್ ಅವರು ಪ್ರಶ್ನಿಸುತ್ತಿದ್ದಾರೆ.

ಕಳೆದ 2021–22ನೇ ಸಾಲಿನಲ್ಲಿ ಎಸ್.ಡಿ.ಪಿ ಯೋಜನೆಯಡಿ 25 ಲಕ್ಷ ಅನುದಾನದಲ್ಲಿ 50 ಸಾವಿರ ಲೀಟರ್ ಸಾಮರ್ಥ್ಯದ ಮೇಲ್ಮಟ್ಟದ ಜಲಸಂಗ್ರಹಗಾರ ನಿರ್ಮಾಣ ಮಾಡಿ ಆರೇಳು ತಿಂಗಳಾಯಿತು. ಉಪಯೋಗಕ್ಕೆ ಬಾರದ್ದಾಗಿದೆ. ಬೆಳಗುಂಪಾ ರಸ್ತೆ ಮಾರ್ಗದ ಹಳ್ಳದಲ್ಲಿ ಹೊಸದಾಗಿ ಕೊಳವೆ ಬಾವಿ ಕೊರೆಸಲಾಗಿದೆ. ಉತ್ತಮ ನೀರು ಲಭ್ಯವಾಗಿದೆ. ಕೊಳವೆ ಬಾವಿಯಿಂದ ಜಲಸಂಗ್ರಹಗಾರಕ್ಕೆ ಪೈಪುಗಳ ಜೋಡಣೆ ಕಾಮಗಾರಿ ಮಾಡಿಸದೆ ಕಡೆಗಣಿಸಿದ್ದರಿಂದ ನೀರಿನ ಸಮಸ್ಯೆ ಪರಿಹಾರ ಕಾಣದೆ ಗಂಭೀರ ಸಮಸ್ಯೆಯಾಗಿದೆ. ಗ್ರಾಮಸ್ಥರು ಕೊಡ ನೀರಿಗಾಗಿ ಬಿಸಿಲಿನಲ್ಲಿ ತೀವ್ರ ಪರದಾಡುತ್ತಿದ್ದಾರೆ.

ನಿಮ್ಮೂರಲ್ಲಿ ಕೇಳುವವರು, ಹೇಳುವವರು ಯಾರೂ ಇಲ್ಲವೆ ಎಂದು ಊರಿಗೆ ಬಂದ ಬೀಗರು, ನೆಂಟರು ನಮ್ಮನ್ನೆ ಬೈಯ್ಯುತ್ತಿದ್ದಾರೆ ಎಂದು ಗ್ರಾಮದ ಹಿರಿಯರಾದ ಮರೆಪ್ಪ, ಶಿವರಾಯ, ನಾಗಪ್ಪ, ಅಜೀರ್, ಆಕಾಶ ಅವರು ಆಕ್ರೋಶ ವ್ಯಕ್ತ ಮಾಡಿದ್ದಾರೆ. ಈ ಕುರಿತು ಪ್ರತಿಕ್ರಿಯೆಗಾಗಿ ಗ್ರಾಮಪಂಚಾಯಿತಿ ಪಿಡಿಒ ಅವರನ್ನು ಸಂಪರ್ಕಿಸಲು ಕರೆ ಮಾಡಿದರೆ ಅವರ ಮೊಬೈಲ್ ಸ್ವಿಚ್ ಆಫ್ ಎಂದು ಹೇಳುತ್ತಿತ್ತು.


ಉದಯವಾಹಿನಿ ಚಿತ್ರ

**ಗ್ರಾಪಂ ಆಡಳಿತ ನಿರ್ಲಕ್ಷ್ಯ**

> ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ನೋಡಿಕೊಳ್ಳುವುದು ಆಡಳಿತದ ಜವಾಬ್ದಾರಿ. ಯಾವುದೇ ಸಮಸ್ಯೆಯಿರಲಿ ನೆಪ ಹೇಳುವಂತಿಲ್ಲ. ತಕ್ಷಣ ಸಮಸ್ಯೆ ಪರಿಹರಿಸಿ ಗ್ರಾಮಸ್ಥರಿಗೆ ನೀರು ಒದಗಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸುತ್ತೇನೆ
> -ನಾಗಯ್ಯ ಹಿರೇಮಠ, ತಹಶೀಲ್ದಾರ್

> ಹೊಸದಾಗಿ ನಿರ್ಮಾಣ ಮಾಡಿರುವ ಮೇಲ್ಮಟ್ಟದ ಜಲಸಂಗ್ರಹಗಾರಕ್ಕೆ ಹಳ್ಳದಲ್ಲಿ ಹೊಸದಾಗಿ ಕೊರೆಸಿದ ಕೊಳವೆ ಬಾವಿಯಿಂದ ನೀರು ಪೂರೈಸಲು ಪೈಪ್ ಅಳವಡಿಸುವ ಕೆಲಸ ಎರಡು ದಿನದಲ್ಲಿ ಕೈಗೊಂಡು ನೀರಿನ ಸಮಸ್ಯೆ ಪರಿಹಾರ ಮಾಡಲಾಗುವುದು
> -ರಾಜಕುಮಾರ ಅಕ್ಕಿ, ಎಇಇ ಗ್ರಾಮೀಣ ನೀರು ಸರಬರಾಜು ಇಲಾಖೆ

## ಜೋಗದಲ್ಲಿ ಪ್ರವಾಸಿಗರ ಕಲರವ

• ಉದಯವಾಹಿನಿ ಕಾರ್ಗಲ್

ಜೋಗ ನಿರ್ವಹಣಾ ಪ್ರಾಧಿಕಾರವು ಜೋಗ ಜಲಪಾತ ದರ್ಶನಕ್ಕೆ ಪ್ರವೇಶಾವಕಾಶ ಕಲ್ಪಿಸಲಾಗಿದೆ. ಅದಕ್ಕೆ ಪೂರಕವಾಗಿ ಜೋಗ ಜಲಪಾತದಲ್ಲಿ ಬೇಸಿಗೆಯ ಸುಡು ಬಿಸಿಲಿನಲ್ಲಿ ಪ್ರವಾಸಿಗರ ಕಲರವ ಆರಂಭವಾಗಿದೆ. ನೂತನ ವರ್ಷಾರಂಭದಲ್ಲಿ ವಿಶ್ವವಿಖ್ಯಾತ ಜೋಗ ಜಲಪಾತದ ಪ್ರಧಾನ ದ್ವಾರಕ್ಕೆ ಪ್ರವಾಸಿಗರಿಗೆ ನಿರ್ಬಂಧ ವಿಧಿಸಿ 4 ತಿಂಗಳ ಕಾಲ ನಿಷೇಧ ಹೇರಲಾಗಿತ್ತು.

ಅಭಿವೃದ್ಧಿ ಕಾರ್ಯಗಳಿಗಾಗಿ ನಿಷೇಧ ಹೇರಿದ್ದರೂ ದೂರದಿಂದ ಬರುವ ಪ್ರವಾಸಿಗರು ಅತಿ ಮುಖ್ಯವಾದ ಮೈಸೂರು ಬಂಗಲೆ ಪ್ರದೇಶದಿಂದ ಪ್ರಕೃತಿ ದತ್ತವಾದ ಜಲಸಿರಿಯ ನೈಜ ಸೊಬಗನ್ನು ಸವಿಯಲು ಅವಕಾಶ ವಂಚಿತರಾಗಿ ಬೇಸರದೊಂದಿಗೆ ವಾಪಸ್ ಹೋಗುತ್ತಿದ್ದರು.

183 ಕೋಟಿ ವೆಚ್ಚದಲ್ಲಿ ಹಲವು ಅಭಿವೃದ್ಧಿ ಕಾಮಗಾರಿಗಳು ಜೋಗದಲ್ಲಿ ನಡೆಯುತ್ತಿದ್ದು, ನಿರೀಕ್ಷಿತ ಸಮಯದಲ್ಲಿ ಪೂರ್ಣಗೊಳ್ಳುವ ಸಾಧ್ಯತೆ ಕಡಿಮೆಯಾಗಿದೆ. ಪ್ರಸ್ತುತ ಸ್ಥಿತಿಗತಿಗಳನ್ನು ಅವಲೋಕನ ಮಾಡಿರುವ ಜೋಗ ನಿರ್ವಹಣಾ ಪ್ರಾಧಿಕಾರ ಮತ್ತು ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳು ಪ್ರವಾಸಿಗರಿಗೆ ಅನನುಕೂಲ ಆಗಬಾರದು, ಬೇಸರದಿಂದ ಹೋಗಬಾರದು ಎಂಬ ದೃಷ್ಟಿಯಿಂದ ಮೇ 1ರಿಂದ ಜಲಪಾತ ಪ್ರದೇಶದ ಮೈಸೂರು ಬಂಗಲೆಯ ಮುಂಭಾಗದಿಂದ ಜೋಗ ಜಲಪಾತ ವೀಕ್ಷಣೆಗೆ ಮುಕ್ತ ಅವಕಾಶ ಕಲ್ಪಿಸಿದೆ. ಇದರಿಂದ ಪ್ರವಾಸಿಗರ ದಂಡು ಜೋಗತ್ತ ಮುಖ ಮಾಡಿದೆ. ಜಲಪಾತ ವೀಕ್ಷಣೆಗೆ ಪ್ರವಾಸಿಗರಿಗೆ ಮುಕ್ತ ಅವಕಾಶ ಕಲ್ಪಿಸಿರುವುದು ಅತ್ಯಂತ ಸಂತಸದ ವಿಚಾರ. ಪ್ರವಾಸಿಗರು ಬಂದಾಗ ಪ್ರಕೃತಿ ದತ್ತವಾದ ನೈಜ ಸೌಂದರ್ಯ ಸವಿಯಲು ಅವಕಾಶ ಇರಬೇಕು' ಎಂದು ಸ್ಥಳೀಯರಾದ ಎಸ್.ಎಲ್. ರಾಜಕುಮಾರ್ ಅಭಿಪ್ರಾಯಪಟ್ಟರು.

# ಪಹಲ್ಗಾಮ್ ಉಗ್ರರ ದಾಳಿಯಲ್ಲಿ ಐಎಸ್ಐ ಕೈವಾಡ ಬಯಲು ಮಾಡಿದ ಎನ್ಐಎ

**ನವದೆಹಲಿ:** ಪಹಲ್ಗಾಮ್‌ನ ಬೈಸರನ್ ಕಣಿವೆಯಲ್ಲಿ ಏ.22 ರಂದು ನಡೆದ ಭಯೋತ್ಪಾದಕ ದಾಳಿಯ ಹಿಂದೆ ಪಾಕಿಸ್ತಾನದ ಐಎಸ್ಐ ಮತ್ತು ಎಲ್ಇಟಿ ಉಗ್ರರ ಕೈವಾಡವಿರುವುದನ್ನು ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್ಐಎ) ಪತ್ತೆ ಹಚ್ಚಿದೆ. ಪಾಕಿಸ್ತಾನದ ಗುಪ್ತಚರ ಸಂಸ್ಥೆ ಇಂಟರ್ ಸರ್ವೀಸಸ್ ಇಂಟೆಲಿಜೆನ್ಸ್ (ಐಎಸ್ಐ) ಮತ್ತು ಭಯೋತ್ಪಾದಕ ಗುಂಪು ಲಷ್ಕರ್-ಎ-ತೈಬಾ (ಎಲ್ಇಟಿ) ನಡುವಿನ ಕಾರ್ಯಾಚರಣೆಯ ಸಂಬಂಧವನ್ನು ಸೂಚಿಸುತ್ತದೆ ಎಂದು ಮೂಲಗಳು ತಿಳಿಸಿವೆ.

ಎನ್ಐಎ ಮೂಲಗಳ ಪ್ರಕಾರ, 26 ಜನರನ್ನು, ಮುಖ್ಯವಾಗಿ ಪ್ರವಾಸಿಗರನ್ನು ಕೊಂದ ಭಯೋತ್ಪಾದಕ ದಾಳಿಯ ಹಿಂದಿನ ಪಿತೂರಿಯನ್ನು ಹಿರಿಯ ಐಎಸ್ಐ ಅಧಿಕಾರಿಗಳು ನೀಡಿದ ನಿರ್ದೇಶನಗಳ ಮೇರೆಗೆ ಎಲ್ಇಟಿಯೊಳಗೆ ಅಭಿವೃದ್ಧಿಪಡಿಸಲಾಗಿದೆ. ಪಾಕಿಸ್ತಾನದಲ್ಲಿರುವ ಲಷ್ಕರ್ ಪ್ರಧಾನ ಕಚೇರಿಯಲ್ಲಿ ಈ




ಯೋಜನೆಯನ್ನು ಔಪಚಾರಿಕಗೊಳಿಸಲಾಗಿದೆ ಎಂದು ನಂಬಲಾಗಿದೆ.

ದಾಳಿಯ ಕೇಂದ್ರಬಿಂದುವಾಗಿರುವ ಇಬ್ಬರು ಭಯೋತ್ಪಾದಕರನ್ನು ಹಶ್ಮಿ ಮೂಸಾ (ಅಲಿಯಾಸ್ ಸುಲೇಮಾನ್) ಮತ್ತು ಅಲಿ ಭಾಯ್ (ಅಲಿಯಾಸ್ ತಲ್ಹಾ ಭಾಯ್) ಎಂದು ಗುರುತಿಸಲಾಗಿದೆ. ಬಂಧಿತ ಕಾರ್ಯಕರ್ತರ ವಿಚಾರಣೆಯು ಇಬ್ಬರೂ ದಾಳಿಕೋರರು ಪಾಕಿಸ್ತಾನ ಮೂಲದ ಹ್ಯಾಂಡ್ಲರ್‌ಗಳೊಂದಿಗೆ ಸ್ಥಿರವಾದ ಸಂವಹನವನ್ನು ಉಳಿಸಿಕೊಂಡಿದ್ದಾರೆ, ಸಮಯ, ಲಾಜಿಸ್ಟಿಕ್ಸ್ ಮತ್ತು ಮರಣದಂಡನೆಯ ಬಗ್ಗೆ ನಿರ್ದಿಷ್ಟ ಸೂಚನೆ ಗಳನ್ನು ಪಡೆದಿದ್ದಾರೆ ಎಂದು ಸೂಚಿಸುತ್ತದೆ.

**ವಿದ್ಯುನ್ಮಾನ ದತ್ತಾಂಶ ಸಂಗ್ರಹ**

ದಾಳಿಯ ವಾರಗಳ ಮೊದಲು ಮತ್ತು ಆಶ್ರಯ, ನೌಕಾಯಾನ ಮತ್ತು ಬೇಹುಗಾರಿಕೆ ಸೇರಿದಂತೆ ಸ್ಥಳೀಯ ವ್ಯವಸ್ಥಾಪನಾ ಬೆಂಬಲವನ್ನು ಒದಗಿಸಿದ ಓವರ್ ಗೌಂಡ್ ವರ್ಕರ್ಸ್ ಈ (ಒಜಿಡಬ್ಲ್ಯು) ಜಾಲದಿಂದ ಸಹಾಯ ಮಾಡಲಾಯಿತು. ಸಾಕ್ಷ್ಯ ಸಂಗ್ರಹ ಎನ್ಐಎ ವ್ಯಾಪಕವಾದ ವಿಧಿವಿಜ್ಞಾನ ಮತ್ತು ವಿದ್ಯುನ್ಮಾನ ದತ್ತಾಂಶ ಸಂಗ್ರಹವನ್ನು ನಡೆಸಿದೆ. ಘಟನಾ ಸ್ಥಳದಿಂದ ವಶಪಡಿಸಿಕೊಳ್ಳಲಾದ 40 ಕ್ಕೂ ಹೆಚ್ಚು ಕಾರ್ಟ್ರಿಜ್ ಗಳನ್ನು ಬ್ಯಾಲಿಸ್ಟಿಕ್ ಮತ್ತು ರಾಸಾಯನಿಕ ವಿಶ್ಲೇಷಣೆಗೆ ಕಳುಹಿಸಲಾಗಿದೆ.

ತನಿಖಾಧಿಕಾರಿಗಳು ದಾಳಿಯ ಸ್ಥಳದ 3 ಡಿ ಮ್ಯಾಪಿಂಗ್ ಅನ್ನು ಸಹ ಮಾಡಿದರು ಮತ್ತು ಕಣಿವೆಯ ಸುತ್ತಲಿನ ಮೊಬೈಲ್ ಟವರ್‌ಗಳಿಂದ ಡಂಪ್ ಡೇಟಾವನ್ನು ಹೊರತೆಗೆದರು.

ದಾಳಿಯ ಹಿಂದಿನ ದಿನಗಳಲ್ಲಿ ಈ ಪ್ರದೇಶದಲ್ಲಿ ಉಪಗ್ರಹ ಫೋನ್ ಚಟುವಟಿಕೆ ಹೆಚ್ಚಾಗಿದೆ. ಬೈಸಾರನ್ ಮತ್ತು ಸುತ್ತಮುತ್ತ ಕನಿಷ್ಠ ಮೂರು ಉಪಗ್ರಹ ಫೋನ್‌ಗಳು ಕಾರ್ಯನಿರ್ವಹಿಸುತ್ತಿದ್ದು, ಎರಡರ ಸಿಗ್ನಲ್‌ಗಳನ್ನು ಪತ್ತೆಹಚ್ಚಲಾಗಿದೆ ಮತ್ತು ವಿಶ್ಲೇಷಿಸಲಾಗಿದೆ ''

## ಭಾರತ-ಪಾಕ್ ಉದ್ವಿಗ್ನತೆ ಶಮನಕ್ಕೆ ಶೀಘ್ರ ವಿಶ್ವಸಂಸ್ಥೆ ಸಭೆ

**ವಿಶ್ವಸಂಸ್ಥೆ:** ಭಾರತ ಮತ್ತು ಪಾಕಿಸ್ತಾನದ ನಡುವಿನ ಪರಿಸ್ಥಿತಿಯ ಬಗ್ಗೆ ಚರ್ಚಿಸಲು ಯುಎನ್ಎಸ್ಸಿ ಶೀಘ್ರದಲ್ಲೇ ಸಭೆ ಸೇರಬಹುದು ಎಂದು ವಿಶ್ವದ ಉನ್ನತ ರಾಜತಾಂತ್ರಿಕ ಸಂಸ್ಥೆಯ ಅಧ್ಯಕ್ಷರು ಹೇಳಿದ್ದಾರೆ. ಇದು ಅಭಿಪ್ರಾಯಗಳನ್ನು ವ್ಯಕ್ತಪಡಿಸಲು ಮತ್ತು ಪರಮಾಣು ಸಶಸ್ತ್ರ ದಕ್ಷಿಣ ಏಷ್ಯಾದ ನೆರೆಹೊರೆಯವರ ನಡುವಿನ ಉದ್ವಿಗ್ನತೆಯನ್ನು ನಿವಾರಿಸಲು ಸಹಾಯ ಮಾಡುತ್ತದೆ ಎಂದು ಅವರು ಹೇಳಿದರು. ಸಹಜವಾಗಿ, ಸಭೆಗೆ ವಿನಂತಿ ಬಂದರೆ, ಆಗ ಈ ಸಭೆ ನಡೆಯಬೇಕು ಎಂದು ನಾನು ಭಾವಿಸುತ್ತೇನೆ ಏಕೆಂದರೆ, ನಾವು ಹೇಳಿದಂತೆ, ಅಭಿಪ್ರಾಯಗಳನ್ನು ವ್ಯಕ್ತಪಡಿಸಲು ಇದು ಒಂದು ಅವಕಾಶವಾಗಿದೆ ಮತ್ತು ಇದು ಸ್ವಲ್ಪ ಉದ್ವಿಗ್ನತೆಯನ್ನು ನಿವಾರಿಸಲು ಸಹಾಯ ಮಾಡುತ್ತದೆ. ನಾವು ನೋಡುತ್ತೇವೆ ಎಂದು ವಿಶ್ವಸಂಸ್ಥೆಯಲ್ಲಿ ಗ್ರೀಸ್ ನ ಖಾಯಂ ಪ್ರತಿನಿಧಿ ಮತ್ತು ಭದ್ರತಾ ಮಂಡಳಿಯ ಅಧ್ಯಕ್ಷ ಇವಾಂಜೆಲೊಸ್ ಸೆಕೆರಿಸ್ ಪಿಟಿಐ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ನಾವು ನಿಕಟ ಸಂಪರ್ಕದಲ್ಲಿದ್ದೇವೆ ಆದರೆ ಇದು ಶೀಘ್ರದಲ್ಲೇ ಸಂಭವಿಸಬಹುದು ಎಂದು ನಾನು ಹೇಳುತ್ತೇನೆ. ನೋಡೋಣ, ನಾವು ತಯಾರಿ ನಡೆಸುತ್ತಿದ್ದೇವೆ. ಇದು ನಮ್ಮ ಅಧ್ಯಕ್ಷತೆಯ ಮೊದಲ ದಿನ.ಮಂಡಳಿಯ ಕಾರ್ಯಕ್ರಮದ ಬಗ್ಗೆ ಸೆಕೆರಿಸ್ ಯುಎನ್ ವರದಿಗಾರರಿಗೆ ವಿವರಿಸಿದರು.



## ● ನರಹಂತಕರ ದಂಡಿಸಲು ಪರಮಾಧಿಕಾರವಿದೆ ಎಂದು ಭಾರತಕ್ಕೆ ಅಮೆರಿಕ ರಕ್ಷಣಾ ಸಚಿವ ಬೆಂಬಲ

# ಪ್ರತೀಕಾರದ ದಾಳಿಗೆ ಬೆದರಿರುವ ಪಾಕಿಸ್ತಾನ: ಯುದ್ಧ ಮಾಡಲು ಸಿದ್ಧವಿಲ್ಲ ಎಂದ ರಿಜ್ವಾನ್

**ವಾಷಿಂಗ್ಟನ್:** ಪಹಲ್ಗಾಮ್ ನರಮೇಧದ ಬಳಿಕ ಭಾರತದ ಸಂಭವನೀಯ ಪ್ರತೀಕಾರದ ದಾಳಿಗೆ ಬೆದರಿರುವ ಪಾಕಿಸ್ತಾನ ಸಹಾಯ ಕೋರಿ ಅಮೆರಿಕ ಅಧ್ಯಕ್ಷರ ಮೊರೆ ಹೋಗಿದೆ. ''ನಮಗೆ ಶಾಂತಿ ಬೇಕು. ನಮಗೆ ಯುದ್ಧ ಬೇಡ. ಅದು ಕೂಡ ದೊಡ್ಡ ರಾಷ್ಟ್ರದೊಂದಿಗೆ ಯುದ್ಧಕ್ಕೆ ನಾವು ಸಿದ್ಧರಿಲ್ಲ. ಘನತೆಯ ಜತೆಗೆ ಶಾಂತಿ ಸ್ಥಾಪನೆಗೆ ನಮಗೆ ನೆರವಾಗಿ, ಎಂದು ಪಾಕ್ ರಾಯಭಾರಿ ಕೇಳಿಕೊಂಡಿದ್ದಾರೆ.

- ಅಮೆರಿಕ ಅಧ್ಯಕ್ಷ ಟ್ರಂಪ್ ಮೊರೆ ಹೋದ ಪಾಕ್ ರಾಯಭಾರಿ
- ನರಹಂತಕರ ದಂಡಿಸಲು ಪರಮಾಧಿಕಾರವಿದೆ ಎಂದು ಭಾರತಕ್ಕೆ ಅಮೆರಿಕ ರಕ್ಷಣಾ ಸಚಿವ ಬೆಂಬಲ
- ನಮಗೆ ಶಾಂತಿ ಬೇಕು. ನಮಗೆ ಯುದ್ಧ ಬೇಡ ಎಂದ ಪಾಕ್

ಕಾಶ್ಮೀರ ಸಮಸ್ಯೆ ಮುಂದೆ ಮಾಡಿ ಭಾರತ-ಪಾಕಿಸ್ತಾನ ನಡುವಿನ ಸಂಘರ್ಷ ಶಮನಗೊಳಿಸಲು ಮಧ್ಯಪ್ರವೇಶಿಸುವಂತೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ಅಮೆರಿಕದಲ್ಲಿನ ಪಾಕಿಸ್ತಾನ ರಾಯಭಾರಿ ರಿಜ್ವಾನ್ ಸಯೀದ್ ಶೇಖ್ ಮನವಿ ಮಾಡಿಕೊಂಡಿದ್ದಾರೆ.

''ಕಾಶ್ಮೀರ ವಿಷಯ ಭಾರತ-ಪಾಕಿಸ್ತಾನ ನಡುವಿನ ಬಿಕ್ಕಟ್ಟಿಗೆ ಮೂಲ ಕಾರಣ. ಜಾಗತಿಕ ಸಂಘರ್ಷಗಳಲ್ಲಿ



**ನಮಗೆ ಶಾಂತಿ ಬೇಕು**

ಒಂದಾದ ಸಮಸ್ಯೆ ಇತ್ಯರ್ಥಕ್ಕೆ ಮಧ್ಯ ಪ್ರವೇಶಿಸಿ.

ಪಹಲ್ಗಾಮ್ ದಾಳಿಯ ಬಳಿಕ ಉಂಟಾಗಿರುವ ಉದ್ವಿಗ್ನತೆ ಶಮನಗೊಳಿಸಲು ಕ್ರಮ ಕೈಗೊಳ್ಳಿ, ಎಂದು ರಿಜ್ವಾನ್ ಸಯೀದ್ ಶೇಖ್ ಮನವಿ ಮಾಡಿದ್ದಾರೆ.

ಅಮೆರಿಕದ ಸ್ಥಳೀಯ ನಿಯತಕಾಲಿಕೆಗೆ ಸಂದರ್ಶನ ನೀಡಿರುವ ಸಯೀದ್ ಶೇಖ್, ವಿಶ್ವಶಾಂತಿಗೆ ಕ್ರಮ ವಹಿಸಿರುವ ಅಧ್ಯಕ್ಷರು (ಟ್ರಂಪ್) ನಮ್ಮಲ್ಲಿದ್ದಾರೆ.

ಜಾಗತಿಕ ಮಟ್ಟದಲ್ಲಿ ನಡೆಯುತ್ತಿರುವ ಯುದ್ಧ ಕೊನೆಗಾಣಿಸಲು ಶ್ರಮಿಸುತ್ತಿದ್ದಾರೆ.

ಸಂಘರ್ಷ ಕೊನೆ ಗಾಣಿಸುವ ಪರಂಪರೆಯ ಭಾಗವಾಗಿ ಕಾಶ್ಮೀರ ವಿಷಯ ಇತ್ಯರ್ಥಕ್ಕೂ ಕ್ರಮ ವಹಿಸಬೇಕಿದೆ,'' ಎಂದು ಹೇಳಿದ್ದಾರೆ.

ಇದೇ ವೇಳೆ ''ನಾವು ಪರಮಾಣು ಅಸ್ತ್ರ ಹೊಂದಿದ್ದೇವೆ. ಅಸ್ತಿತ್ವದ ಪ್ರಶ್ನೆ ಎದುರಾದಾರೆ ಬಳಕೆಗೆ ಮುಕ್ತ ಅವಕಾಶ ಹೊಂದಿದ್ದೇವೆ, ಎಂದು ಶೇಖ್ ಬೆದರಿಕೆ ಹಾಕಿದ್ದಾರೆ. ಇತ್ತೀಚೆಗೆ ಪಾಕಿಸ್ತಾನ ರೈಲ್ವೆ ಸಚಿವರು ಇದೇ ರೀತಿ ಅಣ್ವಸ್ತ್ರದ ಬೆದರಿಕೆಯೊಡ್ಡಿದ್ದರು.

**ಭಾರತಕ್ಕೆ ಅಮೆರಿಕ ಬೆಂಬಲ:** ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಭಾರತಕ್ಕೆ ಸದಾ ಬೆಂಬಲ ನೀಡುವುದಾಗಿ ಅಮೆರಿಕ ಪುನರುಚ್ಚರಿಸಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರ ಜತೆ ದೂರವಾಣಿಯಲ್ಲಿ ಮಾತುಕತೆ ನಡೆಸಿದ ಅಮೆರಿಕ ರಕ್ಷಣಾ ಸಚಿವ ಪೀಟ್ ಹೆಗ್ಸೆತ್, ಪಹಲ್ಗಾಮ್ ನರಮೇಧವನ್ನು ತೀವ್ರವಾಗಿ ಖಂಡಿಸಿದರು. ಭಾರತ ತನ್ನ ಸಾರ್ವಭೌಮತ್ವ ಕಾಪಾಡಿಕೊಳ್ಳಲು, ತನ್ನನ್ನು ರಕ್ಷಿಸಿಕೊಳ್ಳಲು ಪೂರ್ಣ ಪ್ರಮಾಣದ ಹಕ್ಕು ಹೊಂದಿದೆ. ಪಹಲ್ಗಾಮ್ ನರಹಂತಕರನ್ನು ದಂಡಿಸಲು ಭಾರತಕ್ಕೆ ಪರಮಾಧಿಕಾರವಿದೆ. ಉಗ್ರರ ವಿರುದ್ಧ ಭಾರತ ಕೈಗೊಳ್ಳುವ ಯಾವುದೇ ಕ್ರಮಗಳಿಗೆ ನಮ್ಮ ಬೆಂಬಲವಿರಲಿದೆ,'' ಎಂದು ಹೆಗ್ಸೆತ್ ಹೇಳಿದ್ದಾರೆ.

ಮಾತುಕತೆ ವೇಳೆ ಉಗ್ರರಿಗೆ ಬೆಂಬಲ ನೀಡುತ್ತಿರುವ ಪಾಕಿಸ್ತಾನದ ನಡವಳಿಕೆ ಕುರಿತು ರಾಜನಾಥ್ ಸಿಂಗ್ ಅವರು ಮಾಹಿತಿ ನೀಡಿದರು. ದಕ್ಷಿಣ ಏಷ್ಯಾ ಪ್ರದೇಶದಲ್ಲಿ ಅಶಾಂತಿ ಸೃಷ್ಟಿಸುವ ಮೂಲಕ ಅಸ್ಥಿರತೆಗೆ ಕಾರಣವಾಗುತ್ತಿದೆ ಎಂದು ವಿವರಿಸಿದರು. ಅಮೆರಿಕ ರಕ್ಷಣಾ ಸಚಿವ ಹಾಗೂ ಸಚಿವ ರಾಜನಾಥ್ ಸಿಂಗ್ ನಡುವಿನ ಮಾತುಕತೆ ವಿವರಗಳನ್ನು ರಕ್ಷಣಾ ಸಚಿವಾಲಯದ 'ಎಕ್ಸ್' ಖಾತೆಯಲ್ಲಿ ಹಂಚಿಕೊಳ್ಳಲಾಗಿದೆ.

### ಉಗ್ರರಿಗೆ ದಂಡನೆ ಖಚಿತ

**ಈ ಮಧ್ಯೆ, ಅಮೆರಿಕ ವಿದೇಶಾಂಗ ಸಚಿವ ಮಾರ್ಕೊ ರುಬಿಯೊ ಅವರೊಂದಿಗೆ ಮಾತುಕತೆ ನಡೆಸಿದ ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಜೈಶಂಕರ್, ''ಪಹಲ್ಗಾಮ್ ನರಹಂತಕರನ್ನು ದಂಡಿಸದೆ ಬಿಡುವುದಿಲ್ಲ. ನೊಂದವರಿಗೆ ನ್ಯಾಯ ಕೊಡಿಸುವ ತನಕ ವಿರಮಿಸುವುದಿಲ್ಲ,'' ಎಂದು ಸ್ಪಷ್ಟಪಡಿಸಿದ್ದಾರೆ.**

### ಭಾರತ ಎಂದರೆ ಪಾಕ್‌ಗೆ ನಡುಕ

**ಗಡಿಯಾಚೆಗಿನ ಭಯೋತ್ಪಾದನೆ ಬೆಂಬಲಿಸುತ್ತಿರುವ ಪಾಕಿಸ್ತಾನ ಕಳೆದ ಆರೇಳು ದಶಕಗಳಿಂದ ಭಾರತದ ಹೆಸರು ಕೇಳಿದರೂ ಭಯ ಬೀಳುತ್ತಿದೆ ಎಂದು ಅಮೆರಿಕದ ಗುಪ್ತಚರ ಇಲಾಖೆಯ 1993ರ ರಹಸ್ಯ ದಾಖಲೆಗಳಿಂದ ಬಹಿರಂಗವಾಗಿದೆ.**

ಮಾತುಕತೆ ವೇಳೆ ''ಪಾಕಿಸ್ತಾನದ ಜತೆ ಸದ್ಯ ತಲೆದೋರಿರುವ ಉದ್ವಿಗ್ನತೆ ಶಮನಗೊಳಿಸುವತ್ತ ಗಮನ ಕೊಡಿ. ನೇರ ಮಾತುಕತೆ ಮೂಲಕ ಬಿಕ್ಕಟ್ಟು ಇತ್ಯರ್ಥ ಪಡಿಸಿಕೊಳ್ಳಲು ಮುಂದಾಗಬೇಕು ಎಂದು ಮಾರ್ಕೊ ರುಬಿಯೊ ಅವರು ಭಾರತಕ್ಕೆ ಸಲಹೆ ನೀಡಿದರು.

ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ಅವರಿಗೂ ಕರೆ ಮಾಡಿದ್ದ ರುಬಿಯೊ, ಗಡಿ ಬಿಕ್ಕಟ್ಟು ಇತ್ಯರ್ಥ ಪಡಿಸಿಕೊಳ್ಳಲು ಭಾರತದೊಂದಿಗೆ ಮಾತುಕತೆಗೆ ಮುಂದಾಗಿ ಎಂದು ಸಲಹೆ ನೀಡಿದ್ದರು.

ಆರ್ಥಿಕ, ಸೇನಾಶಕ್ತಿಯಿಂದ ಮಾತ್ರವಲ್ಲ ಅಸ್ತಿತ್ವದ ದೃಷ್ಟಿಯಿಂದಲೂ ಭಾರತದ ವಿಷಯ ಬಂದಾಗ ಪಾಕಿಸ್ತಾನ ನಡುಗುತ್ತದೆ ಎಂದು ಸಿಐಎ ದಾಖಲೆಗಳಲ್ಲಿ ಉಲ್ಲೇಖವಾದ ಅಂಶಗಳಿಂದ ತಿಳಿದು ಬಂದಿದೆ. ಆರ್ಥಿಕವಾಗಿ ಅಸ್ಥಿರಗೊಂಡಿರುವ ಪಾಕಿಸ್ತಾನ, ರಾಜತಾಂತ್ರಿಕ ಸಂಬಂಧಗಳಲ್ಲೂ ಹಿಂದೆ ಬಿದ್ದಿದೆ.

## ಹಿಂದೂ ಧರ್ಮಕ್ಕೆ ಮತಾಂತರಗೊಂಡ ಮುಸ್ಲಿಂ ಕುಟುಂಬ

**ಮಥುರಾ:** ವೃಂದಾವನದ ಆಶ್ರಮವೊಂದರಲ್ಲಿ ವೈದಿಕ ವಿಧಿವಿಧಾನಗಳೊಂದಿಗೆ ನಡೆದ ಧಾರ್ಮಿಕ ಸಮಾರಂಭದಲ್ಲಿ ಮಥುರಾದ ಜಮುನಾಪರ್ ಪ್ರದೇಶದ ಮುಸ್ಲಿಂ ಕುಟುಂಬದ ಎಂಟು ಸದಸ್ಯರು ಹಿಂದೂ ಧರ್ಮಕ್ಕೆ ಮತಾಂತರಗೊಂಡಿದ್ದಾರೆ. ಕುಟುಂಬ ಸದಸ್ಯರು ತಮ್ಮ ಹೆಸರುಗಳನ್ನು ಸಹ ಬದಲಾಯಿಸಿದರು. ಈ ನಿರ್ಧಾರವು ಸ್ವಯಂಪ್ರೇರಿತವಾಗಿದೆ ಮತ್ತು ಅವರ ಪೂರ್ವಜರ ನಂಬಿಕೆಯಲ್ಲಿ ಬೇರೂರಿದೆ ಎಂದು ಹೇಳಿದರು.

ಕುಟುಂಬದ ಮುಖ್ಯಸ್ಥ, 50 ವರ್ಷದ ಜಾಕೀರ್ ಈಗ ಜಗದೀಶ್ ಮೂಲತಃ ಜಿಲ್ಲೆಯ ಶೇರ್ಘರ್ ಪ್ರದೇಶದವರು, ಆದರೆ ವರ್ಷಗಳಿಂದ ತನ್ನ ಅತ್ತೆ-ಮಾವನ ಹಳ್ಳಿಯಲ್ಲಿ ವಾಸಿಸುತ್ತಿದ್ದಾರೆ. ಅಂಗಡಿಯೊಂದನ್ನು ನಡೆಸುತ್ತಿದ್ದಾರೆ.ಮಾಧ್ಯಮಗಳೊಂದಿಗೆ ಮಾತನಾಡಿದ ಜಗದೀಶ್, ನಮ್ಮ ಪೂರ್ವಜರು ಮೊಘಲ್ ಯುಗದವರೆಗೂ ಹಿಂದೂಗಳಾಗಿದ್ದರು.

ಅವರು ಒತ್ತಡಕ್ಕೆ ಮಣಿದು ಇಸ್ಲಾಂಗೆ ಮತಾಂತರಗೊಂಡರು. ಆದರೆ ಮನಸ್ಸು, ಮಾತು ಮತ್ತು ಕೃತಿಯಲ್ಲಿ, ನಾನು ಕಾಳಿ ದೇವಿಯನ್ನು ಪೂಜಿಸುವುದನ್ನು ಮುಂದುವರಿಸಿದ್ದೇನೆ.



ಹಳ್ಳಿಗರು ಈಗಲೂ ನನ್ನನ್ನು ಭಗತ್ ಜಿ ಎಂದು ಕರೆಯುತ್ತಾರೆ.ಮೂಲತಃ ಗುರ್ಜಾರ್ ಸಮುದಾಯಕ್ಕೆ ಸೇರಿದ ಈ ಕುಟುಂಬವು ಕಳೆದ ಮೂರು ವರ್ಷಗಳಿಂದ ತಮ್ಮ ಬೇರುಗಳಿಗೆ ಮರಳಲು ಯೋಚಿಸುತ್ತಿದೆ ಎಂದು ಅವರು ಹೇಳಿದರು. ನಾವು ಯಾವುದೇ ಒತ್ತಡ ಅಥವಾ ಪ್ರಚೋದನೆಯಿಲ್ಲದೆ ಹಿಂದೂ ಧರ್ಮದಲ್ಲಿ ಸಂಪೂರ್ಣ ನಂಬಿಕೆಯೊಂದಿಗೆ ಈ ಕ್ರಮವನ್ನು ತೆಗೆದುಕೊಂಡಿದ್ದೇವೆ ಎಂದು ಅವರು ಹೇಳಿದರು.

ವೃಂದಾವನದ ಶ್ರೀ ಜಿ ವಾಟಿಕಾ ಕಾಲೋನಿಯಲ್ಲಿರುವ ಭಗವತ್ ಧಾಮ್ ಆಶ್ರಮದಲ್ಲಿ ಹಿಂದೂ ಯುವ ವಾಹಿನಿ ಈ ಮತಾಂತರಕ್ಕೆ ಅನುಕೂಲ ಮಾಡಿಕೊಟ್ಟಿದೆ. ಜಗದೀಶ್ ಅವರ ಪತ್ನಿ, ಪುತ್ರರು, ಸೊಸೆಯಂದಿರು, ಮೊಮ್ಮಕ್ಕಳು

**ಮತಾಂತರದ ನಂತರ, ಅವರ ಹೆಸರುಗಳನ್ನು ಈ ಕೆಳಗಿನಂತೆ ಬದಲಾಯಿಸಲಾಯಿತು. ಜಾಕಿರ್ ಜಗದೀಶ್, ಅವರ ಪತ್ನಿ ಗುಡ್ಡಿ ಗುಡಿಯಾ, ಹಿರಿಯ ಮಗ ಅನ್ವರ್ ಸುಮಿತ್, ಕಿರಿಯ ಮಗ ರನ್ವರ್ ರಾಮೇಶ್ವರ್, ಸೊಸೆ ಸಬೀರಾ ಸಾವಿತ್ರಿ ಮತ್ತು ಮೊಮ್ಮಕ್ಕಳಾದ ಸಬೀರ್ ಜೋಯಾ ಮತ್ತು ನೇಹಾ ಕ್ರಮವಾಗಿ ಶತ್ರುಘ್ನ, ಸರಸ್ವತಿ ಮತ್ತು ಸ್ನೇಹಾಗೆ. ಹಿಂದೂ ಯುವ ವಾಹಿನಿ ಕಾರ್ಯಕರ್ತ ಶರದ್ ಸೈನಿ, ಕುಟುಂಬವು ಗಂಗಾ ನೀರಿನಿಂದ ಶುದ್ಧೀಕರಣಕ್ಕೆ ಒಳಗಾಯಿತು ಮತ್ತು ಸಮಾರಂಭಕ್ಕೆ ಮೊದಲು ಕೇಸರಿ ಸ್ಕಾರ್ಫ್ ಧರಿಸಿತ್ತು ಎಂದು ಹೇಳಿದರು.**

ಸೇರಿದಂತೆ ಕುಟುಂಬಸ್ಥರು ಒಂದು ಗಂಟೆ ಕಾಲ ನಡೆದ 'ಹವನ-ಯಜ್ಞ ಹವನ- ಆಚರಣೆಯಲ್ಲಿ ಭಾಗವಹಿಸಿದ್ದರು.

## ಕೇದಾರನಾಥನ ದರ್ಶನಕ್ಕೆ ಮುಗಿಬಿದ್ದ ಭಕ್ತಸಾಗರ

**ಕೇದಾರನಾಥ:** ಹಿಮಾಲಯ ದೇವಾಲಯ ಕೇದಾರನಾಥದ ದ್ವಾರಗಳನ್ನು ಇಂದು ತೆರೆಯಲಾಗಿದ್ದು, ಸುಮಾರು 12,000 ಕ್ಕೂ ಹೆಚ್ಚು ಯಾತ್ರಾರ್ಥಿಗಳು ಸಮಾರಂಭದಲ್ಲಿ ಭಾಗವಹಿಸಿದ್ದರು.11,000 ಅಡಿ ಎತ್ತರದಲ್ಲಿರುವ ದೇವಾಲಯದ ಗೇಟ್‌ಗಳನ್ನು ಬೆಳಿಗ್ಗೆ 7 ಗಂಟೆಗೆ ತೆರೆಯಲಾಯಿತು ಎಂದು ಬದರೀನಾಥ್-ಕೇದಾರನಾಥ ದೇವಾಲಯ ಸಮಿತಿ (ಬಿಕೆಟಿಸಿ) ಅಧಿಕಾರಿಗಳು ತಿಳಿಸಿದ್ದಾರೆ.

ನೇಪಾಳ, ಥೈಲ್ಯಾಂಡ್ ಮತ್ತು ಶ್ರೀಲಂಕಾದಂತಹ ವಿವಿಧ ದೇಶಗಳಿಂದ ತರಲಾದ ಗುಲಾಬಿಗಳು ಮತ್ತು ಚೆಂಡು ಹೂವುಗಳು ಸೇರಿದಂತೆ 54 ಪ್ರಭೇದಗಳ 108 ಕ್ವಿಂಟಾಲ್ ಹೂವುಗಳಿಂದ ಹಿಮಾಲಯ ದೇವಾಲಯವನ್ನು ಅಲಂಕರಿಸಲಾಗಿತ್ತು. ನಾಲ್ಕು ಚಾರ್ ಧಾಮ್ ದೇವಾಲಯಗಳಲ್ಲಿ, 11 ನೇ ಜ್ಯೋತಿರ್ಲಿಂಗವೂ ಆಗಿರುವ ಕೇದಾರನಾಥವು ಅತಿ ಹೆಚ್ಚು ಭಕ್ತರನ್ನು ಸೆಳೆಯುತ್ತದೆ. ಈ ದೇವಾಲಯವು ಶಿವನಿಗೆ ಸಮರ್ಪಿತವಾಗಿದೆ.

ಚಳಿಗಾಲದ ವಿರಾಮದ ನಂತರ ತೆರೆಯಲಾಗುವ ಚಾರ್ ಧಾಮ್ ಸರ್ಕ್ಯೂಟ್‌ನ ಮೂರನೇ ದೇವಾಲಯ ಇದಾಗಿದೆ. ಗಂಗೋತ್ರಿ ಮತ್ತು ಯಮುನೋತ್ರಿ ದೇವಾಲಯಗಳನ್ನು ಏಪ್ರಿಲ್ 30 ರಂದು ಮತ್ತು ಬದರೀನಾಥ್ ದೇವಾಲಯಗಳನ್ನು ಮೇ 4 ರಂದು ತೆರೆಯಲಾಗುವುದು. ಕೇದಾರನಾಥದ ದ್ವಾರಗಳನ್ನು ತೆರೆಯುವ ಪ್ರಕ್ರಿಯೆಯು ಬೆಳಿಗ್ಗೆ 5 ಗಂಟೆಗೆ ಪ್ರಾರಂಭವಾಯಿತು ಎಂದು ಬಿಕೆಟಿಸಿ ಮಾಧ್ಯಮ ಉಸ್ತುವಾರಿ



ಹರೀಶ್ ಗೌರ್ ತಿಳಿಸಿದ್ದಾರೆ. ರಾವಲ್ (ಮುಖ್ಯ ಅರ್ಚಕ) ಭೀಮಾಶಂಕರ್ ಲಿಂಗ್, ಅರ್ಚಕ ಬಾಗೇಶ್ ಲಿಂಗ್, ಕೇದಾರನಾಥ ಶಾಸಕಿ ಆಶಾ ನೌಟಿಯಾಲ್, ರುದ್ರಪ್ರಯಾಗದ ಜಿಲ್ಲಾ ಮ್ಯಾಜಿಸ್ಟ್ರೇಟ್ ಸೌರಭ್ ಗಹವಾರ್, ಬಿಕೆಟಿಸಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವಿಜಯ್ ಪ್ರಸಾದ್ ಥಾಪಿಯಾಲ್. ತೀರ್ಥ ಅರ್ಚಕ ಶ್ರೀನಿವಾಸ್ ಪೋಸ್ತಿ, ಧಾರ್ಮಿಕ ಮುಖಂಡರು ಮತ್ತು ವೇದಪತಿಗಳು ಪೂರ್ವ ದ್ವಾರದಿಂದ ದೇವಾಲಯವನ್ನು ಪ್ರವೇಶಿಸಿದರು ಮತ್ತು ದ್ವಾರಗಳನ್ನು ತೆರೆಯುವ ಮೊದಲು ದೇವಾಲಯದ ಗರ್ಭಗುಡಿಯ ದ್ವಾರದ ಪೂಜೆಯಲ್ಲಿಭಾಗವಹಿಸಿದರು.

ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಕೂಡ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿದ್ದರು ಮತ್ತು ದೇವಾಲಯದ ಬಾಗಿಲು ತೆರೆದ ನಂತರ ಎಲ್ಲರ ಯೋಗಕ್ಷೇಮ ಮತ್ತು ಸಮೃದ್ಧಿಗಾಗಿ ಪ್ರಾರ್ಥಿಸಿ ಪೂಜೆ ಸಲ್ಲಿಸಿದ ಮೊದಲಿಗರು, ದೇಶ ಮತ್ತು ವಿದೇಶಗಳಿಂದ ಪ್ರತಿವರ್ಷ ಲಕ್ಷಾಂತರ ಭಕ್ತರು ಭೇಟಿ ನೀಡುವ ಈ ದೇವಾಲಯವು ಚಳಿಗಾಲದ ತಿಂಗಳುಗಳಲ್ಲಿ ಮುಚ್ಚಲ್ಪಡುತ್ತದೆ.

### ಅಪ್ರಚೋದಿತ ಗುಂಡಿನ ದಾಳಿ

**ಈ ಬಾರಿ ಕೇದಾರನಾಥದಲ್ಲಿ ಯಾತ್ರಾರ್ಥಿಗಳಿಗೆ ಹೊಸ ವೈಶಿಷ್ಟ್ಯವೆಂದರೆ ವಾರಣಾಸಿ, ಹರಿದ್ವಾರ ಮತ್ತು ಹೃಷಿಕೇಶದಲ್ಲಿ ಗಂಗಾ ಆರತಿ ಮಾದರಿಯಲ್ಲಿ ದೇವಾಲಯದ ಬಳಿ ಮಂದಾಕಿನಿ ಮತ್ತು ಸರಸ್ವತಿ ನದಿಗಳ ಸಂಗಮದಲ್ಲಿ ನಡೆಸಲಾಗುವ ಭವ್ಯ ಆರತಿ ಎಂದು ಬಿಕೆಟಿಸಿ ಸಿಇಒ ವಿಜಯ್ ಥಾಪಿಯಾಲ್ ಹೇಳಿದ್ದಾರೆ. ಆರತಿಗಾಗಿ ಎಲ್ಲಾ ವ್ಯವಸ್ಥೆಗಳನ್ನು ಮಾಡಲಾಗಿದ್ದು, ಮೂರು ಬದಿಗಳಲ್ಲಿ ರಾಂಪ್‌ಗಳನ್ನು ನಿರ್ಮಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.**

## ಬೆಳಗಾವಿ ಮತ್ತು ಕಾರವಾರ ಮಹಾರಾಷ್ಟ್ರಕ್ಕೆ ಸೇರಬೇಕು : ಅಜಿತ್ ಪವಾರ್

**ಮುಂಬೈ:** ಕರ್ನಾಟಕದ ಮರಾಠಿ ಮಾತನಾಡುವ ಪ್ರದೇಶಗಳು ಇನ್ನೂ ಮಹಾರಾಷ್ಟ್ರ ಭಾಗವಾಗಿಲ್ಲ ಎಂದು ಮಹಾರಾಷ್ಟ್ರ ಡಿಸಿಎಂ ಅಜಿತ್ ಪವಾರ್ ಹೇಳಿಕೆ ನೀಡಿದ್ದಾರೆ. ಮಹಾರಾಷ್ಟ್ರ ರಚನೆಯಾಗಿ 65 ವರ್ಷಗಳ ನಂತರವೂ, ಪಕ್ಕದ ಕರ್ನಾಟಕದ ಬೆಳಗಾವಿ ಮತ್ತು ಕಾರವಾರ ಇನ್ನೂ ಪಶ್ಚಿಮ ಮರಾಠಿ ಮಾತನಾಡುವ ರಾಜ್ಯದೊಂದಿಗೆ ವಿಲೀನಗೊಂಡಿಲ್ಲ ಎಂಬುದು ವಿಷಾದದ ಸಂಗತಿ ಎಂದಿದ್ದಾರೆ. ಮಹಾರಾಷ್ಟ್ರವು ಹೋರಾಟದಿಂದ ರೂಪುಗೊಂಡಿತು. ಮಹಾರಾಷ್ಟ್ರವು ತನ್ನ ಅಸ್ತಿತ್ವಕ್ಕೆ 65 ವರ್ಷಗಳನ್ನು ಪೂರೈಸಿದ್ದರೂ, ನಮ್ಮ ಹೃದಯದಲ್ಲಿ ಒಂದು ವಿಷಾದವಿದೆ. ಇಂದಿಗೂ, ಬೆಳಗಾವಿ ಮತ್ತು ಕಾರವಾರದ ಮರಾಠಿ ಮಾನಗಳು ನಮ್ಮೊಂದಿಗೆ ಇಲ್ಲ ಎಂದಿದ್ದಾರೆ.

## ಯುದ್ಧ ಭೀತಿ: ಪಾಕ್ ಆಕ್ರಮಿತ ಕಾಶ್ಮೀರದಲ್ಲಿ 10 ದಿನ ಮದರಸಾ ಬಂದ್

**ಇಸ್ಲಾಮಾಬಾದ್:** ಪಹಲ್ಗಾಮ್ ಪ್ರವಾಸಿಗರ ದಾಳಿಯ ಬಳಿಕ ಯುದ್ಧದ ಭೀತಿಯಲ್ಲಿರುವ ಪಾಕಿಸ್ತಾನವು ಮುಂಜಾಗ್ರತಾ ಕ್ರಮವಾಗಿ ಪಾಕ್ ಆಕ್ರಮಿತ ಕಾಶ್ಮೀರದಲ್ಲಿ 10 ದಿನಗಳ ಕಾಲ ಮದರಸಾ ಮುಚ್ಚುವ ನಿರ್ಧಾರವನ್ನು ಕೈಗೊಂಡಿದೆ.

ಭಾರತವು ಎಲ್ಲಾ ಮದರಸಾಗಳನ್ನು ಗುರಿಯಾಗಿರಿಸಿಕೊಳ್ಳುವ ಭಯವನ್ನು ಪಾಕಿಸ್ತಾನ ಆಕ್ರಮಿತ ಕಾಶ್ಮೀರ ಸರ್ಕಾರವು ತಿಳಿಸಿದೆ. ಅಲ್ಲದೇ ಭಾರತ ಶೀಘ್ರದಲ್ಲೇ ಮಿಲಿಟರಿ ಕ್ರಮ ಕೈಗೊಳ್ಳಲು ಉದ್ದೇಶಿಸಿದೆ ಎಂದು ಗುಪ್ತಚರ ಮಾಹಿತಿ ಇದೆ ಎಂದು ಹೇಳಿದೆ.

ಭಾರತೀಯ ಪಡೆಗಳು ಮದರಸಾಗಳನ್ನು ಗುರಿಯಾಗಿಸಿಕೊಂಡು ಅವುಗಳನ್ನು ಭಯೋತ್ಪಾದಕ ತರಬೇತಿ ಕೇಂದ್ರಗಳೆಂದು ದಾಳಿ ಮಾಡಬಹುದು ಎಂದು ಭದ್ರತಾ ಅಧಿಕಾರಿಗಳು ಭಯಪಡುತ್ತಿದ್ದಾರೆ ಎಂದು ಪಾಕಿಸ್ತಾನ ಆಕ್ರಮಿತ ಕಾಶ್ಮೀರದ ಧಾರ್ಮಿಕ ವ್ಯವಹಾರಗಳ ಇಲಾಖೆಯ ನಿರ್ದೇಶಕ ಹಫೀಜ್ ನಜೀರ್ ಅಹ್ಮದ್ ಏಜೆನ್ಸಿಗಳಿಗೆ ತಿಳಿಸಿದ್ದಾರೆ.

## ಅಪ್ರಾಪ್ತೆ ಮೇಲೆ ಅತ್ಯಾಚಾರ: 6 ಮಂದಿ ಬಂಧನ

**ಬೋಪಾಲ್:** ಎರಡು ದಿನಗಳ ಕಾಲ ನಾಲ್ವರು ತನ್ನ ಮೇಲೆ ಅತ್ಯಾಚಾರ ಎಸಗಿದ್ದಾರೆ. ಬಳಿಕ ಉಪ ಜೈಲರ್ ನನ್ನನ್ನು ಅಪಹರಿಸಿದ್ದು, ಹೋಟೆಲ್ ಕೋಣೆಯೊಳಗೆ ಬಲವಂತವಾಗಿ ಕೂಡಿಹಾಕಿದ್ದಾರೆ ಎಂದು ಮಧ್ಯ ಪ್ರದೇಶದ ಶಹದೋಲ್ ಜಿಲ್ಲೆಯಲ್ಲಿ 17 ವರ್ಷದ ಬಾಲಕಿಯೊಬ್ಬಳು ಆರೋಪಿಸಿದ್ದಾಳೆ.

ಏಪ್ರಿಲ್ 29 ರಂದು ನಾಪತ್ತೆಯಾಗಿದ್ದ ಬಾಲಕಿ ನಂತರ ಶಹದೋಲ್ ಜಿಲ್ಲೆಯ ಪ್ರಮುಖ ಹೋಟೆಲ್‌ನ ಕೋಣೆಯಲ್ಲಿ ಬಂಧಿಯಾಗಿದ್ದಳು. ಪ್ರಕರಣಕ್ಕೆ ಸಂಬಂಧಿಸಿದಂತೆ ಆರು ಮಂದಿಯನ್ನು ಪೊಲೀಸರು ಬಂಧಿಸಿದ್ದು, ಅಪಹರಣ ಮತ್ತು ಅಕ್ರಮ ಬಂಧನಕ್ಕೆ ಸಂಬಂಧಿಸಿದಂತೆ ಉಪ ಜೈಲರ್ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.

## ಬೇಹುಗಾರಿಕೆ ನಡೆಸುತ್ತಿದ್ದ ಪಾಕ್ ಏಜೆಂಟ್ ಸೆರೆ

**ಜೈಸಲ್ಮೇರ್:** ಪಾಕಿಸ್ತಾನದ ಇಂಟರ್ ಸರ್ವೀಸಸ್ ಇಂಟೆಲಿಜೆನ್ಸ್ (ಐಎಸ್ಐ) ಗಾಗಿ ಬೇಹುಗಾರಿಕೆ ನಡೆಸಿದ ಆರೋಪದ ಮೇಲೆ ರಾಜಸ್ಥಾನದ ಗುಪ್ತಚರ ಇಲಾಖೆ ಜೈಸರ್ ನಿವಾಸಿ ಪಠಾಣ್ ಖಾನ್ ಅವರನ್ನು ಬಂಧಿಸಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಅಧಿಕೃತ ಪ್ರಕಟಣೆಯ ಪ್ರಕಾರ, ಆರೋಪಿ ಪಠಾಣ್ ಖಾನ್ 2013 ರಲ್ಲಿ ಪಾಕಿಸ್ತಾನಕ್ಕೆ ಭೇಟಿ ನೀಡಿದ್ದನು ಮತ್ತು ಪಾಕಿಸ್ತಾನದ ಗುಪ್ತಚರ ಏಜೆನ್ಸಿಯ ಅಧಿಕಾರಿಗಳೊಂದಿಗೆ ಸಂಪರ್ಕಕ್ಕೆ ಬಂದನು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅಧಿಕೃತ ರಹಸ್ಯ ಕಾಯ್ದೆ 1923 ರ ಅಡಿಯಲ್ಲಿ ಪಠಾಣ್ ಖಾನ್ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.ಪಾಕಿಸ್ತಾನದಲ್ಲಿ, ಖಾನ್ ಹಣದ ಆಮಿಷಕ್ಕೆ ಒಳಗಾಗಿದ್ದರು ಮತ್ತು ಬೇಹುಗಾರಿಕೆಗಾಗಿ ತರಬೇತಿ ಪಡೆದರು. 2013 ರ ನಂತರವೂ ಅವರು ಅಲ್ಲಿಗೆ ಹೋಗುವ ಮೂಲಕ ಪಾಕಿಸ್ತಾನದ ಗುಪ್ತಚರ ಸಂಸ್ಥೆ ಅಧಿಕಾರಿಗಳನ್ನು ಭೇಟಿಯಾಗುತ್ತಲೇ ಇದ್ದರು ಮತ್ತು ಜೈಸರ್ ಅಂತರರಾಷ್ಟ್ರೀಯ ಗಡಿಗೆ ಸಂಬಂಧಿಸಿದ ಸೂಕ್ಷ್ಮ ಮತ್ತು ಗೌಪ್ಯ ಮಾಹಿತಿಯನ್ನು ಪಾಕಿಸ್ತಾನ ಹ್ಯಾಂಡ್ಲರ್ ಗಳೊಂದಿಗೆ ಹಂಚಿಕೊಳ್ಳುತ್ತಿದ್ದರು ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಏತನ್ಮಧ್ಯೆ, ಪಹಲ್ಗಾಮ್‌ನಲ್ಲಿ ಇತ್ತೀಚೆಗೆ ನಡೆದ ಭಯೋತ್ಪಾದಕ ದಾಳಿಯ ನಂತರ ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ಮಧ್ಯೆ, ರಾಜಸ್ಥಾನದ ಅಂತರರಾಷ್ಟ್ರೀಯ ಗಡಿಯ ಬಳಿ ವಾಸಿಸುವ ಗ್ರಾಮಸ್ಥರು ಎಲ್ಲಾ ಸಾಧ್ಯತೆಗಳನ್ನು ಹುಡುಕುತ್ತಿದ್ದಾರೆ ಮತ್ತು ಅವರು ಒದಗಿಸಲು ಸಿದ್ಧರಿದ್ದಾರೆ ಎಂದು ಹೇಳುತ್ತಾರೆ. ಭಾರತೀಯ ಸೇನೆಗೆ ಎಲ್ಲಾ ರೀತಿಯ ನೆರವು ಒದಗಿಸುವುದು. ರಾಜಸ್ಥಾನದ ಇಂಡೋ-ಪಾಕ್ ಅಂತಾರಾಷ್ಟ್ರೀಯ ಗಡಿಗೆ ಮುಂಚಿತವಾಗಿ ಭಾರತದ ಕಡೆಯ ಕೆಲವು ಹಳ್ಳಿಗಳಲ್ಲಿ, ಸನ್ನದ್ಧತೆ ಮತ್ತು ದೇಶಭಕ್ತಿ ಜೊತೆಜೊತೆಯಾಗಿ ಸಾಗುತ್ತಿವೆ.

## ಬಂಕರ್‌ಗಳ ಮೊರೆ ಹೋದ ಗಡಿಭಾಗದ ನಿವಾಸಿಗಳು

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ಐದು ಜಿಲ್ಲೆಗಳ ನಿಯಂತ್ರಣ ರೇಖೆ (ಎಲ್‌ಸಿ) ಮತ್ತು ಅಂತರರಾಷ್ಟ್ರೀಯ ಗಡಿ ಉದ್ದಕ್ಕೂ ಪಾಕಿಸ್ತಾನ ಪಡೆಗಳು ಅಪ್ರಚೋದಿತ ಗುಂಡಿನ ದಾಳಿ ನಡೆಸಿದ್ದು, ಭಾರತೀಯ ಸೇನೆಯಿಂದ ಪ್ರತೀಕಾರ ತೀರಿಸಿಕೊಂಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪಹಲ್ಗಾಮ್‌ನಲ್ಲಿ ಏಪ್ರಿಲ್ 22ರಂದು ನಡೆದ ಭಯೋತ್ಪಾದಕ ದಾಳಿಯ ನಂತರ ಉದ್ವಿಗ್ನತೆಯ ಮಧ್ಯೆ ನಿಯಂತ್ರಣ ರೇಖೆಯ ಉದ್ದಕ್ಕೂ ಇದು ಸತತ ಎಂಟನೇ ರಾತ್ರಿ ಅಪ್ರಚೋದಿತ ಗುಂಡಿನ ದಾಳಿಯಾಗಿದೆ. ಎಲ್‌ಸಿ ಮತ್ತು ಐಬಿ ಉದ್ದಕ್ಕೂ ವಾಸಿಸುವ ನಾಗರಿಕರು ತಮ್ಮ ಸಮುದಾಯ ಮತ್ತು ವೈಯಕ್ತಿಕ ಬಂಕಗರ್‌ಗಳನ್ನು ಸ್ವಚ್ಛಗೊಳಿಸಲು ಪ್ರಾರಂಭಿಸಿದ್ದಾರೆ. ಮೇ 1-2, 2025 ರ ರಾತ್ರಿ, ಪಾಕಿಸ್ತಾನ ಸೇನಾ ಪೋಸ್ಟ್‌ಗಳು ಜಮ್ಮು ಮತ್ತು ಕಾಶ್ಮೀರದ ಕುಪ್ವಾರಾ, ಬಾರಾಮುಲ್ಲಾ, ಪೂಂಚ್, ನೌಶೇರಾ ಮತ್ತು ಅಖ್ನೂರ್ ಪ್ರದೇಶಗಳ ಎದುರಿನ



**ಅಪ್ರಚೋದಿತ ಗುಂಡಿನ ದಾಳಿ**

ನಿಯಂತ್ರಣ ರೇಖೆಯ ಉದ್ದಕ್ಕೂ ಪೋಸ್ಟ್‌ಗಳಿಂದ ಅಪ್ರಚೋದಿತ ಸಣ್ಣ ಶಸ್ತ್ರಾಸ್ತ್ರ ಗುಂಡಿನ ದಾಳಿ ನಡೆಸಿದವು ಎಂದು ಜಮ್ಮುವಿನ ರಕ್ಷಣಾ ವಕ್ತಾರರು ತಿಳಿಸಿದ್ದಾರೆ.

ಭಾರತೀಯ ಸೇನಾ ಪಡೆಗಳು ಮಾಪನಾಂಕ ಮತ್ತು ಪ್ರಮಾಣಾನುಗುಣ ರೀತಿಯಲ್ಲಿ ಪ್ರತಿಕ್ರಿಯಿಸಿದವು ಎಂದು ವಕ್ತಾರರು ತಿಳಿಸಿದ್ದಾರೆ. ಆರಂಭದಲ್ಲಿ ನಿಯಂತ್ರಣ ರೇಖೆಯ ಉದ್ದಕ್ಕೂ ಹಲವಾರು ಪೋಸ್ಟ್‌ಗಳ ಮೇಲೆ ಅಪ್ರಚೋದಿತ ಸಣ್ಣ ಶಸ್ತ್ರಾಸ್ತ್ರ ಗುಂಡಿನ ದಾಳಿಯೊಂದಿಗೆ ಪ್ರಾರಂಭವಾಯಿತು ಉತ್ತರ ಕಾಶ್ಮೀರದ ಕುಪ್ವಾರಾ ಮತ್ತು ಬಾರಾಮುಲ್ಲಾ ಜಿಲ್ಲೆಗಳಲ್ಲಿನ ನಿಯಂತ್ರಣ ರೇಖೆ, ಪಾಕಿಸ್ತಾನವು ತನ್ನ ಕದನ ವಿರಾಮ ಉಲ್ಲಂಘನೆಯನ್ನು ಪೂಂಚ್ ವಲಯಕ್ಕೆ ಮತ್ತು ನಂತರ ಜಮ್ಮು ಪ್ರದೇಶದ ಅಖೇರ್ ವಲಯಕ್ಕೆ ತ್ವರಿತವಾಗಿ ವಿಸ್ತರಿಸಿತು. ಇದರ ನಂತರ ರಾಜರಿ ಜಿಲ್ಲೆಯ ಸುಂದರ್ಬಾನಿ ಮತ್ತು ನೌಶೇರಾ ಸೆಕ್ಟರ್‌ಗಳಲ್ಲಿ ನಿಯಂತ್ರಣ ರೇಖೆಯ ಉದ್ದಕ್ಕೂ ಹಲವಾರು ಪೋಸ್ಟ್‌ಗಳ ಮೇಲೆ ಸಣ್ಣ ಶಸ್ತ್ರಾಸ್ತ್ರ ಗುಂಡಿನ ದಾಳಿ ನಡೆಯಿತು. ತರುವಾಯ, ಗುಂಡಿನ ದಾಳಿಯು ಜಮ್ಮು ಜಿಲ್ಲೆಯ ಅಂತರರಾಷ್ಟ್ರೀಯ ಯ ಗಡಿಯ ಪರ್ಗ್ವಾಲ್ ವಲಯಕ್ಕೆ ವಿಸ್ತರಿಸಿತು. ಭಾರತ ಮತ್ತು ಪಾಕಿಸ್ತಾನದ ಮಿಲಿಟರಿ ಕಾರ್ಯಾಚರಣೆಗಳ ಮಹಾನಿರ್ದೇಶಕರ ನಡುವಿನ ಇತ್ತೀಚಿನ ಹಾಟ್ಲೈನ್ ಸಂಭಾಷಣೆಯ ಹೊರತಾಗಿಯೂ ನವೀಕರಿಸಿದ ಕದನ ವಿರಾಮ ಉಲ್ಲಂಘನೆಯಾಗಿದೆ.

## ● ಉಕ್ರೇನ್‌ನಲ್ಲಿ 22 ನಿಕ್ಷೇಪಗಳಿರುವುದರಿಂದ ಅಮೆರಿಕಕ್ಕೆ ಖನಿಜ ಸಂಪತ್ತನ್ನು ಪಡೆಯಲು ಸಹಾಯ

# ಅಮೆರಿಕ-ಉಕ್ರೇನ್ ಖನಿಜ ಒಪ್ಪಂದ, ನೈಸರ್ಗಿಕ ಸಂಪನ್ಮೂಲದಲ್ಲಿ 50:50 ಬಳಕೆ

**ಅಮೆರಿಕ:** ಅಂತೂ ಇಂತೂ ಉಕ್ರೇನ್ ಜೊತೆಗೆ ಖನಿಜ ಮತ್ತು ಇಂಧನ ಸಂಪನ್ಮೂಲ ಬಳಕೆಯ ಒಪ್ಪಂದವನ್ನು ಅಮೆರಿಕ ಮಾಡಿಕೊಂಡಿದೆ. ರಷ್ಯಾ ಜೊತೆಗೆ ಮೂರು ವರ್ಷಗಳಿಂದ ಯುದ್ಧದಲ್ಲಿ ಮುಳುಗಿರುವ ಉಕ್ರೇನ್‌ಗೆ ರಕ್ಷಣೆ ಮತ್ತು ಪುನರ್‌ಸ್ಥಾಪನೆಯಲ್ಲಿ ಸಾಥ್ ಕೊಡಲು ಅಮೆರಿಕ ಒಪ್ಪಿದೆ.

ಅದಕ್ಕೆ ಪ್ರತಿಯಾಗಿ ಉಕ್ರೇನ್ ತನ್ನ ನೆಲದಲ್ಲಿರುವ ಖನಿಜ ಮತ್ತು ಇಂಧನ ನಿಕ್ಷೇಪಗಳನ್ನು ಬಳಸಲು ಅಮೆರಿಕಕ್ಕೆ ಬಾಗಿಲು ತೆರೆದಿದೆ. ಅಂದಹಾಗೇ, ರಷ್ಯಾದ ಎದುರು ಹೋರಾಡೋಕೆ ಉಕ್ರೇನ್‌ಗೆ ಅಮೆರಿಕದ ಶಸ್ತ್ರಾಸ್ತ್ರಗಳು ಹಾಗೂ ಹಣಕಾಸು ಸಹಕಾರ ಅತ್ಯಗತ್ಯವಾಗಿದೆ. ಆದ್ರೆ, ನಮ್ಮ ನೆರವು ಬೇಕಿದ್ರೆ ಈಗಾಗ್ಲೇ ಮಾಡಿರೋ ಖರ್ಚು ವೆಚ್ಚವನ್ನು ವಾಪಸ್ ಕೊಡಬೇಕು ಅಂತ ಡೊನಾಲ್ಡ್ ಟ್ರಂಪ್ ಗುಡುಗಿದ್ದರು. ಈಗಾಗ್ಲೇ ಸಂಕಷ್ಟದಲ್ಲಿರುವ ಉಕ್ರೇನ್‌ಗೆ ಬಿಲಿಯನ್ ಗಟ್ಟಲೆ ಡಾಲರ್ ಪಾವತಿಸೋಕೆ ಹೇಗೆ ಸಾಧ್ಯ? ಅದಕ್ಕೆ ಅನಿವಾರ್ಯವಾಗಿ ಈ ಡೀಲ್ ಮಾಡಿಕೊಂಡಿದೆ.

**ಅಮೆರಿಕ-ಉಕ್ರೇನ್ 50:50 ಡೀಲ್:** ಉಕ್ರೇನ್‌ನಲ್ಲಿ ಗ್ರ್ಯಾಫೈಟ್, ಟೈಟಾನಿಯಂ ಮತ್ತು ಲಿಥಿಯಂ ರೀತಿಯ ಮಹತ್ವದ ಖನಿಜ ಸಂಪತ್ತಿನ ಭಾರಿ ಸಂಗ್ರಹವಿದೆ ಎನ್ನಲಾಗುತ್ತಿದೆ. ಈ ಖನಿಜಗಳು ನವೀಕರಿಸಬಹುದಾದ ಇಂಧನ, ಮಿಲಿಟರಿ ತಂತ್ರಜ್ಞಾನ ಹಾಗೂ ಮೂಲಸೌಕರ್ಯ ಕ್ಷೇತ್ರಗಳಲ್ಲಿ ಬಳಸಲಾಗುತ್ತಿದೆ. ಹಾಗಾಗಿಯೇ ಅವುಗಳಿಗೆ ವಿಶ್ವದಾದ್ಯಂತ ಹೆಚ್ಚಿನ ಬೇಡಿಕೆ ಇದೆ. ಅಮೆರಿಕದ ಹಣಕಾಸು ಮತ್ತು ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ಹಾಗೂ ಉಕ್ರೇನ್‌ನ ಉಪ ಪ್ರಧಾನಿ ಯುಲಿಯಾ ಸ್ವಿರಿಡೆಂಕೊ ಅವರು ಮಹತ್ವದ ಖನಿಜ ಒಪ್ಪಂದಕ್ಕೆ ಸಹಿ ಹಾಕಿದ್ದಾರೆ.

ಯುದ್ಧದಲ್ಲಿರುವ ಉಕ್ರೇನ್‌ಗೆ ಈ ಒಡಂಬಡಿಕೆಯ ಮೂಲಕ ಆರ್ಥಿಕ ಚೇತರಿಕೆ ಕಾಣುವ ನಿರೀಕ್ಷೆ ಇದೆ.

- ಅಮೆರಿಕ - ಉಕ್ರೇನ್ ನಡುವಿನ ಖನಿಜ ಒಪ್ಪಂದಕ್ಕೆ ಸಹಿ, ಖನಿಜ ಸಂಪತ್ತನ್ನು ಪಡೆಯಲು ಆದ್ಯತೆಯ ಮೇರೆಗೆ ಅಮೆರಿಕಕ್ಕೆ ಅವಕಾಶ
- ಉಕ್ರೇನ್‌ನ ಪುನರ್‌ನಿರ್ಮಾಣ ಕಾರ್ಯಕ್ಕೆ ನೆರವು ನೀಡಲಿದೆ ಅಮೆರಿಕ
- ಉಕ್ರೇನ್‌ನಲ್ಲಿ 22 ನಿಕ್ಷೇಪಗಳಿರುವುದರಿಂದ ಅಮೆರಿಕಕ್ಕೆ ಖನಿಜ ಸಂಪತ್ತನ್ನು ಪಡೆಯಲು ಸಹಾಯ



**ಹಣಕಾಸು ಸಹಕಾರ ಅತ್ಯಗತ್ಯ**

2022ರ ಫೆಬ್ರವರಿಯಿಂದಲೂ ಅಮೆರಿಕವು ಉಕ್ರೇನ್‌ಗೆ ಹಣಕಾಸು ಮತ್ತು ಶಸ್ತ್ರಾಸ್ತ್ರಗಳ ಸಹಕಾರವನ್ನು ಕೊಡುತ್ತಿದೆ.

ವಾಷಿಂಗ್ಟನ್‌ನಲ್ಲಿ ಖನಿಜ ಒಪ್ಪಂದ ಆಗಿದ್ದು, ಉಕ್ರೇನ್‌ಗೆ ಅಮೆರಿಕದ ಅಭಯ ಹಸ್ತ ಸಿಕ್ಕಂತಾಗಿದೆ. ಉಕ್ರೇನ್‌ನಿಂದ ಖನಿಜಗಳು, ತೈಲ ಹಾಗೂ ಅನಿಲ ನಿಕ್ಷೇಪಗಳ ಗಣಿಗಾರಿಕೆಯಲ್ಲಿ ಹೊರತೆಗೆಯಲಾಗುವ ಸಂಪತ್ತಿನಲ್ಲಿ ಎರಡೂ ದೇಶಗಳಿಗೆ ಸಮನಾಗಿ ಹಂಚಿಕೆಯಾಗುತ್ತದೆ. ಉಕ್ರೇನ್ ಮತ್ತು ಅಮೆರಿಕಕ್ಕೆ ಖನಿಜ ಮತ್ತು ಇಂಧನ ಸಂಪತ್ತಿನಲ್ಲಿ 50-50 ಹಂಚಿಕೆಯಾಗುತ್ತದೆ. ಆದರೆ, ಈ ನೈಸರ್ಗಿಕ ಸಂಪತ್ತಿನ ಒಡೆತನವು ಉಕ್ರೇನ್ ಪಾಲಿಗೆ ಉಳಿಯಲಿದೆ ಅನ್ನೋದು ಈಗಿನ ಡೀಲ್.

ಅಮೆರಿಕ ಈಗ ಉಕ್ರೇನ್‌ಗೆ ಏರ್ ಡಿಫೆನ್ಸ್ ಸಿಸ್ಟಮ್ ಅನ್ನು ಕೊಟ್ಟಿದೆ. ಅಮೆರಿಕದಿಂದ ಮುಂದೆ ಯಾವುದೇ ಸಹಾಯ ಸಿಗ್ಬೇಕಾದ್ರೂ ಉಕ್ರೇನ್ ಖನಿಜ ಒಪ್ಪಂದ ಮಾಡಿಕೊಳ್ಳಬೇಕು ಅಂತ ಡೊನಾಲ್ಡ್ ಟ್ರಂಪ್ ಒತ್ತಡ ಹಾಕಿದ್ರು. ಶ್ವೇತ ಭವನದಲ್ಲಿ ಇಬ್ಬರ ನಡುವೆಯೂ ಗುದ್ದಾಟದ ಬಳಿಕ ಒಂದಷ್ಟು ತೀಕ್ಷ್ಣ ಹೇಳಿಕೆಗಳು ಹೊರಬಿದ್ದಿದ್ದವು. ಆದರೆ,ವ್ಯಾಟಿಕನ್ ಸಿಟಿಯಲ್ಲಿ ಪೋಪ್ ಅವರ ಅಂತ್ಯಕ್ರಿಯೆ ಸಮಯದಲ್ಲಿ ಟ್ರಂಪ್ ಮತ್ತು ಝೆಲೆನ್ಸ್ಕಿ ಹದಿನೈದು ನಿಮಿಷಗಳ ಗೋಪ್ಯ ಚರ್ಚೆ ನಡೆಸಿದ್ದರು. ಆ ಮಾತುಕತೆಯ ಬೆನ್ನಲ್ಲೇ ಖನಿಜ ಒಪ್ಪಂದವು ಅಂತಿಮಗೊಂಡಿದೆ.


ಉಕ್ರೇನ್‌ಗೆ ಅಮೆರಿಕದ ಸಹಕಾರ ಏನೋ ಸಿಕ್ಕಿದೆ. ಆದರೆ, ರಷ್ಯಾ-ಉಕ್ರೇನ್ ನಡುವಿನ ಶಾಂತಿ ಸಂಧಾನ ಮಾತುಕತೆಯು ಅರ್ಧಕ್ಕೆ ನಿಂತಿದೆ.

### ಅಮೆರಿಕಕ್ಕೆ ಅಗತ್ಯ

**ಅಮೆರಿಕದ ಭೂ ವೈಜ್ಞಾನಿಕ ಸಮೀಕ್ಷೆಯಲ್ಲಿ ನಿರ್ಣಾಯಕ ಎಂದು ವರ್ಗೀಕರಿಸಲಾಗಿರುವ 50 ಮೂಲ ವಸ್ತುಗಳಲ್ಲಿ 22 ನಿಕ್ಷೇಪಗಳು ಉಕ್ರೇನ್ ಬಳಿ ಇದೆ. ಇವುಗಳಲ್ಲಿ ಎಲೆಕ್ಟ್ರಾನಿಕ್ಸ್, ಶುದ್ಧ ಇಂಧನ ತಂತ್ರಜ್ಞಾನಗಳು ಮತ್ತು ಶಸ್ತ್ರಾಸ್ತ್ರಗಳ ಉತ್ಪಾದನೆಗೆ ಅವಶ್ಯಕವಾದ ಅಪರೂಪದ ಖನಿಜಗಳೂ ಸೇರಿವೆ. ಆದರೆ, ಉಕ್ರೇನ್ ಮೇಲಿನ ರಷ್ಯಾ ದಾಳಿಯು ಈ ಖನಿಜಗಳನ್ನು ಪಡೆಯಲು ಅಡ್ಡಿಯಾಗಿದೆ. ಏಕೆಂದರೆ, ಶೇ. 40ರಷ್ಟು ಖನಿಜಗಳಿರುವ ಭೂ ಪ್ರದೇಶವನ್ನು ರಷ್ಯಾ ಆಕ್ರಮಿಸಿಕೊಂಡಿದೆ. ಇನ್ನೊಂದೆಡೆ ಅಮೆರಿಕ ಹಾಗೂ ಚೀನಾದ ನಡುವೆ ಜಾಗತಿಕ ಸಮಯ ತಾರಕಕ್ಕೆ ಏರುತ್ತಿದೆ. ಸುಂಕ ಸಮರದ ಮೂಲಕ ಇದು ಇನ್ನಷ್ಟು ಹೆಚ್ಚಾಗಿದೆ. ಸದ್ಯ ಜಾಗತಿಕ ಅಪರೂಪ ಖನಿಜಗಳ ಮಾರುಕಟ್ಟೆಯ ಪೂರೈಕೆಯಲ್ಲಿ ಚೀನಾದ ಪ್ರಾಬಲ್ಯ ಶೇ. 50ರಿಂದ ಶೇ. 75ರಷ್ಟಿದೆ. ಇಂತಹ ಪರಿಸ್ಥಿತಿಯಲ್ಲಿ ಅಮೆರಿಕ್ಕೆ ಉಕ್ರೇನ್‌ನಲ್ಲಿ ಖನಿಜ ನಿಕ್ಷೇಪಗಳನ್ನು ಅಗೆಯುವ ಅವಕಾಶ ಸಿಕ್ಕಿರುವುದು ಜಾಗತಿಕ ಮಟ್ಟದಲ್ಲಿ ತನ್ನ ಪ್ರಾಮುಖ್ಯತೆಯನ್ನ ಹೆಚ್ಚಿಸಿಕೊಳ್ಳಲು ಸಹಾಯಕವಾಗಲಿದೆ.**

# ಉದಯ ವಾಹಿನಿ

www.udayavahini.in
epaper.udayavahini.in
Udaya vahini news
Udaya vahini news
Udayavahini news youtube
udayavahininews@gmail. com




# ಕನ್ನಡಿಗರಲ್ಲಿ ಕ್ಷಮೆಯಾಚಿಸಿ



ಸೋನು ನಿಗಮ್ ವಿವಾದಾತ್ಮಕ ಹೇಳಿಕೆ

ಬೆಂಗಳೂರಿನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಕನ್ನಡ ಕನ್ನಡ ಎಂದಿದ್ದಕ್ಕೆ ಪಹಲ್ಗಾಮ್ ದಾಳಿ ಆಯಿತು ಎಂದ ಸೋನು ನಿಗಮ್ ಹೇಳಿಕೆಗೆ ಕನ್ನಡ ನಿರ್ಮಾಪಕ ಕಾರ್ತಿಕ್ ಗೌಡ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಗಾಯಕ ನೀಡಿರುವ ವಿವಾದಾತ್ಮಕ ಹೇಳಿಕೆಗೆ ಕನ್ನಡಿಗರಲ್ಲಿ ಕ್ಷಮೆಯಾಚಿಸಬೇಕು ಎಂದು ನಿರ್ಮಾಪಕ ಎಕ್ಸ್‌ನಲ್ಲಿ ಬರೆದುಕೊಂಡಿದ್ದಾರೆ. ಭಯೋತ್ಪಾದಕ ಕೃತ್ಯವನ್ನು ಕನ್ನಡ ಹಾಡನ್ನು ಹಾಡಬೇಕೆಂಬ ವಿನಂತಿಗೆ ತಳುಕು ಹಾಕುವುದು ಮೂರ್ಖತನವಲ್ಲದೆ ಬೇರೇನೂ ಅಲ್ಲ. ಅವರ ಹಿಂದಿನ ಎಲ್ಲಾ ಕಾರ್ಯಕ್ರಮಗಳಲ್ಲಿ, ಕನ್ನಡ ಹಾಡುಗಳನ್ನು ಹಾಡಿದ್ದಕ್ಕಾಗಿ ಕನ್ನಡಿಗರು ಇತರರಿಗಿಂತ ಹೆಚ್ಚಿನ ಪ್ರೀತಿಯನ್ನ ತೋರಿಸಿದ್ದಾರೆ. ಈಗ ಮೂರ್ಖ ಹೇಳಿಕೆಯನ್ನು ಅವರು ನೀಡಿದ್ದಾರೆ. ಇದಕ್ಕಾಗಿ ಅವರು ಕನ್ನಡಿಗರಲ್ಲಿ ಕ್ಷಮೆಯಾಚಿಸಬೇಕು ಎಂದು ಕೆಆರ್‌ಜಿ ನಿರ್ಮಾಣ ಸಂಸ್ಥೆಯ ರೂವಾರಿ ನಿರ್ಮಾಪಕ ಕಾರ್ತಿಕ್ ಗೌಡ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನ ಈಸ್ಟ್ ಪಾಯಿಂಟ್ ಕಾಲೇಜಿನ ಕಾರ್ಯಕ್ರಮವೊಂದರಲ್ಲಿ ಸೋನು ನಿಗಮ್ ಭಾಗವಹಿಸಿದ್ದರು. ಈ ವೇಳೆ ವಿದ್ಯಾರ್ಥಿಯೊಬ್ಬ ಕನ್ನಡ ಹಾಡು ಹೇಳುವಂತೆ ಕೇಳಿದನು. ಅದಕ್ಕೆ ಸೋನು ನಿಗಮ್ ತಮ್ಮ ಹಾಡನ್ನು ಅರ್ಧಕ್ಕೆ ನಿಲ್ಲಿಸಿ, ತಮಗೆ ಕನ್ನಡ ಮೇಲಿರುವ ಪ್ರೀತಿ, ಇಲ್ಲಿನ ಜನರ ಮೇಲಿರುವ ಗೌರವದ ಬಗ್ಗೆ ಹೇಳಿಕೊಂಡರು.



# ಸೆಟ್ಟೇರಿತು ಎ ಫಾರ್ ಆನಂದ್

ಅಕ್ಟೋಬರ್ ತಿಂಗಳಾತ್ಯಂಕ್ಕೆ ಶೂಟಿಂಗ್ ಶುರು

'ಎ ಫಾರ್ ಆನಂದ್' ಮುಹೂರ್ತ ಅದ್ಧೂರಿಯಾಗಿ ನೆರವೇರಿದೆ. ಬೆಂಗಳೂರಿನ ಬಂಡೆ ಮಹಾಕಾಳಿ ದೇವಸ್ಥಾನದಲ್ಲಿ ಮುಹೂರ್ತ ಜರುಗಿದೆ. ನಿರ್ಮಾಪಕಿ ಗೀತಾ ಶಿವರಾಜ್‌ಕುಮಾರ್ ಕ್ಲ್ಯಾಪ್ ಮಾಡಿ ಚಿತ್ರತಂಡಕ್ಕೆ ಶುಭಹಾರೈಸಿದ್ದಾರೆ. 'ಎ ಫಾರ್‌ಆನಂದ್' ಮಕ್ಕಳ ಸಿನಿಮಾವಾಗಿರುವುದರಿಂದ ವಿಶೇಷವಾಗಿ ಸುದ್ದಿಗೋಷ್ಠಿ ನಡೆಸಲಾಯಿತು. ಈ ವೇಳೆ ಮಾತನಾಡಿದ ಶಿವಣ್ಣ, ಘೋಸ್ಟ್ ಚಿತ್ರದ ಬಳಿಕ ಶ್ರೀನಿ ಜೊತೆ ಇದು 2ನೇ ಸಿನಿಮಾ. ಮಕ್ಕಳನ್ನು ಯಾವ ರೀತಿ ಓದಿಸಬೇಕು, ಅವರನ್ನು ದಾರಿಗೆ ಹೇಗೆ ತರಬೇಕು ಅನ್ನೋದೇ 'ಎ ಫಾರ್ ಆನಂದ್' ಕಥೆ ತಿರುಳು.

ಸ್ಕ್ರೀನ್ ಪ್ಲೇಯನ್ನು ಶ್ರೀನಿ ತುಂಬಾ ಚೆನ್ನಾಗಿ ಮಾಡಿದ್ದಾರೆ. ಅಕ್ಟೋಬರ್ ತಿಂಗಳಾತ್ಯಂಕ್ಕೆ ಶೂಟಿಂಗ್ ಶುರುವಾಗಲಿದೆ ಎಂದಿದ್ದಾರೆ. ನಿರ್ಮಾಪಕಿ ಗೀತಾ ಶಿವರಾಜ್‌ಕುಮಾರ್, ತುಂಬಾ ದಿನದಿಂದ ಮಕ್ಕಳ ಸಿನಿಮಾ ಮಾಡಬೇಕು ಎಂಬ ಆಸೆ ಇತ್ತು. ಮಕ್ಕಳಿಗೆ ಶಿಕ್ಷಣ ಮುಖ್ಯ. ಆದರೆ ಇಂದು ಅವರಿಗೆ ಸಾಕಷ್ಟು ಒತ್ತಡ ಹೇರಲಾಗುತ್ತಿದೆ. ಒತ್ತಡ ಇಲ್ಲದೇ ಮಕ್ಕಳಿಗೆ ಯಾವ ರೀತಿ ಪಾಠ ಹೇಳಿಕೊಡಬಹುದು ಅನ್ನೋದನ್ನು ಈ ಸಿನಿಮಾ ಮೂಲಕ ಹೇಳುತ್ತೇವೆ. ಈ ಚಿತ್ರಕ್ಕೆ ವಾಸುಕಿ ವೈಭವ್ ಸಂಗೀತ ನಿರ್ದೇಶನ ಮಾಡುತ್ತಾರೆ. ಎ ಫಾರ್ ಆನಂದ್' ಚಿತ್ರದ ಟೈಟಲ್ ತುಂಬಾ ಇಷ್ಟವಾಯ್ತು.



# ಕಾರ್ತಿಕ್ ಆರ್ಯನ್, ಶ್ರೀಲೀಲಾ ಡೇಟಿಂಗ್



ಎಲ್ಲಾರ ಕಣ್ಣು ಶ್ರೀಲೀಲಾ ಮೇಲೆ

ವೇವ್ಸ್ ಸಮ್ಮೇಳನದಲ್ಲಿ ಕಾರ್ತಿಕ್ ಆರ್ಯನ್ ತಾಯಿಯೊಂದಿಗೆ ಶ್ರೀಲೀಲಾ ಕಾಣಿಸಿಕೊಂಡಿರುವ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗ್ತಿದೆ. ಕಾರ್ತಿಕ್ ಜೊತೆಗಿನ ನಟಿಯ ಡೇಟಿಂಗ್ ಸುದ್ದಿ ಮತ್ತೆ ಚರ್ಚೆಗೆ ಗ್ರಾಸವಾಗಿದೆ. ನಿನ್ನೆ (ಮೇ.1) ಶ್ರೀಲೀಲಾ ವೇವ್ಸ್ ಸಮ್ಮೇಳನದಲ್ಲಿ ಭಾಗಿಯಾಗಿದ್ದರು. ಈ ವೇಳೆ, ಕಾರ್ತಿಕ್ ಆರ್ಯನ್ ತಾಯಿಯೊಂದಿಗೆ ನಟಿ ಮಾತನಾಡುತ್ತಿರುವ ವಿಡಿಯೋ ನೆಟ್ಟಿಗರ ಗಮನ ಸೆಳೆದಿದೆ. ಈ ಹಿಂದೆ ನಟನ ತಾಯಿ, 'ನಮ್ಮನೆಗೆ ಡಾಕ್ಟರ್ ಸೊಸೆ ಬೇಕು' ಎಂದಿದ್ದ ಹೇಳಿಕೆ ಮತ್ತೆ ಮುನ್ನೆಲೆಗೆ ಬಂದಿದೆ. ಇತ್ತೀಚೆಗೆ ಅವಾರ್ಡ್ ಫಂಕ್ಷನ್‌ವೊಂದರಲ್ಲಿ ಕಾರ್ತಿಕ್ ಆರ್ಯನ್ ತಾಯಿಗೆ ಯಾವ ಥರದ ಸೊಸೆ ಬೇಕು ಎಂದು ಕರಣ್ ಜೋಹರ್ ಕೇಳಿದರು. ಅದಕ್ಕೆ ನಟನ ತಾಯಿ, ಡಾಕ್ಟರ್ ಆಗಿರುವ ಸೊಸೆ ಬೇಕು ಎಂದಿದ್ದರು. ಎಲ್ಲಾರಿಗೂ ಗೊತ್ತಿರುವಂತೆ ಶ್ರೀಲೀಲಾ ಅವರು ಎಂಬಿಬಿಎಸ್ ಓದಿಕೊಂಡಿದ್ದಾರೆ. ಅಲ್ಲಿ ಕಾರ್ತಿಕ್ ತಾಯಿ ಡಾಕ್ಟರ್ ಸೊಸೆ ಬೇಕು ಎಂದ ಕೂಡಲೇ ಎಲ್ಲಾರ ಕಣ್ಣು ಶ್ರೀಲೀಲಾ ಮೇಲೆ ಬಿದ್ದಿತ್ತು. ಅಂದಿನ ಆ ಹೇಳಿಕೆ ನಂತರ ಇದೀಗ ಕಾರ್ತಿಕ್ ಆರ್ಯನ್ ತಾಯಿ ಮತ್ತು ಶ್ರೀಲೀಲಾ ಒಟ್ಟಿಗೆ ಕಾಣಿಸಿಕೊಂಡಿರೋದು ಗಾಸಿಪ್ ಪ್ರಿಯರ ಬಾಯಿಗೆ ಆಹಾರವಾಗಿದೆ. ಅಂದಹಾಗೆ, ಅನುರಾಗ್ ಬಸು ನಿರ್ದೇಶನದ 'ಆಶಿಕಿ 3' ಸಿನಿಮಾದಲ್ಲಿ ಕಾರ್ತಿಕ್ ಆರ್ಯನ್‌ಗೆ ಶ್ರೀಲೀಲಾ ನಾಯಕಿಯಾಗಿದ್ದಾರೆ. 2025ರ ದೀಪಾವಳಿಯಂದು ಈ ಸಿನಿಮಾ ರಿಲೀಸ್ ಆಗಲಿದೆ.

# 'ಕಾಲನಾಗಿಣಿ' ಚಿತ್ರದ ಪೋಸ್ಟರ್ ರಿಲೀಸ್

ಸ್ಯಾಂಡಲ್‌ವುಡ್ ಚಿಟ್ಟೆ ಹರ್ಷಿಕಾ ಪೂಣಚ್ಚ ಕಾಲನಾಗಿಣಿಯಾಗಿ ಮಿಂಚಲು ರೆಡಿಯಾಗಿದ್ದಾರೆ. ಇದೀಗ ಹರ್ಷಿಕಾ ಪಾತ್ರದ ಪೋಸ್ಟರ್ ಅನ್ನು ಅಶ್ವಿನಿ ಪುನೀತ್ ರಾಜ್‌ಕುಮಾರ್ ರಿಲೀಸ್ ಮಾಡಿ ಚಿತ್ರತಂಡಕ್ಕೆ ಶುಭಹಾರೈಸಿದ್ದಾರೆ. ಮೇ 1ರಂದು ಹರ್ಷಿಕಾ ಪೂಣಚ್ಚ ಹುಟ್ಟುಹಬ್ಬದ ಹಿನ್ನೆಲೆ 'ಕಾಲನಾಗಿಣಿ' ಸಿನಿಮಾದ ಫಸ್ಟ್ ಲುಕ್ ಪೋಸ್ಟರ್ ಅನ್ನು ಅಶ್ವಿನಿ ಪುನೀತ್ ರಾಜ್‌ಕುಮಾರ್ ರಿಲೀಸ್ ಮಾಡಿ ಚಿತ್ರತಂಡಕ್ಕೆ ಬೆಂಬಲಿಸಿದ್ದಾರೆ. 'ಕಾಲನಾಗಿಣಿ' ಸಿನಿಮಾದಲ್ಲಿ ನಾಗಿಣಿ ಮತ್ತು ರಾಣಿ ಎರಡು ರೀತಿಯ ಶೇಡ್‌ನಲ್ಲಿ ಹರ್ಷಿಕಾ ನಟಿಸಲಿದ್ದಾರೆ. ಈ ಸಿನಿಮಾಗೆ ವಿಶ್ರುತ್ ನಾಯಕ್ ಆಯಕ್ಷನ್ ಕಟ್ ಹೇಳ್ತಿದ್ದಾರೆ. ಮಧುರಾ ಮೂವೀಸ್ ಬ್ಯಾನರ್ ಅಡಿ ಈ ಚಿತ್ರ ನಿರ್ಮಾಣ ಆಗ್ತಿದೆ. ಹರ್ಷಿಕಾ ಜೊತೆ ಅರ್ಜುನ್ ವೇದಾಂತ್, ಅವಿನಾಶ್, ಶರತ್ ಲೋಹಿತಾಶ್ವ, ಉಗ್ರಂ ಮಂಜು, ವಿಜಯ್ ಚೆಂಡೂರ್ ಸೇರಿದಂತೆ ಅನೇಕರು ನಟಿಸುತ್ತಿದ್ದಾರೆ. ಈಗಾಗಲೇ ಚಿತ್ರೀಕರಣ ಶುರುವಾಗಿದ್ದು, ಮುಂದಿನ ದಿನಗಳಲ್ಲಿ ಚಿತ್ರದ ಬಗ್ಗೆ ಹೆಚ್ಚಿನ ಅಪ್‌ಡೇಟ್ ಸಿಗಲಿದೆ.

# ಸಿಂಗಾಪುರದಲ್ಲಿ ಮೇಘಾ ಶೆಟ್ಟಿ



ಸ್ಟೈಲಿಶ್ ಲುಕ್‌ನಲ್ಲಿ ನಟಿ

'ಜೊತೆ ಜೊತೆಯಲಿ' ನಟಿ ಮೇಘಾ ಶೆಟ್ಟಿ ಅವರುಸಿಂಗಾಪುರ ಪ್ರವಾಸದಲ್ಲಿದ್ದಾರೆ. ಸಿನಿಮಾ ಕೆಲಸಕ್ಕೆ ಬ್ರೇಕ್ ಸಿಕ್ಕ ಬೆನ್ನಲ್ಲೇ ವಿದೇಶಕ್ಕೆ ಹಾರಿದ್ದಾರೆ. ಪ್ರವಾಸದಲ್ಲಿನ ಸ್ಟೈಲಿಶ್ ಫೋಟೋಗಳನ್ನು ನಟಿ ಹಂಚಿಕೊಂಡಿದ್ದಾರೆ. ಕಣ್ಣಿಗೆ ಕೂಲಿಂಗ್ ಗ್ಲಾಸ್ ಹಾಕಿಕೊಂಡು ಸ್ಟೈಲಿಶ್ ಆಗಿ ಡ್ರೆಸ್ ಧರಿಸಿ ಸಿಂಗಾಪುರದಲ್ಲಿ ಮೇಘಾ ಎಂಜಾಯ್ ಮಾಡ್ತಿದ್ದಾರೆ. ವಿವಿಧ ಭಂಗಿಗಳಲ್ಲಿ ನಟಿ ಮಸ್ತ್ ಆಗಿ ಪೋಸ್ ನೀಡಿದ್ದಾರೆ. ನಟಿಯ ಸುಂದರ ಫೋಟೋಗಳನ್ನು ನೋಡಿ ಹಾಟ್, ಬೋಲ್ಡ್, ಬ್ಯೂಟಿ ಎಂದೆಲ್ಲಾ ನೆಟ್ಟಿಗರು ಕಾಮೆಂಟ್ ಮಾಡಿದ್ದಾರೆ. 'ಜೊತೆ ಜೊತೆಯಲಿ' ಸೀರಿಯಲ್ ಹಿಟ್ ಆದ್ಮೇಲೆ ಕೈವ, ತ್ರಿಬಲ್ ರೈಡಿಂಗ್, ದಿಲ್ ಪಸಂದ್ ಸೇರಿದಂತೆ ಹಲವು ಚಿತ್ರಗಳಲ್ಲಿ ನಟಿಸಿದ್ರು. ಆದರೆ ಅವರಿಗೆ ಸ್ಯಾಂಡಲ್‌ವುಡ್‌ನಲ್ಲಿ ಗೆಲುವು ದಕ್ಕಲಿಲ್ಲ. ಹಾಗಂತ ಅವರಿಗೆ ಅವಕಾಶಗಳ ಕೊರತೆಯೂ ಇಲ್ಲ. ಸದ್ಯ ಕಾಲಿವುಡ್‌ನತ್ತ ಮುಖ ಮಾಡಿದ್ದಾರೆ. ತಮಿಳಿನ ಸಿನಿಮಾವೊಂದರಲ್ಲಿ ಒಂದೊಳ್ಳೆಯ ಪಾತ್ರ ಸಿಕ್ಕಿದೆ. ಸಿಕ್ಕ ಅವಕಾಶವನ್ನು ಉಪಯೋಗಿಸಿಕೊಂಡು ನಟಿ ಮುನ್ನಡೆಯುತ್ತಿದ್ದಾರೆ. ಅದಷ್ಟೇ ಅಲ್ಲ, 'ಬಿಗ್ ಬಾಸ್' ಖ್ಯಾತಿ ತ್ರಿವಿಕ್ರಮ್ ನಟನೆಯ 'ಮುದ್ದು ಸೊಸೆ' ಸೀರಿಯಲ್ ಅನ್ನು ಸಹೋದರಿ ಜೊತೆ ಸೇರಿ ಮೇಘಾ ಶೆಟ್ಟಿ ನಿರ್ಮಾಣಕ್ಕೆ ಸಾಥ್ ನೀಡಿದ್ದಾರೆ. ಸೀರಿಯಲ್ ಶುರುವಿನಲ್ಲಿ ಪಾತ್ರಗಳ ನಿರೂಪಣೆಯನ್ನು ಮೇಘಾ ಶೆಟ್ಟಿ ಮಾಡಿದ್ದರು. ಇದೀಗ ಈ ಸೀರಿಯಲ್ ಉತ್ತಮ ಟಿಆರ್‌ಪಿ ಪಡೆಯುತ್ತಿದೆ. ಪ್ರೇಕ್ಷಕರು ಇದನ್ನು ಮೆಚ್ಚಿಕೊಂಡಿದ್ದಾರೆ. ಚೀತಾ, ಗ್ರಾಮಾಯಣ, ಆಫ್ಟರ್ ಆಪರೇಷನ್ ಲಂಡನ್ ಕೆಫೆ ಸೇರಿದಂತೆ ಹಲವು ಚಿತ್ರಗಳು ಮೇಘಾ ಕೈಯಲ್ಲಿವೆ.



# ಪಾಕ್ ಕ್ರಿಕೆಟಿಗರ ಇನ್‌ಸ್ಟಾ ಖಾತೆ ಬ್ಯಾನ್

ಬರುತ್ತಿದ್ದ ಆದಾಯಕ್ಕೆ ಕೊಡಲಿ ಪೆಟ್ಟು

ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತ ಸರ್ಕಾರವು, ಪಾಕಿಸ್ತಾನದ ವಿರುದ್ಧ ಉಗ್ರ ಕ್ರಮಗಳನ್ನು ಕೈಗೊಳ್ಳುತ್ತಿದೆ. ಇದರಲ್ಲಿ ಪ್ರಮುಖವಾದದ್ದು, ಪಾಕಿಸ್ತಾನದ ಪ್ರಮುಖ ವ್ಯಕ್ತಿಗಳ ಹಾಗೂ ಪಾಕಿಸ್ತಾನ ಕ್ರಿಕೆಟ್ ತಂಡದ ಸ್ಟಾರ್ ಆಟಗಾರರ ಸೋಶಿಯಲ್ ಮೀಡಿಯಾ ಖಾತೆಯನ್ನು ಭಾರತದಲ್ಲಿ ಬ್ಯಾನ್ ಮಾಡಲಾಗಿದೆ. ಮೊದಲು ಪಾಕ್ ತಂಡದ ಸ್ಟಾರ್ ಆಟಗಾರರ ಯೂಟ್ಯೂಬ್ ಚಾನೆಲ್‌ಗಳನ್ನು ಭಾರತದಲ್ಲಿ ನಿಷೇಧಿಸಲಾಗಿತ್ತು. ಈಗ ತಂಡದ ಅನೇಕ ಪ್ರಸಿದ್ಧ ಆಟಗಾರರ ಇನ್‌ಸ್ಟಾಗ್ರಾಮ್ ಖಾತೆಗಳನ್ನು ಸಹ ಭಾರತದಲ್ಲಿ ಬ್ಯಾನ್ ಮಾಡಲಾಗಿದೆ. ಈ ಬ್ಯಾನ್ ಶಿಕ್ಷೆಗೆ ಒಳಗಾದ ಆಟಗಾರರೆಂದರೆ, ಪಾಕಿಸ್ತಾನ ನಾಯಕ ಮೊಹಮ್ಮದ್ ರಿಜ್ವಾನ್, ಬಾಬರ್ ಆಝಂ ಮತ್ತು ಶಾಹೀನ್ ಅಫ್ರಿದಿ ಅವರ ಇನ್‌ಸ್ಟಾಗ್ರಾಮ್ ಖಾತೆಗಳನ್ನು ಭಾರತದಲ್ಲಿ ನಿಷೇಧಿಸಲಾಗಿದೆ.


**ಪಹಲ್ಗಾಮ್‌ನಲ್ಲಿ ಭಯೋತ್ಪಾದಕ ದಾಳಿ:** ಈ ಭಯೋತ್ಪಾದಕ ದಾಳಿಯನ್ನು ಪಾಕಿಸ್ತಾನದಲ್ಲಿ ನೆಲೆ ಹೊಂದಿರುವ ಲಷ್ಕರ್-ಎ-ತೊಯ್ಬಾದ ಸಹಾಯದಿಂದ ನಡೆಸಲಾಗಿದೆ ಎಂಬುದು ತನಿಖೆಯಿಂದ ಹೊರಬಂದಿದೆ. ಅಚ್ಚರಿಯ ವಿಷಯವೆಂದರೆ ಈ ಭಯೋತ್ಪಾದಕ ದಾಳಿಯ ನಂತರ, ಶಾಹೀನ್ ಅಫ್ರಿದಿ, ಜುನೈದ್ ಖಾನ್ ಅವರಂತಹ ಆಟಗಾರರು ಭಾರತವನ್ನು ಗೇಲಿ ಮಾಡಿದ್ದರು.

ಇದಾದ ನಂತರ, ಭಾರತ ಸರ್ಕಾರ ಪಾಕಿಸ್ತಾನಿ ಕ್ರಿಕೆಟಿಗರ ಸಾಮಾಜಿಕ ಮಾಧ್ಯಮ ಖಾತೆಗಳನ್ನು ನಿಷೇಧಿಸಲು ಪ್ರಾರಂಭಿಸಿತ್ತು. ಆ ಪ್ರಕಾರ, ಪಾಕ್ ತಂಡದ ಮಾಜಿ ಸ್ಟಾರ್ ಆಟಗಾರರಾದ ಶೋಯೆಬ್ ಅಖ್ತರ್, ಬಸಿತ್ ಅಲಿ ಅವರ ಯೂಟ್ಯೂಬ್ ಖಾತೆಗಳು, ಪಾಕಿಸ್ತಾನಿ ಸುದ್ದಿ ವಾಹಿನಿಗಳು ಮತ್ತು ಪಾಕಿಸ್ತಾನಿ ಕ್ರೀಡಾ ಯೂಟ್ಯೂಬ್ ಚಾನೆಲ್‌ಗಳನ್ನು ಸಹ ನಿಷೇಧಿಸಲಾಗಿತ್ತು. ಭಾರತ ಸರ್ಕಾರದ ಈ ಕ್ರಮದ ನಂತರ ಪಾಕಿಸ್ತಾನಿ ನಟರು ಮತ್ತು ಕ್ರಿಕೆಟಿಗರಿಗೆ ಸೋಶಿಯಲ್ ಮೀಡಿಯಾದಿಂದ ಬರುತ್ತಿದ್ದ ಆದಾಯಕ್ಕೆ ಕೊಡಲಿ ಪೆಟ್ಟು ಬಿದ್ದಿದೆ. ಏಕೆಂದರೆ ಇವರಿಗೆ ಭಾರತದಿಂದ ಸಾಕಷ್ಟು ವೀಕ್ಷಣೆಗಳು ಸಿಗುತ್ತಿದ್ದವು.

**ರಿಜ್ವಾನ್ ವಿಚಿತ್ರ ಹೇಳಿಕೆ:** ಭಾರತ ತೆಗೆದುಕೊಂಡ ಈ ಕ್ರಮದ ಬಗ್ಗೆ ಪಾಕ್ ತಂಡದ ನಾಯಕ ಮೊಹಮ್ಮದ್ ರಿಜ್ವಾನ್ ಬಹಳ ವಿಚಿತ್ರವಾದ ಹೇಳಿಕೆಯನ್ನು ನೀಡಿದ್ದು, 'ಭಾರತ ಏನು ಮಾಡುತ್ತಿದೆ ಮತ್ತು ಏಕೆ ಮಾಡುತ್ತಿದೆ ಎಂದು ನನಗೆ ತಿಳಿದಿಲ್ಲ. ಏಕೆಂದರೆ ನಾನು ನನ್ನ ಮೊಬೈಲ್ ಫೋನ್ ನೋಡಿಲ್ಲ. ಕ್ರಿಕೆಟ್ ಅನ್ನು ಯಾವಾಗಲೂ ರಾಜಕೀಯದಿಂದ ದೂರವಿಡಬೇಕು. ವಿರಾಟ್ ಕೊಹ್ಲಿಯಂತಹ ಆಟಗಾರರು ತಮ್ಮನ್ನು ಭೇಟಿಯಾದಾಗ ಪ್ರೀತಿ ಮತ್ತು ವಾತ್ಸಲ್ಯದ ಬಗ್ಗೆ ಮಾತನಾಡುತ್ತಾರೆ ಎಂದು ಹೇಳುವ ಮೂಲಕ ಭಯೋತ್ಪಾದಕ ದಾಳಿಯ ಬಗ್ಗೆ ಏನು ಗೊತ್ತಿಲ್ಲ ಎಂಬುದನ್ನು ಹೇಳುವುದಕ್ಕೆ ಮುಂದಾಗಿದ್ದಾರೆ.

# ಹೈದ್ರಾಬಾದ್ ಪ್ಲೇಆಫ್ ಕನಸು ಭಗ್ನ..

● ಬೃಹತ್ ಟಾರ್ಗೆಟ್ ನೀಡಿದ್ದ ಗಿಲ್ ಪಡೆಗೆ ಗೆಲುವು ● ಅರ್ಧಶತಕ ಸಿಡಿಸಿದ ಗಿಲ್, ಬಟ್ಲರ್



ನಾಯಕ ಶುಭ್‌ಮನ್ ಗಿಲ್ ಹಾಗೂ ಜೋಶ್ ಬಟ್ಲರ್ ಅವರ ಅಮೋಘವಾದ ಅರ್ಧಶತಕದಿಂದ ಗುಜರಾತ್ ಟೈಟನ್ಸ್ ಭರ್ಜರಿ ಗೆಲುವು ಸಾಧಿಸಿದೆ. ಈ ಸೋಲಿನ ಮೂಲಕ ಹೈದ್ರಾಬಾದ್ ತಂಡ ಪ್ಲೇ ಆಫ್ ಕನಸನ್ನು ಕೈಬಿಟ್ಟಂತೆ ಆಗಿದೆ.

ಮೋದಿ ಸ್ಟೇಡಿಯಂನಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಗೆದ್ದ ಹೈದ್ರಾಬಾದ್ ನಾಯಕ ಪ್ಯಾಟ್ ಕಮಿನ್ಸ್, ಫೀಲ್ಡಿಂಗ್ ಆಯ್ಕೆಮಾಡಿಕೊಂಡರು. ಇದರಿಂದ ಗುಜರಾತ್ ಟೈಟನ್ಸ್ ಮೊದಲ ಬ್ಯಾಟಿಂಗ್ ಮಾಡುವ ಅವಕಾಶ ಪಡೆಯಿತು. ಟೈಟನ್ಸ್ ಪರವಾಗಿ ಓಪನರ್ಸ್ ಆಗಿ ಬ್ಯಾಟಿಂಗ್‌ಗೆ ಬಂದ ಕ್ಯಾಪ್ಟನ್ ಶುಭ್‌ಮನ್ ಗಿಲ್, ಸಾಯಿ ಸುದರ್ಶನ್ ಭರ್ಜರಿ ಆರಂಭ ಪಡೆದರು. ಪಂದ್ಯದಲ್ಲಿ 23 ಬಾಲ್‌ಗಳನ್ನು ಎದುರಿಸಿದ ಸುದರ್ಶನ್ ಕೇವಲ 9 ಬೌಂಡರಿಗಳಿಂದ 48 ರನ್ ಗಳಿಸಿ ಕೀಪರ್‌ಗೆ ಕ್ಯಾಚ್ ಕೊಟ್ಟರು. ಹೈದ್ರಾಬಾದ್ ಬೌಲರ್‌ಗಳನ್ನ ಬೆಂಡೆತ್ತಿದ ಗಿಲ್, ಕೇವಲ 26 ಬಾಲ್‌ಗಳಲ್ಲಿ 6 ಬೌಂಡರಿ ಜೊತೆಗೆ 2 ಬಿಗ್ ಸಿಕ್ಸರ್‌ಗಳಿಂದ ಹಾಫ್‌ಸೆಂಚುರಿ ಬಾರಿಸಿದರು. ಪಂದ್ಯದಲ್ಲಿ ಒಟ್ಟು 38 ಎಸೆತ ಎದುರಿಸಿದ ಗಿಲ್ 10 ಫೋರ್, 2 ಸಿಕ್ಸರ್‌ನಿಂದ 76 ರನ್ ಗಳಿಸಿ ರನೌಟ್ ಆದರು.

ಸುದರ್ಶನ್ ಬಳಿಕ ಕ್ರೀಸ್‌ಗೆ ಬಂದಿದ್ದ ಜೋಶ್ ಬಟ್ಲರ್ ಅಮೋಘ ಬ್ಯಾಟಿಂಗ್‌ನಿಂದ 3 ಫೋರ್, 4 ಸಿಕ್ಸರ್‌ನಿಂದ 37 ಎಸೆತದಲ್ಲಿ 64 ರನ್ ಚಚ್ಚಿದರು. ವಾಷಿಂಗ್ಟನ್ ಸುಂದರ್ ಕೂಡ 21 ರನ್‌ಗಳ ಕಾಣಿಕೆ ನೀಡಿದರು. ಇದರಿಂದ ಗುಜರಾತ್ 20 ಓವರ್‌ನಲ್ಲಿ 6 ವಿಕೆಟ್‌ಗೆ 225 ರನ್‌ಗಳ ಬೃಹತ್ ಟಾರ್ಗೆಟ್ ನೀಡಿತ್ತು. ಈ ಗುರಿ ಹಿಂದೆ ಬಿದ್ದ ಹೈದ್ರಾಬಾದ್ ಆರಂಭದಲ್ಲಿ ಭಾರೀ ನಷ್ಟ ಅನುಭವಿಸಿತು.ಅಭಿಷೇಕ್ ಬೆನ್ನಲ್ಲೇ ಹೆನ್ರಿಚ್ ಕ್ಲಾಸೆನ್ ಕೂಡ 23 ರನ್‌ಗೆ ಆಟ ಮುಗಿಸಿದರು. ಅನಿಕೇತ್ ವರ್ಮಾ 3, ಕಮಿಂದ್ ಮೆಂಡೀಸ್ ಡಕೌಟ್ ಆಗಿ ಬಂದ ದಾರಿಗೆ ಸುಂಕವಿಲ್ಲ ಎಂಬಂತೆ ಪೆವಿಲಿಯನ್‌ಗೆ ಹೆಜ್ಜೆ ಹಾಕಿದರು. ಕೊನೆಯಲ್ಲಿ ಕ್ಯಾಪ್ಟನ್ ಕಮಿನ್ಸ್ ಹಾಗೂ ನಿತೀಶ್ ಕುಮಾರ್ ರನ್‌ಗೆ ಪರದಾಡಿದರು. ಹೀಗಾಗಿ ಹೈದ್ರಾಬಾದ್ 20 ಓವರ್‌ನಲ್ಲಿ 6 ವಿಕೆಟ್‌ಗೆ 186 ರನ್ ಮಾತ್ರ ಗಳಿಸಿ, 38 ರನ್‌ಗಳಿಂದ ಸೋಲೊಪ್ಪಿಕೊಂಡಿತು.

ಸದ್ಯ 10 ಪಂದ್ಯಗಳನ್ನು ಆಡಿರುವ ಎಸ್‌ಆರ್‌ಹೆಚ್ ಈಗಾಗಲೇ 7 ಪಂದ್ಯಗಳಲ್ಲಿ ಹೀನಾಯವಾಗಿ ಸೋತು 6 ಅಂಕ ಮಾತ್ರ ಗಳಿಸಿದೆ.



## ಸಮಯ ಮುಗಿದ ನಂತರ ಡಿಆರ್‌ಎಸ್ ತೆಗೆದುಕೊಂಡ ರೋಹಿತ್ ಶರ್ಮಾ ವಿವಾದ

ಯಾರ ತಪ್ಪು ಯಾರದು ಸರಿ

ಮುಂಬೈ ಇಂಡಿಯನ್ಸ್ ಮತ್ತು ರಾಜಸ್ಥಾನ ರಾಯಲ್ಸ್ ನಡುವಿನ ಐಪಿಎಲ್ 2025ರ ಪಂದ್ಯದಲ್ಲಿ ರೋಹಿತ್ ಶರ್ಮಾ ಡಿಆರ್‌ಎಸ್ ತೆಗೆದುಕೊಂಡ ರೀತಿ ವಿವಾದಕ್ಕೆ ಕಾರಣವಾಗಿದೆ. ಪಂದ್ಯದ ವೇಳೆ ಅಂಪೈರ್ ರೋಹಿತ್‌ಗೆ ಔಟ್ ನೀಡಿದರು. ರೋಹಿತ್ ಡಿಆರ್‌ಎಸ್ ತೆಗೆದುಕೊಳ್ಳಲು ಸ್ವಲ್ಪ ಸಮಯ ತೆಗೆದುಕೊಂಡರು. ಸಾಮಾಜಿಕ ಜಾಲತಾಣಗಳಲ್ಲಿ ಹೇಳುವಂತೆ ರೋಹಿತ್ ಅವರು 15 ಸೆಕೆಂಡುಗಳ ನಂತರ ಡಿಆರ್‌ಎಸ್ ತೆಗೆದುಕೊಂಡರು. ಈ ಬಗ್ಗೆ ಭಾರಿ ಚರ್ಚೆ ನಡೆಯುತ್ತಿದೆ.

ರೋಹಿತ್ ರಿವ್ಯೂ ತೆಗೆದುಕೊಂಡ ನಂತರ, ಥರ್ಡ್ ಅಂಪೈರ್ ಚೆಂಡು ಲೆಗ್ ಸ್ಟಂಪ್‌ನ ಹೊರಗೆ ಬಿದ್ದಿರುವುದನ್ನು ಕಂಡುಕೊಂಡರು. ಅದಕ್ಕಾಗಿಯೇ ರೋಹಿತ್ ಔಟಾಗಲಿಲ್ಲ. ಇದಾದ ನಂತರ, ರೋಹಿತ್ ಉತ್ತಮವಾಗಿ ಬ್ಯಾಟಿಂಗ್ ಮಾಡಿ ಅರ್ಧಶತಕ ಗಳಿಸಿದರು. ಅವರು ರಿಕ್ಟನ್ ಜೊತೆ 116 ರನ್‌ಗಳ ಜೊತೆಯಾಟ ಆಡಿದರು. ಈ ಪಂದ್ಯದಲ್ಲಿ ರೋಹಿತ್ ಮುಂಬೈ ಇಂಡಿಯನ್ಸ್ ಪರ 6000 ರನ್ ಗಳಿಸಿದರು. ಇದಕ್ಕೂ ಮೊದಲು ರಾಜಸ್ಥಾನ್ ರಾಯಲ್ಸ್ ತಂಡದ ವೇಗಿ ಫಜಲ್ಹಕ್ ಫಾರೂಕಿ ರೋಹಿತ್ ಶರ್ಮಾ ಅವರನ್ನು ಎಲ್ಬಿಡಬ್ಲ್ಯೂ ಔಟ್ ಮಾಡಿದ್ದರು. ಅಂಪೈರ್ ಔಟ್ ಕೂಡ ನೀಡಿದರು. ಈ ಸಂದರ್ಭ ರೋಹಿತ್ ಡಿಆರ್‌ಎಸ್ ತೆಗೆದುಕೊಳ್ಳಲು ಸ್ವಲ್ಪ ಗೊಂದಲಕ್ಕೊಳಗಾಗಿದ್ದರು. 15 ಸೆಕೆಂಡುಗಳ ಸಮಯ ಮುಗಿಯುವುದರಲ್ಲಿತ್ತು. ರೋಹಿತ್ ಡಿಆರ್‌ಎಸ್ ತೆಗೆದುಕೊಳ್ಳುವುದಿಲ್ಲ ಎಂದು ತೋರುತ್ತಿತ್ತು. ಆದರೆ, ಟೈಮರ್ ಶೂನ್ಯ ತಲುಪಿದ ತಕ್ಷಣ, ಅವರು ಡಿಆರ್‌ಎಸ್‌ಗೆ ಸಿಗ್ನಲ್ ಮಾಡಿದರು. ಸಮಯ ಮುಗಿದ ನಂತರ ಅವರು ಡಿಆರ್‌ಎಸ್ ತೆಗೆದುಕೊಂಡರು ಎಂದು ಕೆಲವರು ಹೇಳುತ್ತಿದ್ದಾರೆ. ನಂತರ ಥರ್ಡ್ ಅಂಪೈರ್ ಚೆಂಡು ಲೆಗ್ ಸ್ಟಂಪ್‌ನ ಹೊರಗೆ ಬಿದ್ದಿರುವುದನ್ನು ನೋಡಿ ಅಂಪೈರ್ ನಿರ್ಧಾರ ಬದಲಾಯಿಸಿ ಎಂದು ಹೇಳಿದರು. 15 ಸೆಕೆಂಡುಗಳ ನಂತರ ರೋಹಿತ್ ಡಿಆರ್‌ಎಸ್‌ಗಾಗಿ ಸಿಗ್ನಲ್ ಮಾಡಿದ್ದಾರೆ ಎಂದು ಹಲವರು ಸಾಮಾಜಿಕ ಜಾಲತಾಣಗಳಲ್ಲಿ ಹೇಳುತ್ತಿದ್ದಾರೆ. ಡಿಆರ್‌ಎಸ್ ನಿಯಮಗಳ ಪ್ರಕಾರ, ಆಟಗಾರರು 15 ಸೆಕೆಂಡುಗಳ ಒಳಗೆ ಡಿಆರ್‌ಎಸ್ ನಿರ್ಧಾರವನ್ನು ತೆಗೆದುಕೊಳ್ಳಬೇಕು. ಇದೀಗ ಅಂಪೈರ್ ನಿರ್ಧಾರ ಸರಿಯಾಗಿದೆಯೇ ಅಥವಾ ಇಲ್ಲವೇ ಎಂಬುದರ ಕುರಿತು ಸಾಕಷ್ಟು ಚರ್ಚೆ ನಡೆಯುತ್ತಿದೆ. ರೋಹಿತ್ ಶರ್ಮಾ ತನಗೆ ಸಿಕ್ಕಿ ಅವಕಾಶವನ್ನು ಸಂಪೂರ್ಣ ಲಾಭ ಪಡೆದುಕೊಂಡು 36 ಎಸೆತಗಳಲ್ಲಿ 53 ರನ್ ಗಳಿಸಿದರು. ರೋಹಿತ್ ಶರ್ಮಾ ಡಿಆರ್‌ಎಸ್ ತೆಗೆದುಕೊಂಡ ರೀತಿ ಬಗ್ಗೆ ಜನರು ಹಲವು ಪ್ರಶ್ನೆಗಳನ್ನು ಎತ್ತಿದ್ದಾರೆ. ಅವರು ಸಮಯಕ್ಕೆ ಸರಿಯಾಗಿ ಡಿಆರ್‌ಎಸ್ ತೆಗೆದುಕೊಳ್ಳಲಿಲ್ಲ ಎಂದು ಕೆಲವರು ಹೇಳುತ್ತಿದ್ದಾರೆ.

# ಕೊಹ್ಲಿಗೆ ಇರಿಸು ಮುರಿಸು ತಂದ ಸ್ವಸ್ತಿಕ್ ಚಿಕಾರ ಚೇಷ್ಟೆ

ಐಪಿಎಲ್ 2025ರಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಅದ್ಭುತ ಪ್ರದರ್ಶನ ನೀಡುತ್ತಿದೆ. ತಂಡವು ಆಡಿರುವ 10 ಪಂದ್ಯಗಳಲ್ಲಿ 7 ರಲ್ಲಿ ಗೆದ್ದು ಪಾಯಿಂಟ್ ಪಟ್ಟಿಯಲ್ಲಿ ಎರಡನೇ ಸ್ಥಾನದಲ್ಲಿದೆ. ಪ್ಲೇಆಫ್ ತಲುಪಲು ತಂಡಕ್ಕೆ ಕೇವಲ ಒಂದು ಗೆಲುವು ಮಾತ್ರ ಬೇಕಾಗಿದೆ. ಇದೀಗ ತನ್ನ 11 ನೇ ಪಂದ್ಯದಲ್ಲಿ ಸಿಎಸ್‌ಕೆ ತಂಡವನ್ನು ಎದುರಿಸಲಿರುವ ಆರ್‌ಸಿಬಿ, ಈ ಪಂದ್ಯವನ್ನು ಗೆದ್ದು ಪ್ಲೇಆಫ್‌ಗೆ ಟಿಕೆಟ್ ಖಚಿತಪಡಿಸಿಕೊಳ್ಳುವ ಇರಾದೆಯಲ್ಲಿದೆ. ಈ ನಡುವೆ ತಂಡದ ಸ್ಟಾರ್ ಬ್ಯಾಟ್ಸ್‌ಮನ್ ವಿರಾಟ್ ಕೊಹ್ಲಿಯ ವಿಡಿಯೋವೊಂದು ಸೋಶಿಯಲ್ ಮೀಡಿಯಾದಲ್ಲಿ ಸಖತ್ ವೈರಲ್ ಆಗಿದ್ದು, ಕೊಹ್ಲಿಗೆ ತಂಡದ ಸಹ ಆಟಗಾರನಿಂದಲೇ ಕಸಿವಿಸಿಯಾಗುತ್ತಿರುವುದು ಈ ವಿಡಿಯೋ ಮೂಲಕ ಸ್ಪಷ್ಟವಾಗಿದೆ. ವಾಸ್ತವವಾಗಿ ಈ ಸೀಸನ್‌ನಲ್ಲಿ ವಿರಾಟ್ ಕೊಹ್ಲಿ ಉತ್ತಮ ಫಾರ್ಮ್‌ನಲ್ಲಿದ್ದಾರೆ. ಈ ಸೀಸನ್‌ನಲ್ಲಿ ಅವರು ಇಲ್ಲಿಯವರೆಗೆ 6 ಅರ್ಧಶತಕಗಳನ್ನು ಗಳಿಸಿದ್ದಾರೆ. ಅದ್ಭುತ ಬ್ಯಾಟಿಂಗ್ ಮಾಡುವುದರ ಜೊತೆಗೆ, ವಿರಾಟ್ ತಂಡದಲ್ಲಿ ಆರೋಗ್ಯಕರ ಪರಿಸರವನ್ನು ನಿರ್ಮಿಸುವುದರಲ್ಲೂ ಪ್ರಮುಖ ಪಾತ್ರವಹಿಸುತ್ತಾರೆ. ಕೊಹ್ಲಿ ಹಿರಿಯರು, ಕಿರಿಯರು ಎನ್ನದೆ ಎಲ್ಲಾ ಆಟಗಾರರೊಂದಿಗೆ



ಒಂಟಿ ಆಗಿರುವುದಕ್ಕೆ ಬಿಡಲ್ಲ

ಉತ್ತಮ ಬಾಂಧವ್ಯ ಹೊಂದಿದ್ದಾರೆ. ಹಾಗಾಗಿ ಪಂದ್ಯದ ಸಮಯದಲ್ಲಾಗಲಿ ಅಥವಾ ಡ್ರೆಸಿಂಗ್ ರೂಂನಲ್ಲಾಗಲಿ ಯುವ ಆಟಗಾರರ ಜೊತೆಗೆ ಅನುಭವಿ ಆಟಗಾರರು ಕೂಡ ಕೊಹ್ಲಿ ಹಿಂದೆ ಮುಂದೆ ಸದಾ ಇರುತ್ತಾರೆ. ಇದೀಗ ಕೊಹ್ಲಿಯ ಸ್ನೇಹ ಮನೋಭಾವವೇ ಅವರಿಗೆ ದೊಡ್ಡ ತಲೆನೋವಾಗಿದೆ ಎಂಬುದು ಸಂದರ್ಶನವೊಂದರಲ್ಲಿ ಬಹಿರಂಗವಾಗಿದೆ.

**ಚಿಕಾರ ಇರಲೇಬಾರದು ಎಂದ ಕೊಹ್ಲಿ:** ಆರ್‌ಸಿಬಿ ಫ್ರಾಂಚೈಸಿ ತನ್ನ ಸೋಶಿಯಲ್ ಮೀಡಿಯಾ ಖಾತೆಯಲ್ಲಿ ವಿಡಿಯೋವೊಂದನ್ನು ಹಂಚಿಕೊಂಡಿದೆ. ಈ ವಿಡಿಯೋದಲ್ಲಿರುವಂತೆ ಕೊಹ್ಲಿಗೆ ಕೆಲವು ಪ್ರಶ್ನೆಗಳನ್ನು ಕೇಳಲಾಗಿದೆ. ಅದರಲ್ಲಿ ಒಂದು ಪ್ರಶ್ನೆ, ನೀವು ಯಾರೊಂದಿಗಾದರೂ ನಿಮ್ಮ ಕೊಠಡಿ ಹಂಚಿಕೊಳ್ಳಲು ಬಯಸುತ್ತೀರಾ ಎಂಬುದಾಗಿದೆ. ಇದಕ್ಕೆ ನಗುತ್ತಾ ಉತ್ತರಿಸಿದ ಕೊಹ್ಲಿ, ಸ್ವಸ್ತಿಕ್ ಚಿಕಾರ ಜೊತೆ ಕೊಠಡಿ ಹಂಚಿಕೊಳ್ಳಲು ಇಷ್ಟಪಡುವುದಿಲ್ಲ, ಏಕೆಂದರೆ ಅವನು ಎಂದಿಗೂ ನನ್ನನ್ನು ಒಂಟಿಯಾಗಿ ಬಿಡುವುದಿಲ್ಲ. ಈಗ ಅವನು ಇಡೀ ದಿನ ನನ್ನ ಜೊತೆ ಇರುತ್ತಾನೆ. ಇದರಿಂದಾಗಿ ಕೆಲವೊಮ್ಮೆ ನನಗೆ ಬೇಸರವಾಗುತ್ತದೆ' ಎಂದಿದ್ದಾರೆ. ಹಾಗೆಯೇ ಯಾರೊಂದಿಗೆ ಕೊಠಡಿ ಹಂಚಿಕೊಳ್ಳಲು ಇಷ್ಟಪಡುತ್ತೇನೆ ಎಂಬುದನ್ನು ವಿವರಿಸಿರುವ ಕೊಹ್ಲಿ, 'ನಾನು ತಂಡದ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ಜಿತೇಶ್ ಶರ್ಮಾ ಅವರೊಂದಿಗೆ ತಮ್ಮ ಕೊಠಡಿ ಹಂಚಿಕೊಳ್ಳಲು ಇಷ್ಟಪಡುತ್ತೇನೆ. ಏಕೆಂದರೆ ಅವರು ತುಂಬಾ ಬುದ್ಧಿವಂತ ಮತ್ತು ಸಂಯೋಜಿತ ಆಟಗಾರ. ಅವನ ಜೊತೆ ಕೊಠಡಿ ಹಂಚಿಕೊಳ್ಳಲು ನನಗೆ ಯಾವುದೇ ಸಮಸ್ಯೆ ಇರುವುದಿಲ್ಲ ಎಂದಿದ್ದಾರೆ. ಕೊಹ್ಲಿಯ ಈ ಬೋಲ್ಡ್ ಕಾಮೆಂಟ್ ಇದೀಗ ಸೋಶಿಯಲ್ ಮೀಡಿಯಾದಲ್ಲಿ ಸಾಕಷ್ಟು ವೈರಲ್ ಆಗುತ್ತಿದೆ.

**ವಿರಾಟ್ ಕೊಹ್ಲಿಯ ಪ್ರದರ್ಶನ:** ಈ ಸೀಸನ್‌ನಲ್ಲಿ ವಿರಾಟ್ ಕೊಹ್ಲಿಯ ಬ್ಯಾಟ್ ಅಬ್ಬರಿಸುತ್ತಿದೆ. ಇಲ್ಲಿಯವರೆಗೆ, ಆಡಿರುವ 10 ಪಂದ್ಯಗಳ 10 ಇನ್ನಿಂಗ್ಸ್‌ಗಳಲ್ಲಿ ಕೊಹ್ಲಿ, 63.28 ಸರಾಸರಿ ಮತ್ತು 138.87 ಸ್ಟ್ರೈಕ್ ರೇಟ್‌ನಲ್ಲಿ 443 ರನ್ ಗಳಿಸಿದ್ದಾರೆ, ಇದರಲ್ಲಿ 6 ಅರ್ಧಶತಕಗಳು ಸೇರಿವೆ.


**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news



**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**